24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 123 | ನವದೆಹಲಿ | ಬೆಲೆ ₹10 | ಅಕ್ಟೋಬರ್, 29, 2026, ಗುರುವಾರ

## ಒಳಪುಟಗಳಲ್ಲಿ

ಮತದಾರರ ಸೆಳೆಯಲು ಯೋಗಿ ಹೊಸ ಯೋಜನೆಗಳ ಘೋಷಣ - ಪು.4

ತ್ಯಾಜ್ಯ ವಿಲೇವಾರಿಯಲ್ಲಿ ಪಾರದರ್ಶಕತೆ, ಸಮರ್ಥ ನಿರ್ವಹಣೆ ಗುರಿ - ಬೆಂಗಳೂರಿನ 27 ವಿಧಾನಸಭೆ ಕ್ಷೇತ್ರಗಳನ್ನು 33 ಭಾಗವಾಗಿ ವಿಂಗಡಿಸಿ ನೂತನ ಟೆಂಡರ್: ಸಚಿವ ಕೃಷ್ಣಬೈರೇಗೌಡ - ಪು.5

# ಪಂಚಾಯಿತಿ ಮಟ್ಟದಲ್ಲಿ ಗ್ಯಾರಂಟಿ ಸಮಿತಿ ರಚಿಸಿ, ಫಲಾನುಭವಿಗಳ ಸಂಪರ್ಕ ಬೆಳೆಸಿ

**ಬೆಂಗಳೂರು, ಅ.28: ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ಪಂಚಾಯಿತಿ ಮಟ್ಟದಲ್ಲಿಯೂ ರಚಿಸಲಾಗುತ್ತಿದ್ದು, ಈ ಸಮಿತಿಗಳ ಸದಸ್ಯರು ಫಲಾನುಭವಿಗಳೊಂದಿಗೆ ನಿಕಟ ಸಂಪರ್ಕದಲ್ಲಿದ್ದು, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸಹಕಾರಿಯಾಗಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಸೂಚಿಸಿದ್ದಾರೆ.**

ಗೃಹ ಕಚೇರಿ ಕೃಷ್ಣಾದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಯ ಡ್ಯಾಶ್‌ಬೋರ್ಡ್ ಹಾಗೂ ಸಾಮಾಜಿಕ ಜಾಲತಾಣಗಳಿಗೆ ಚಾಲನೆ ನೀಡಿ ಮಾತನಾಡಿ, ಗ್ಯಾರಂಟಿ ಯೋಜನೆಗಳ ಸಾಮಾಜಿಕ ಜಾಲತಾಣಗಳಲ್ಲಿ ಕಾಲಕಾಲಕ್ಕೆ ಮಾಹಿತಿಗಳು, ಫಲಾನುಭವಿಗಳ ಅಭಿಪ್ರಾಯ ಹಂಚಿಕೊಳ್ಳುವ ಮೂಲಕ ಈ ಯೋಜನೆಗಳ ಕುರಿತ ಅಪಪ್ರಚಾರಕ್ಕೆ ಕಡಿವಾಣ ಹಾಕಬೇಕು ಎಂದು ಸೂಚಿಸಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಸದಸ್ಯರು ಪ್ರತಿ ಫಲಾನುಭವಿಯ ಮನೆಗೆ ಭೇಟಿ ನೀಡಿ, ಗ್ಯಾರಂಟಿ ಮನೆ ಸ್ಟಿಕರ್ ಹಾಕಬೇಕು. ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆಯ ಮೂಲಕ ಸರ್ಕಾರ ನೀಡುವ ಅನುಕೂಲಗಳನ್ನು ಮನವರಿಕೆ ಮಾಡಿ. ಸಾಮಾಜಿಕ ಜಾಲತಾಣಗಳನ್ನು ಎಲ್ಲ ಹಂತಗಳಲ್ಲಿ ಪರಿಣಾಮಕಾರಿಯಾಗಿ ಬಳಸಿ ಎಂದು ತಿಳಿಸಿದರು.

ಸಭೆಯಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ. ರೇವಣ್ಣ, ಉಪಾಧ್ಯಕ್ಷ ಪಿ. ಟಿ. ಪರಮೇಶ್ವರ ನಾಯ್ಕ, ದಿನೇಶ್ ಗೂಳಿಗೌಡ, ಮೆಹರೋಜ್ ಖಾನ್, ಜಿಬಿಎ ವ್ಯಾಪ್ತಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಜಿ.ಕೃಷ್ಣಪ್ಪ, ಸಿಎಂ ಸಂವಹನ ಸಲಹೆಗಾರ ದೀಪಕ್ ತಿಮ್ಮಯ್ಯ, ಇ-ಆಡಳಿತ ಕೇಂದ್ರದ ಸಿಇಓ ಭೂಬಾಲನ್ ಮತ್ತಿತರರು ಉಪಸ್ಥಿತರಿದ್ದರು.

**ಸಿಎಂ ಡಿ.ಕೆ. ಶಿವಕುಮಾರ್ ಸೂಚನೆ: ರಾಜ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಡ್ಯಾಶ್‌ಬೋರ್ಡ್, ಸಾಮಾಜಿಕ ಜಾಲತಾಣಗಳಿಗೆ ಚಾಲನೆ**



### ಗ್ಯಾರಂಟಿ ಕಟ್ಟೆ ಸೃಜನೆ

ಗ್ಯಾರಂಟಿ ಅನುಷ್ಠಾನ ಡ್ಯಾಶ್‌ಬೋರ್ಡ್ https://gsdashboard.karnataka.gov.in/ ನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಸರ್ಕಾರ ಮಾಡಿರುವ ವೆಚ್ಚದ ಬಗ್ಗೆ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ಲಭ್ಯವಿದೆ.

ಇದರೊಂದಿಗೆ ಗ್ಯಾರಂಟಿ ಯೋಜನೆಗಳ ಕುರಿತ ಸರ್ಕಾರಿ ಆದೇಶಗಳು, ಅಧಿಕಾರಿಗಳ ಸಂಪರ್ಕ ಮಾಹಿತಿ ಮೊದಲಾದವುಗಳು ಲಭ್ಯವಿದೆ. ಅಲ್ಲದೆ, ಯಶೋಗಾಥೆಗಳ ಭಂಡಾರವೂ ಲಭ್ಯವಿದೆ. ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಫಲಾನುಭವಿಗಳೊಂದಿಗೆ ಸಂವಾದ ನಡೆಸಿ, ಅಭಿಪ್ರಾಯ ಹಂಚಿಕೊಳ್ಳುವ ಗ್ಯಾರಂಟಿ ಕಟ್ಟೆ ಎಂಬ ವೇದಿಕೆಯನ್ನೂ ಸೃಜಿಸಲಾಗುವುದು ಎಂದು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್. ಎಂ. ರೇವಣ್ಣ ಅವರು ಮಾಹಿತಿ ನೀಡಿದರು.

## ನ.15ಕ್ಕೆ ಪ್ರಧಾನಿಯಿಂದ ಪಿಂಕ್ ಮೆಟ್ರೋ ರೈಲು ಮಾರ್ಗ ಉದ್ಘಾಟನೆ



**ಬೆಂಗಳೂರು, ಅ.28:** ಕಾಳೇನ ಅಗ್ರಹಾರದಿಂದ ನಾಗವಾರದವರೆಗೆ ಸಂಪರ್ಕ ಕಲ್ಪಿಸುವ ಪಿಂಕ್ ಮೆಟ್ರೋ ರೈಲು ಮಾರ್ಗವನ್ನು ಪ್ರಧಾನಿ ನರೇಂದ್ರ ಮೋದಿ ಅವರು ನವೆಂಬರ್ 15ರಂದು ಉದ್ಘಾಟಿಸಲಿದ್ದಾರೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಈ ಮಾರ್ಗ ಒಟ್ಟು 21.25 ಕಿ.ಮೀ ಉದ್ದವಿದ್ದು, ಒಟ್ಟು 18 ನಿಲ್ದಾಣಗಳಿವೆ. ಸದ್ಯ 7.5 ಕಿ.ಮೀ. ಎತ್ತರಿಸಿದ ಮಾರ್ಗ ಉದ್ಘಾಟನೆಗೆ ಸಿದ್ಧವಾಗಿದೆ. ಈ ಎಲಿವೇಟೆಡ್ ಮೆಟ್ರೋ ಮಾರ್ಗವನ್ನು ಪ್ರಧಾನಿಯವರು ಉದ್ಘಾಟನೆ ಮಾಡಲಿದ್ದು, ಉಳಿದ 13.76 ಕಿ.ಮೀ. ಭೂಗತ ಸುರಂಗ ಮಾರ್ಗ ಕಾಮಗಾರಿಯಲ್ಲಿದ್ದು, ಈ ಮಾರ್ಗ ಮುಂದಿ ವರ್ಷ ಉದ್ಘಾಟನೆ ಆಗುವ ಸಾಧ್ಯತೆ ಇದೆ.

ಡೇರಿ ಸರ್ಕಲ್‌ನಿಂದ ನಾಗವಾರ, ಶಿವಾಜಿನಗರ ಹಾಗೂ ಕಂಟೋನ್ಮೆಂಟ್ ಮೂಲಕ ನಾಗವಾರ ವರೆಗೂ ಸಂಪರ್ಕ ಕಲ್ಪಿಸಲಿದೆ.

## 87 ಕೆಎಎಸ್ ಅಧಿಕಾರಿಗಳ ವರ್ಗಾವಣೆಗೆ ಸಿಎಂ ಆದೇಶ

**ಬೆಂಗಳೂರು, ಅ.28:** ಅಭಿವೃದ್ಧಿ ಮತ್ತು ಸಾರ್ವಜನಿಕ ಸೇವೆಯಲ್ಲಿ ದಕ್ಷತೆ ಹೆಚ್ಚಿಸುವ ನಿಟ್ಟಿನಲ್ಲಿ 87 ಕೆಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆದೇಶ ಮಾಡಿದ್ದಾರೆ. ವರ್ಗಾವಣೆಯಾಗಿರುವ ಅಧಿಕಾರಿಗಳ ಪೈಕಿ 9 ಮಂದಿಯನ್ನು ಸಹಾಯಕ ಆಯುಕ್ತರಾಗಿ ಹಾಗೂ 4 ಮಂದಿಯನ್ನು ಹೆಚ್ಚುವರಿ ಜಿಲ್ಲಾಧಿಕಾರಿಗಳನ್ನಾಗಿ ನಿಯೋಗಿಸಲಾಗಿದೆ. ಉಳಿದಂತೆ ನಗರಾಭಿವೃದ್ಧಿ ಇಲಾಖೆಗೆ 15 ಅಧಿಕಾರಿಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ 13 ಅಧಿಕಾರಿಗಳನ್ನು ವರ್ಗಾವಣೆ ಮಾಡಲಾಗಿದೆ. ಹಾಗೂ ಇನ್ನುಳಿದ ಅಧಿಕಾರಿಗಳನ್ನು ರಾಜ್ಯದ ವಿವಿಧೆಡೆ ವಿವಿಧ ಇಲಾಖೆಗಳು ಹಾಗೂ ಆಡಳಿತಾತ್ಮಕ ಸ್ಥಾನಗಳಿಗೆ ನಿಯೋಜಿಸಲಾಗಿದೆ. ನಗರ ಹಾಗೂ ಗ್ರಾಮೀಣಾಭಿವೃದ್ಧಿಗೆ ಚುರುಕು ನೀಡುವುದು ಹಾಗೂ ಸರ್ಕಾರದ ಯೋಜನೆಗಳ ತ್ವರಿತ ಅನುಷ್ಠಾನ ಹಾಗೂ ಸಾರ್ವಜನಿಕರ ಅಹವಾಲುಗಳನ್ನು ತ್ವರಿತ ವಿಲೇವಾರಿ ಮಾಡುವುದು ಈ ವರ್ಗಾವಣೆ ಉದ್ದೇಶವಾಗಿದೆ.

## ಪರಿಷತ್ ಚುನಾವಣೆ ಫಲಿತಾಂಶ: ಮತದಾರರ ತೀರ್ಮಾನ ಗೌರವಿಸುತ್ತೇನೆ

**ಬೆಂಗಳೂರು, ಅ.28:** ಪರಿಷತ್ ಚುನಾವಣೆಯಲ್ಲಿ ಮತದಾರರು ಕೊಟ್ಟಿರುವ ಸಂದೇಶವನ್ನು ಕೂಲಂಕುಷವಾಗಿ ಅಧ್ಯಯನ ಮಾಡಿ ಸರಿಪಡಿಸಿಕೊಳ್ಳುತ್ತೇವೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಜತೆ ಬುಧವಾರ ಮಾತನಾಡಿ, ವಿಧಾನ ಪರಿಷತ್ ಪದವೀಧರರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಮತದಾರರು ಕೊಟ್ಟಿರುವ ತೀರ್ಮಾನವನ್ನು ಗೌರವದಿಂದ ಸ್ವೀಕಾರ ಮಾಡುತ್ತೇವೆ. ನಮ್ಮ ಪಕ್ಷಕ್ಕೆ ಎರಡು ಸ್ಥಾನಗಳು ಬರುವ ನಿರೀಕ್ಷೆಯಿತ್ತು. ಅದಾಗಿಲ್ಲ. ನಮ್ಮ ಪಕ್ಷ ಸೋತಿದ್ದರೂ ಮತಗಳು ಚೆನ್ನಾಗಿಯೇ ಬಂದಿವೆ. ಬೆಂಗಳೂರು ಶಿಕ್ಷಕರ ಕ್ಷೇತ್ರದ ಫಲಿತಾಂಶ ನಿರೀಕ್ಷಿಸಿರಲಿಲ್ಲ. ಈ ಬಗ್ಗೆ ಪರಿಶೀಲನೆ ಮಾಡುತ್ತೇವೆ" ಎಂದರು.

**ನಾವು ಕಲಿಯಬೇಕಾದ ವಿಚಾರಗಳಿವೆ:** ಬಿಜೆಪಿ ಮತ್ತು ಜೆಡಿಎಸ್‌ನವರು. ಇದು ಭವಿಷ್ಯದ ಮುನ್ಸೂಚನೆ ಎನ್ನುತ್ತಿದ್ದಾರೆ. ಆದರೆ ಚನ್ನಪಟ್ಟಣ ಮತ್ತು ಶಿಗ್ಗಾಂವಿ ಬಗ್ಗೆ ಏನು ಉತ್ತರ ಕೊಡುತ್ತಾರೆ, ಅದು ಕೂಡ ಮುನ್ಸೂಚನೆಯೇ ಅಲ್ಲವೇ ಎಂದು ಪ್ರಶ್ನಿಸಿದರು. ನಾವು ಕಲಿಯಬೇಕಾದ ವಿಚಾರಗಳಿವೆ. ಈ ಬಗ್ಗೆ ಪರಿಶೀಲಿಸಿ, ನಮ್ಮ ಕಾರ್ಯಕರ್ತರನ್ನು ಹೇಗೆ ತಯಾರು ಮಾಡಬೇಕೆಂದೂ ತಿಳಿದಿದೆ ಎಂದರು.

**ಮತಪತ್ರ ಚುನಾವಣೆ: ನೂತನ ಕ್ರಿಯಾಯೋಜನೆ:** ನಾಲ್ಕು ವಿಧಾನ ಪರಿಷತ್ ಸ್ಥಾನಗಳ ಚುನಾವಣೆಯನ್ನು ಸಂಪೂರ್ಣವಾಗಿ ಮತಪತ್ರ ಮೂಲಕವೇ ನಡೆಸಲಾಗಿದ್ದರೂ ಕಾಂಗ್ರೆಸ್ ಸೋತಿರುವುದು ಪಕ್ಷಕ್ಕೆ ಹಿನ್ನಡೆಯಾಗಿದೆ ಎಂಬ ಬಿಜೆಪಿ, ಜೆಡಿಎಸ್ ಹೇಳಿಕೆ ಬಗ್ಗೆ ಕೇಳಿದಾಗ, "ಹೌದು, ಮತಪತ್ರದ ಮೂಲಕ ಚುನಾವಣೆಯ ಅಗತ್ಯವಿದೆ. ಚುನಾವಣಾ ಪ್ರಕ್ರಿಯೆಯಲ್ಲಿ ಹಲವಾರು ಸಮಸ್ಯೆಗಳಿವೆ. ನವೆಂಬರ್ ನಂತರ ನಮ್ಮ ಪಕ್ಷ ಈ ಕುರಿತು ಹೊಸ ಕ್ರಿಯಾ ಯೋಜನೆಯನ್ನು ಹೊರತರಲಿದೆ. ಸಮುದಾಯವಾರು ಶಾಸಕರ ಸಭೆ ಕರೆದಿರುವ ಬಗ್ಗೆ ಕೇಳಿದಾಗ, "ಸಮುದಾಯಗಳ ಸಮಸ್ಯೆಗಳು ಹಾಗೂ ನ್ಯಾಯಾಲಯದ ತೀರ್ಪಿನ ಬಗ್ಗೆ ಚರ್ಚಿಸಬೇಕಿದ್ದು, ಅದಕ್ಕಾಗಿ ಸಭೆ ಕರೆಯಲಾಗಿದೆ" ಎಂದರು.

**ಎರಡು ಸ್ಥಾನ ಗೆಲ್ಲುವ ನಿರೀಕ್ಷೆಯಿತ್ತು, ಬೆಂಗಳೂರು ಶಿಕ್ಷಕರ ಕ್ಷೇತ್ರ ಫಲಿತಾಂಶ ನಿರೀಕ್ಷಿಸಿರಲಿಲ್ಲ: ಸಿಎಂ ಡಿ.ಕೆ. ಶಿವಕುಮಾರ್**



### ಸರ್ವಪಕ್ಷ ನಿಯೋಗ ಭೇಟಿಗೆ ಬೆಂಗಳೂರಿನಲ್ಲೇ ಪ್ರಧಾನಿಗೆ ಕೋರಿಕೆ

ಬರ ಸಂಬಂಧ ಕೇಂದ್ರಕ್ಕೆ ತಂಡ ಕೊಂಡೊಯ್ಯಲು ನವೆಂಬರ್ 1ರವರೆಗೆ ಕಾಯುತ್ತೇವೆ ಪ್ರಧಾನಿಗಳು ಸಮಯ ಕೊಟ್ಟರೆ ಸರಿ. ಇಲ್ಲ, ನ.15ರಂದು ಪ್ರಧಾನಿ ಮೋದಿ ಅವರು ಮೆಟ್ರೋ ಮಾರ್ಗ ಉದ್ಘಾಟನೆಗೆ ಬೆಂಗಳೂರಿಗೆ ಆಗಮಿಸಲಿದ್ದು, ಆವಾಗಲೇ ಸರ್ವಪಕ್ಷ ನಿಯೋಗ ಭೇಟಿಯಾಗಲು ಸಮಯ ಕೇಳುತ್ತೇನೆ ಹಾಗೂ ಬರ ಪರಿಹಾರ ಕೊಡಿ ಎಂದು ಮನವಿ ಮಾಡುತ್ತೇನೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### ಎಸ್‌ಐಆರ್ ಮತದಾರರ ಅಂತಿಮಪಟ್ಟಿ ಬಗ್ಗೆ ಆಕ್ಷೇಪ

ಚುನಾವಣಾ ಆಯೋಗದ ಅಂತಿಮ ಪಟ್ಟಿ ಹೊರಡಿಸಿದ್ದು ಸರ್ಕಾರದಿಂದ ಆಕ್ಷೇಪಣೆಗಳಿವೆಯೇ ಎಂದು ಕೇಳಿದಾಗ "ಖಂಡಿತ ಆಕ್ಷೇಪಣೆಗಳಿವೆ. ಅವುಗಳನ್ನು ಸಲ್ಲಿಸಲು ಅವಕಾಶ ನೀಡಿದ್ದಾರೆ. ಫಾರಂ 7 ವಿಚಾರದಲ್ಲಿ ನಾವು ಸಲ್ಲಿಸಿದ್ದ ಆಕ್ಷೇಪಣೆಗಳನ್ನು ಆಯೋಗ ಒಪ್ಪಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

## ದೇಶೀಯ ಕಂಟೇನರ್ ತಯಾರಿಕೆ ಉತ್ತೇಜನಕ್ಕೆ 10,000 ಕೋಟಿ ರೂ.



**ಕೇಂದ್ರ ಸಚಿವ ಸಂಪುಟ ಒಪ್ಪಿಗೆ**

**ದೆಹಲಿ, ಅ.28:** ಭಾರತದಲ್ಲಿ ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕವಾದ ಕಂಟೇನರ್ ತಯಾರಿಕಾ ಉದ್ಯಮವನ್ನು ನಿರ್ಮಿಸಲಾಗಿದೆ, ಆಮದುಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಹಾಗೂ ಕಡಲ ಮತ್ತು ಲಾಜಿಸ್ಟಿಕ್ಸ್ ಪೂರೈಕೆ ಸರಪಳಿಗಳನ್ನು ಬಲಪಡಿಸಲು, ಕೇಂದ್ರ ಸಚಿವ ಸಂಪುಟವು ಬುಧವಾರ 10,000 ಕೋಟಿ ರೂ. ಮೌಲ್ಯದ ಕಂಟೇನಾರ್ ತಯಾರಿಕಾ ಉತ್ತೇಜನ ಯೋಜನೆಗೆ (CMPS) ಅನುಮೋದನೆ ನೀಡಿದೆ.

2039-40ರ ಆರ್ಥಿಕ ವರ್ಷದವರೆಗೆ ಜಾರಿಯಲ್ಲಿರುವ ಈ ಯೋಜನೆಯು, ಹೊಸ ಉತ್ಪಾದನಾಘಟಕಗಳನ್ನು ಸ್ಥಾಪಿಸಲು ಮತ್ತು ಪ್ರಸ್ತುತ ಉತ್ಪಾದನಾ ಘಟಕಗಳನ್ನು ವಿಸ್ತರಿಸಲು ಆರ್ಥಿಕ ನೆರವು ನೀಡಲಾಗುವುದು. ಸಚಿವ ಸಂಪುಟ ಸಭೆಯ ನಂತರ ಈ ನಿರ್ಧಾರವನ್ನು ಪ್ರಕಟಿಸಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ದೇಶೀಯ ಉತ್ಪಾದನಾ ಸಾಮರ್ಥ್ಯಗಳನ್ನು ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಭಾರತದಲ್ಲಿ ತಯಾರಿಸಿದ ಶಿಪ್ಪಿಂಗ್ ಕಂಟೇನರ್‌ಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ದೇಶೀಯ ಉತ್ಪಾದನೆ ಮತ್ತು ಪೂರೈಕೆ ಸರಪಳಿ ಭದ್ರತೆಯನ್ನು ಬಲಪಡಿಸುವ ಸರ್ಕಾರದ ವಿಶಾಲ ಪ್ರಯತ್ನದ ಭಾಗವಾಗಿ, 2026-27ರ ಕೇಂದ್ರ ಬಜೆಟ್ನಲ್ಲಿ ಈ ಯೋಜನೆಯನ್ನು ಘೋಷಿಸ ಲಾಗಿದೆ. ಈ ಉಪಕ್ರಮವು ಭಾರತದ ವಾರ್ಷಿಕ ಕಂಟೇನರ್ ಉತ್ಪಾದನಾ ಸಾಮರ್ಥ್ಯವನ್ನು ಸುಮಾರು ಹತ್ತು ಪಟ್ಟು ಹೆಚ್ಚಿಸಿ, 7.5 ಲಕ್ಷ ಟ್ವೆಂಟಿ-ಫೂಟ್ ಈಕ್ವಿವೇಲೆಂಟ್ ಯೂನಿಟ್‌ಗಳಿಗೆ ತಲುಪುವ ಗುರಿಯನ್ನು ಹೊಂದಿದೆ. ಈ ವಿಸ್ತರಣೆಯು ಅಂತರರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಾತ್ಮಕವಾದ ತಯಾರಿಕಾ ನೆಲೆಯನ್ನು ಸೃಷ್ಟಿಸುವ ನಿರೀಕ್ಷೆಯಿದೆ ಮತ್ತು ಶಿಪ್ಪಿಂಗ್ ಕಂಟೇನರ್‌ಗಳಿಗಾಗಿ ಭಾರತವನ್ನು ಜಾಗತಿಕ ರಫ್ತು ಕೇಂದ್ರವಾಗಿ ರೂಪಿಸುವ ಸಾಧ್ಯತೆಯಿದೆ. ಈ ಯೋಜನೆಯು ಸುಮಾರು 3,000 ಉದ್ಯೋಗಗಳು ಮತ್ತು 50,000 ಕ್ಕೂ ಹೆಚ್ಚು ಪರೋಕ್ಷಾವಕಾಶಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ. ಇದು ಕೇವಲ ಉತ್ಪಾದನಾ ಘಟಕಗಳಿಗೆ ಮಾತ್ರ ಸೀಮಿತವಾಗದೆ, ಪೂರಕ ಉದ್ಯಮಗಳು, ಬಿಡಿಭಾಗಗಳ ಪೂರೈಕೆದಾರರು, ಸಾರಿಗೆ ಸೇವೆಗಳು ಮತ್ತು ಕಂಟೇನರ್ ಉತ್ಪಾದನೆ ಮತ್ತು ಲಾಜಿಸ್ಟಿಕ್ಸ್ ಮೌಲ್ಯಗಳು ಸರಪಳಿಗೆ ಇತರ ವ್ಯವಹಾರಗಳಿಗೆ ವಿಸ್ತರಿಸಲಿವೆ.

## ವಿಧಾನ ಪರಿಷತ್ ಚುನಾವಣೆ 2028ಕ್ಕೆ ಶುಭಸೂಚನೆ: ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಭವಿಷ್ಯ



**ನವದೆಹಲಿ, ಅ.28:** ಕರ್ನಾಟಕ ವಿಧಾನ ಪರಿಷತ್ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳು ಭರ್ಜರಿ ಜಯಭೇರಿ ಬಾರಿಸಿರುವುದು ಬರುವ 2028ರ ಚುನಾವಣೆಗೆ ಇದು ಶುಭ ಸೂಚನೆಯಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಪದವೀಧರ ಮತ್ತು ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಪ್ರಜ್ಞಾವಂತ, ಶಿಕ್ಷಕ ಮತ್ತು ಪದವಿಧರ ಮತದಾರರು ಕಾಂಗ್ರೆಸ್ ಅನ್ನು ಸಂಪೂರ್ಣ ತಿರಸ್ಕರಿಸಿದ್ದಾರೆ. ಅಂದರೆ ರಾಜ್ಯದಲ್ಲಿ ಸಂಪೂರ್ಣ ಆಡಳಿತ ವಿರೋಧಿ ಅಲೆ ಇರುವುದು ಇದರಿಂದಲೇ ಸ್ಪಷ್ಟವಾಗಿದೆ ಎಂದಿದ್ದಾರೆ.

ವಿಧಾನ ಪರಿಷತ್ ಚುನಾವಣೆಯಲ್ಲಿನ ಎನ್‌ಡಿಎ ಜಯಭೇರಿ ಶಿಕ್ಷಕ ಮತ್ತು ಪದವೀಧರ ಮತದಾರರು ಪಕ್ಷದ ಮೇಲಿಟ್ಟಿರುವ ವಿಶ್ವಾಸದ ಪ್ರತೀಕವಾಗಿದೆ ಎಂದಿರುವ ಸಚಿವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಎನ್‌ಡಿಎ ಸದಾ ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಾ, ಮತದಾರರ ಹಿತಾಸಕ್ತಿ ಮತ್ತು ಕ್ಷೇತ್ರದ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು. ಕಾಂಗ್ರೆಸ್ಸಿಗರು ವೋಟ್ ಚೋರಿ ಎಂದು ಎಷ್ಟೇ ಬೊಬ್ಬೆ ಹೊಡೆದರೂ ಪ್ರಜ್ಞಾವಂತ ಮತದಾರರೇ ಇದೀಗ ಅದಕ್ಕೆ ಪ್ರತ್ಯುತ್ತರ ಕೊಟ್ಟಿದ್ದಾರೆ. ಹಾಗಿದ್ದರೂ ಕಾಂಗ್ರೆಸ್ ನಾಯಕರು ಹಾಗೂ ಅಭ್ಯರ್ಥಿಗಳು ಮತ್ತೆ ವೋಟ್ ಚೋರಿಯ ನೆಪ ಹೇಳಿ ಸೋತ ಮುಖ ಒರೆಸಿಕೊಳ್ಳಲು ಯತ್ನಿಸುತ್ತಿದ್ದಾರೆ ಎಂದು ಟೀಕಿಸಿದರು.

## ಸರಕು ಸಾಗಣೆಗೆ ಇ.ವಿ.ಗಳ ನಿಯೋಜನೆ ಮಹತ್ವದ ಹೆಜ್ಜೆ

**ನವದೆಹಲಿ, ಅ.28:** ಸರಕು ಸಾಗಣೆ ವಲಯದಲ್ಲಿ ಎಲೆಕ್ಟ್ರಿಕ್ ವಾಹನ (ಇವಿ)ಗಳ ನಿಯೋಜನೆಯನ್ನು ಹೆಚ್ಚಿಸುವ ದೃಷ್ಟಿಯಿಂದ ಕೇಂದ್ರ ಸರ್ಕಾರ ಅನೇಕ ಉದ್ಯಮಸ್ನೇಹಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ನವದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಟಾಟಾ ಮೋಟಾರ್ಸ್‌ನ 3000 ಎಲೆಕ್ಟ್ರಿಕ್ ಟ್ರಕ್‌ಗಳನ್ನು ಅಮೆಜಾನ್ ಸರಕು ಸಾಗಣೆಗೆ ನಿಯೋಜಿಸುವ ಉಪಕ್ರಮಕ್ಕೆ ಹಸಿರು ನಿಶಾನೆ ತೋರಿದ ನಂತರ ಮಾತನಾಡಿದ ಅವರು, ಸರಕು ಸಾಗಣೆ ವಲಯದಲ್ಲಿ ಇದೊಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ. ರಾಷ್ಟ್ರದ ಅಭಿವೃದ್ಧಿ ದೃಷ್ಟಿಯಲ್ಲಿ ಮಹತ್ವದ ಮೈಲುಗಲ್ಲು ಎಂಬುದು ನನ್ನ ಅಭಿಪ್ರಾಯ. ಪ್ರಧಾನಿಗಳಾದ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಭಾರತವು ಎಲೆಕ್ಟ್ರಿಕ್ ವಾಹನ ಕ್ಷೇತ್ರಕ್ಕೆ ಅತ್ಯಂತ ವೇಗವಾಗಿ ತೆರೆದುಕೊಳ್ಳುತ್ತಿರುವ ರಾಷ್ಟ್ರವಾಗಿದ್ದು, ಇದರ ಪಾಲುದಾರರಾದ ಅಮೆಜಾನ್ ಮತ್ತು ಟಾಟಾ ಮೋಟರ್ಸ್ ಕಂಪನಿಗಳನ್ನು ಹೃದಯಪೂರ್ವಕವಾಗಿ ಅಭಿನಂದಿಸುತ್ತೇನೆ ಎಂದರು.



**ಟಾಟಾ ಮೋಟಾರ್ಸ್‌ನ 3000 ಎಲೆಕ್ಟ್ರಿಕ್ ಟ್ರಕ್‌ಗಳಿಗೆ ಸಚಿವ ಎಚ್.ಡಿ. ಕುಮಾರಸ್ವಾಮಿ ಹಸಿರು ನಿಶಾನೆ**

ಸಾಮೂಹಿಕ ಸಾರಿಗೆ ವಲಯದಲ್ಲಿ ಎಲೆಕ್ಟ್ರಿಕ್ ವಾಹನಗಳ ನಿಯೋಜನೆಯನ್ನು ಮತ್ತಷ್ಟು ಉತ್ತೇಜಿಸಲು ಕೇಂದ್ರ ಸರಕಾರ ಬದ್ಧವಾಗಿದೆ. ಆರ್ಥಿಕ ಪ್ರಗತಿಯ ದೃಷ್ಟಿಯಿಂದ ಎಲೆಕ್ಟ್ರಿಕ್ ಟ್ರಕ್‌ಗಳ ಬಳಕೆ ಅತ್ಯಂತ ಪರಿಣಾಮಕಾರಿಯಾಗಿದೆ. ಬದಲಾಗುತ್ತಿರುವ ಜಾಗತಿಕ ಅಗತ್ಯಗಳಿಗೆ ಮತ್ತು ದೇಶೀಯ ಬೇಡಿಕೆಗಳಿಗೆ ತಕ್ಕಂತೆ ಕೇಂದ್ರ ಸರ್ಕಾರವು ನೀತಿಗಳನ್ನು ರೂಪಿಸುತ್ತಾ ಸದಾ ಕಾಲ ಉದ್ಯಮಕ್ಕೆ ಬೆನ್ನೆಲುಬಾಗಿ ನಿಂತಿದೆ. ಈ ನಿಟ್ಟಿನಲ್ಲಿ ಪಿಎಂ ಇ-ಡ್ರೈವ್ ಸೇರಿದಂತೆ ಅನೇಕ ಯೋಜನೆಗಳನ್ನು ಅನುಷ್ಠಾನಕ್ಕೆ ತಂದು ಎಲೆಕ್ಟ್ರಿಕ್ ವಾಹನ ಉದ್ಯಮವನ್ನು ಬಲಪಡಿಸಲಾಗಿದೆ ಎಂದು ಕುಮಾರಸ್ವಾಮಿ ಹೇಳಿದರು.

ಎರಡು ಸಂಸ್ಥೆಗಳ ಪ್ರಮುಖರಾದ ಸುಶಾಂತ್ ನಾಯಕ್, ರಾಜೇಶ್ ಕೌಲ್, ಅಭಿನವ್ ಸಿಂಗ್, ಕಿಶೋರ್ ಲಂಕಾ ಅವರುಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಹಕಾರಿ ಕ್ಷೇತ್ರದಲ್ಲಿ ಕೌಶಲ್ಯ, ವೃತ್ತಿಪರತೆಗೆ ಡಿಪ್ಲೊಮಾ ಕೋರ್ಸ್

**ಬೆಂಗಳೂರು, ಅ.28:** ಸಹಕಾರ ಸಂಸ್ಥೆಗಳ ಲೆಕ್ಕಪರಿಶೋಧನೆಯಲ್ಲಿ ಹೆಚ್ಚಿನ ಪಾರದರ್ಶಕತೆ ಹೆಚ್ಚಿಸಲು ಹಾಗೂ ಸಹಕಾರಿ ಕ್ಷೇತ್ರಕ್ಕೆ ಕೌಶಲ್ಯಯುತ ಹಾಗೂ ವೃತ್ತಿಪರ ಮಾನವ ಸಂಪನ್ಮೂಲವನ್ನು ಒದಗಿಸುವ ಉದ್ದೇಶದಿಂದ ರಾಜ್ಯ ಸಹಕಾರ ಇಲಾಖೆಯ ಸಹಯೋಗದೊಂದಿಗೆ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಆಡಿಟ್ ಎಂಬ ಆರು ತಿಂಗಳ ಅವಧಿಯ ನೂತನ ಡಿಪ್ಲೊಮಾ ಕೋರ್ಸ್ ಆರಂಭಿಸುವುದಾಗಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಘೋಷಿಸಿದೆ.

**■ ಸಚಿವ ಲಕ್ಷ್ಮಣ ಸವದಿ, ಸಹಕಾರ ಮಂಡಳ ಅಧ್ಯಕ್ಷ ಜಿ.ಟಿ. ದೇವೇಗೌಡ ಮಾಹಿತಿ**

ಈ ಕುರಿತು ಜಂಟಿ ಸುದ್ದಿಗೋಷ್ಠಿಯಲ್ಲಿ ಸಹಕಾರ ಸಚಿವ ಲಕ್ಷ್ಮಣ ಸವದಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಟಿ.ದೇವೇಗೌಡ ಮಾಹಿತಿ ಹಂಚಿಕೊಂಡಿದ್ದಾರೆ.

ಸಹಕಾರ ಕಾಯ್ದೆ ಮತ್ತು ನಿಯಮಗಳು, ಅಕೌಂಟಿಂಗ್ ಆಂಡ್ ಫೈನಾನ್ಷಿಯಲ್ ಮ್ಯಾನೇಜ್‌ಮೆಂಟ್, ಕೋ-ಆಪರೇಟಿವ್ ಆಡಿಟಿಂಗ್, ಕೋ-ಆಪರೇಟಿವ್ ಇಕೋ-ಸಿಸ್ಟಂ ಹಾಗೂ ಟ್ಯಾಲಿ ಸೇರಿದಂತೆ ಇತ್ತೀಚಿನ ಆಧುನಿಕ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳ ಕುರಿತು ಈ ಕೋರ್ಸ್‌ನಲ್ಲಿ ಪ್ರಾಯೋಗಿಕ ತರಬೇತಿ ನೀಡಲಾಗುತ್ತದೆ. ಕೇವಲ ಸಿದ್ಧಾಂತಕ್ಕೆ ಸೀಮಿತವಾಗದೆ ತರಗತಿ ಬೋಧನೆ, ಕೇಸ್ ಸ್ಟಡೀಸ್, ಫೀಲ್ಡ್ ಸ್ಟಡೀಸ್ ಮತ್ತು ಪ್ರಾಯೋಗಿಕ ಲೆಕ್ಕಪರಿಶೋಧನಾ ಕೆಲಸದ ಅನುಭವವನ್ನು ಈ ಕೋರ್ಸ್ ಒಳಗೊಂಡಿರಲಿದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿಕಾಂ, ಬಿಬಿಎಂ ಅಥವಾ ಯಾವುದೇ ಪದವಿಯಲ್ಲಿ ಅಕೌಂಟೆನ್ಸಿಯನ್ನು ಒಂದು ವಿಷಯವಾಗಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳು ಈ ತರಬೇತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರಲಿದ್ದಾರೆ ಎಂದು ತಿಳಿಸಿದ್ದಾರೆ.



### ವಾರ್ಷಿಕ 500 ಲೆಕ್ಕ ಪರಿಶೋಧಕರ ಸೃಷ್ಟಿಸುವ ಗುರಿ

ಈ ಕೋರ್ಸ್‌ನ ಪ್ರವೇಶ ಶುಲ್ಕವು ಸಾಮಾನ್ಯ ಹಾಗೂ ಇತರೆ ಅಭ್ಯರ್ಥಿಗಳಿಗೆ 10 ಸಾವಿರ ರೂಪಾಯಿಗಳಾಗಿದ್ದು, ಬಿಪಿಎಲ್, ಎಸ್‌ಸಿ ಹಾಗೂ ಎಸ್‌ಟಿ ವರ್ಗದ ಅಭ್ಯರ್ಥಿಗಳಿಗೆ ಸಂಪೂರ್ಣ ಶುಲ್ಕ ವಿನಾಯಿತಿ ನೀಡಲಾಗಿದೆ. ವಾರ್ಷಿಕವಾಗಿ 500 ಲೆಕ್ಕಪರಿಶೋಧಕರನ್ನು ಸೃಷ್ಟಿಸುವ ಗುರಿ ಹೊಂದಲಾಗಿದ್ದು, ಅರ್ಜಿಗಳನ್ನು ಗಮನಿಸಿ ಮುಂದಿನ ಯೋಜನೆ ರೂಪಿಸಲಿದ್ದೇವೆ ಎಂದು ಸಚಿವ ಲಕ್ಷ್ಮಣ ಸವದಿ ವಿವರಿಸಿದ್ದಾರೆ.

ಅರ್ಜಿ ಸಲ್ಲಿಕೆಯು ಇದೇ ಅಕ್ಟೋಬರ್ 30ರಿಂದ ಆರಂಭವಾಗಲಿದ್ದು, ಪ್ರಕಟಣೆ ಹೊರಬಂದ ದಿನಾಂಕದಿಂದ 15 ದಿನಗಳ ಒಳಗಾಗಿ ಆಸಕ್ತರು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಹಾಮಂಡಳದ ಅಧಿಕೃತ ವೆಬ್‌ಸೈಟ್ https://dca.kscfl.in ಅಥವಾ ಬೆಂಗಳೂರಿನ ಕಚೇರಿಯನ್ನು ಸಂಪರ್ಕಿಸಬಹುದು.

## ಗ್ರಾಮೀಣ ಆರೋಗ್ಯ ಸೇವೆಗೆ ಶೀಘ್ರವೇ 750 ನೂತನ ಆಂಬ್ಯುಲೆನ್ಸ್‌ಗಳ ನಿಯೋಜನೆ: ಸಚಿವ ಯು.ಟಿ.ಖಾದರ್



**ಕಲಬುರಗಿ, ಅ.28:** ಗ್ರಾಮೀಣ ಪ್ರದೇಶದ ಜನರಿಗೆ ತ್ವರಿತ ಹಾಗೂ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ರಾಜ್ಯದಲ್ಲಿ ಶೀಘ್ರದಲ್ಲೇ 750 ನೂತನ ಆಂಬ್ಯುಲೆನ್ಸ್‌ಗಳನ್ನು ಸೇವೆಗೆ ನಿಯೋಜಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಹಾಗೂ ವಕ್ಫ್ ಸಚಿವ ಯು.ಟಿ.ಖಾದರ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತು ಸಿಎಂ ಜತೆ ಚರ್ಚಿಸಲಾಗಿದ್ದು, ಡಿಸೆಂಬರ್ ಒಳಗೆ ಆಂಬ್ಯುಲೆನ್ಸ್ ಸೇವೆ ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ. ನಿಗದಿತ 20 ನಿಮಿಷಗಳೊಳಗೆ ಆಂಬ್ಯುಲೆನ್ಸ್ ತಲುಪದಿದ್ದರೆ ಸಂಬಂಧಿಸಿದವರಿಗೆ ದಂಡ ವಿಧಿಸುವ ವ್ಯವಸ್ಥೆಯನ್ನೂ ಜಾರಿಗೆ ತರಲಾಗುವುದು ಎಂದರು.

ಗ್ರಾಮೀಣ ಪ್ರದೇಶಗಳಲ್ಲೇ ತುರ್ತು ಚಿಕಿತ್ಸೆ ದೊರೆಯುವಂತಾಗಲು ಪ್ರತಿ ತಾಲೂಕಿನಲ್ಲಿ ಐದು ಹಾಸಿಗೆಗಳ ಐಸಿಯು ಘಟಕಗಳನ್ನು ನಿರ್ಮಿಸಿ ಅಭಿವೃದ್ಧಿಪಡಿಸಲಾಗುವುದು. ಇದರಿಂದ ಜಿಲ್ಲಾಮಟ್ಟದ ಆಸ್ಪತ್ರೆಗಳ ಮೇಲಿನ ಒತ್ತಡ ಕಡಿಮೆಯಾಗಲಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ನರ್ಸ್‌ಗಳ ಕೊರತೆ ನೀಗಿಸಲು ಒಂದು ಸಾವಿರ ವೈದ್ಯರು ಹಾಗೂ ನರ್ಸ್‌ಗಳನ್ನು ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ ಎಂದರು.

**ಅಲ್ಪಸಂಖ್ಯಾತರ ಕಲ್ಯಾಣಕ್ಕೆ 4,600 ಕೋಟಿ ರೂ. ಅನುದಾನ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಸರ್ಕಾರ 4,600 ಕೋಟಿ ರೂ. ಅನುದಾನ ಒದಗಿಸಿದೆ. ಮೊರಾರ್ಜಿ ದೇಸಾಯಿ, ಮೌಲಾನಾ ಅಬುಲ್ ಕಲಾಂ ಆಜಾದ್ ಹಾಗೂ ಶಿಶುನಾಳ ಶರೀಫ್ ಸೇರಿ ವಿವಿಧ ವಸತಿ ಶಿಕ್ಷಣ ಸಂಸ್ಥೆಗಳ ಮೂಲಕ ಸುಮಾರು 3.5 ಲಕ್ಷ ವಿದ್ಯಾರ್ಥಿಗಳು ಉಚಿತ ಶಿಕ್ಷಣ ಪಡೆಯುತ್ತಿದ್ದಾರೆ. ಇಂಜಿನಿಯರಿಂಗ್, ಉನ್ನತ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಮೆರಿಟ್ ಹಾಗೂ ಬಿಪಿಎಲ್ ಕಾರ್ಡ್ ಆಧಾರದ ಮೇಲೆ ಲ್ಯಾಪ್‌ಟಾಪ್ ನೀಡಲು ತೀರ್ಮಾನಿಸಲಾಗಿದೆ. ಹೊಸದಾಗಿ 35 ವಸತಿ ಶಾಲೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಯು.ಟಿ. ಖಾದರ್ ತಿಳಿಸಿದರು.

## ನಿತ್ಯ ಪಂಚಾಂಗ 29.10.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಬಹುಳ, ಚೌತಿ, ರೋಹಿಣಿ ನಕ್ಷತ್ರ, ಸಂಕಷ್ಟ ಚತುರ್ಥಿ, ಕರವಾ ಚೌತ್, ಬಾಳೆ ಕುಂದ್ರಿ ಉತ್ಸವ, ಹಾಸನಾಂಬ ದೇವಾಲಯ ಬಾಗಿಲು ತೆರೆಯುವುದು

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಜಾಗತಿಕ ಹೂಡಿಕೆದಾರರ ಸಮಾವೇಶ: ಸ್ವಿಜರ್‌ಲ್ಯಾಂಡ್ ರಾಯಭಾರಿಗೆ ಮುಖ್ಯಮಂತ್ರಿ ಆಹ್ವಾನ

ಬೆಂಗಳೂರು, ಅ.28: ಕರ್ನಾಟಕದಲ್ಲಿ ನಡೆಯಲಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ 2027ರಲ್ಲಿ ಪಾಲುದಾರ ದೇಶವಾಗಿ ಭಾಗವಹಿಸಿ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಸ್ವಿಜರ್‌ಲ್ಯಾಂಡ್ ನಿಯೋಗಕ್ಕೆ ಆಹ್ವಾನ ನೀಡಿದರು.

ಭಾರತದ ಸ್ವಿಜರ್‌ಲ್ಯಾಂಡ್ ರಾಯಭಾರಿ ಮಾಯಾ ಟಿಫಾಸಿ ಜತೆ ಬುಧವಾರ ಚರ್ಚೆ ನಡೆಸಿದ ಅವರು, ಕರ್ನಾಟಕದಲ್ಲಿ ಬಲವಾದ ಕೈಗಾರಿಕಾ ತಳಹದಿ, ಕೌಶಲ್ಯಯುತ ಮಾನವಶಕ್ತಿ ಮತ್ತು ಕ್ರಿಯಾಶೀಲ ಆವಿಷ್ಕಾರ ಪರಿಸರ ವ್ಯವಸ್ಥೆ ಇದೆ. ಅಲ್ಲದೆ, ಟನಲ್ (ಸುರಂಗ) ಮೂಲಸೌಕರ್ಯ ಕ್ಷೇತ್ರದಲ್ಲಿ ಸ್ವಿಜರ್‌ಲ್ಯಾಂಡ್



ಕಂಪನಿಗಳು ಮತ್ತು ಕರ್ನಾಟಕದ ನಡುವಿನ ಸಹಕಾರಕ್ಕೆ ಹೆಚ್ಚಿನ ಅವಕಾಶಗಳಿವೆ. ಸ್ವಿಸ್ ಕಂಪನಿಗಳು ರಾಜ್ಯದಲ್ಲಿ ಹೊಸ ಹೂಡಿಕೆ ಅವಕಾಶಗಳನ್ನು ಅನ್ವೇಷಿಸಬೇಕು. ಸುಸ್ಥಿರ ಹೂಡಿಕೆಗಳನ್ನು ಬೆಂಬಲಿಸಲು, ಕೈಗಾರಿಕಾ ಬೆಳವಣಿಗೆಯನ್ನು ಉತ್ತೇಜಿಸಲು ಮತ್ತು ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ರಾಜ್ಯಕ್ಕಿರುವ ಸಾಮರ್ಥ್ಯವನ್ನು ಗಮನದಲ್ಲಿಟ್ಟುಕೊಂಡು ಸ್ವಿಸ್ ಇನ್‌ವೆಸ್ಟ್‌ಮೆಂಟ್ ಫಂಡ್ ಫಾರ್ ಎಮರ್ಜಿಂಗ್ ಮಾರ್ಕೆಟ್ಸ್ ಕರ್ನಾಟಕದಲ್ಲಿ ಹೂಡಿಕೆ ಮಾಡುವ ಅಗತ್ಯವಿದೆ ಎಂದು ವಿವರಿಸಿದರು.

ಕರ್ನಾಟಕದಲ್ಲಿ 40 ಸ್ವಿಸ್ ಕಂಪನಿಗಳು ಕಾರ್ಯನಿರ್ವಹಿಸುತ್ತಿದ್ದು, 20,000ಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೀಡಿವೆ. ಸುಧಾರಿತ ಉತ್ಪಾದನೆ, ಎಂಜಿನಿಯರಿಂಗ್, ಔಷಧ, ಆಹಾರ ಸಂಸ್ಕರಣೆ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ಹೆಚ್ಚಿನ ಸಹಕಾರವನ್ನು ಸ್ವಾಗತಿಸುತ್ತೇನೆ. ಮುಂದಿನ ದಿನಗಳಲ್ಲಿ ಆರಂಭಗೊಳ್ಳಲಿರುವ ಬೆಂಗಳೂರು–ಜ್ಯೂರಿಚ್ ನಡುವಿನ ನೇರ ವಿಮಾನ ಸಂಪರ್ಕವು ವ್ಯಾಪಾರ ಮತ್ತು ಸಾರ್ವಜನಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಅಭಿಪ್ರಾಯಪಟ್ಟರು.

### ಸಿಎಂಗೆ ಮಾಯಾ ಟಿಫಾಸಿ ಆಹ್ವಾನ

ಮಾಯಾ ಟಿಫಾಸಿ ಮಾತನಾಡಿ, ತಮ್ಮ ದೇಶದ ವಿಶ್ವ ಪ್ರಸಿದ್ಧ ಆತಿಥ್ಯ (ಹಾಸ್ಪಿಟಾಲಿಟಿ) ಶಿಕ್ಷಣ ಸಂಸ್ಥೆಗಳ ಅನುಭವವನ್ನು ಬಳಸಿಕೊಂಡು ಕರ್ನಾಟಕದಲ್ಲಿ ಉನ್ನತ ಮಟ್ಟದ ಆತಿಥ್ಯ ತರಬೇತಿ ಸಂಸ್ಥೆಯನ್ನು ಸ್ಥಾಪಿಸುವ ಅವಕಾಶವಿದೆ. ಸಾಂಸ್ಕೃತಿಕ ಪರಂಪರೆಯ ವಿನಿಮಯವನ್ನು ಸುಗಮಗೊಳಿಸಲು ಸ್ವಿಟ್ಜರ್‌ಲ್ಯಾಂಡ್‌ಗೆ ಅಧ್ಯಯನ ಪ್ರವಾಸಗಳನ್ನು ಆಯೋಜಿಸುವ ಅಗತ್ಯವಿದೆ. ಇದು ಸ್ವಿಟ್ಜರ್‌ಲ್ಯಾಂಡ್‌ನ ಉತ್ತಮ ಅಭ್ಯಾಸಗಳಿಂದ ಕರ್ನಾಟಕಕ್ಕೆ ಪ್ರಯೋಜನ ವಾಗುವಂತೆ ಮಾಡಲು ಮತ್ತು ರಾಜ್ಯದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರದರ್ಶಿಸಲು ನೆರವಾಗಲಿದೆ. 2027ರಲ್ಲಿ ಸ್ವಿಟ್ಜರ್‌ಲ್ಯಾಂಡಿನ ದಾವೋಸ್‌ನಲ್ಲಿ ನಡೆಯಲಿರುವ ಎಐ ಶೃಂಗಸಭೆಯಲ್ಲಿ ಭಾಗವಹಿಸಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಆಹ್ವಾನ ನೀಡಿದರು.

## ರಂಗನಾಥ್‌ಗೆ ಅಭಿನಂದನೆ



ಬೆಂಗಳೂರು, ಅ.28: ವಿಧಾನಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿರುವ ಎ.ಪಿ.ರಂಗನಾಥ್ ಅವರು ಸಂಸದ ಡಾ, ಸಿ.ಎನ್.ಮಂಜುನಾಥ್ ಅವರನ್ನು ಭೇಟಿ ಮಾಡಿದರು. ಈ ಸಂದರ್ಭ ರಂಗನಾಥ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ಈ ಗೆಲುವಿಗಾಗಿ ಶ್ರಮಿಸಿದ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಎಲ್ಲಾ ಮುಖಂಡರು, ಕಾರ್ಯಕರ್ತರು ಹಾಗೂ ತಮ್ಮ ಅಮೂಲ್ಯ ಮತವನ್ನು ನೀಡಿದ ಶಿಕ್ಷಕ ಮತದಾರರಿಗೆ ನನ್ನ ಹೃತ್ಪೂರ್ವಕ ಧನ್ಯವಾದ ಎಂದು ತಿಳಿಸಿದ್ದಾರೆ.

ಈ ಫಲಿತಾಂಶವು ಎರಡೂ ಪಕ್ಷಗಳ ಒಗ್ಗಟ್ಟು, ಸಮನ್ವಯ ಮತ್ತು ಸಂಘಟಿತ ಪ್ರಯತ್ನಕ್ಕೆ ಸಂದ ಗೌರವವಾಗಿದೆ. ಮುಂದಿನ ರಾಜಕೀಯಕ್ಕೆ ಈ ಗೆಲುವು ದಿಕ್ಸೂಚಿಯಾಗಲಿದೆ ಎಂಬ ವಿಶ್ವಾಸ ನನ್ನದು. ಮೈತ್ರಿಯ ಒಗ್ಗಟ್ಟು ಮತ್ತಷ್ಟು ಬಲಗೊಳ್ಳಲಿ, ಜನಸೇವೆಯ ಸಂಕಲ್ಪ ಯಶಸ್ವಿಯಾಗಲಿ ಎಂದು ಡಾ, ಮಂಜುನಾಥ್ ಹಾರೈಸಿದ್ದಾರೆ

# ಕಿರುಕುಳಕ್ಕೆ ಹೆದರಬೇಕಾಗಿಲ್ಲ, ರಾಜಕೀಯ ಒತ್ತಡಕ್ಕೆ ಮಣಿದಿರುವ ಪೊಲೀಸರಿಗೆ ಕಾಲವೇ ಉತ್ತರಿಸುತ್ತದೆ

**ಜೆಡಿಎಸ್ ಕಾರ್ಯಕರ್ತರಿಗೆ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಅಭಯ**

**ಕಾನೂನು ಪಾಲಿಸುವ, ಜನಪರ ಕೆಲಸ ಮಾಡುವ ಅಧಿಕಾರಿಗಳನ್ನು ಗೌರವಿಸುವಂತೆ ಕರೆ**



ನವದೆಹಲಿ, ಅ.28: ಕಿರುಕುಳ ನೀಡುತ್ತಿರುವ ಪೊಲೀಸ್ ಅಧಿಕಾರಿಗಳನ್ನು ಕಂಡು ಜೆಡಿಎಸ್ ಕಾರ್ಯಕರ್ತರು ಹೆದರಬೇಕಾಗಿಲ್ಲ. ರಾಜಕೀಯ ಒತ್ತಡಕ್ಕೆ ಮಣಿದು ಕಾನೂನುಬಾಹಿರವಾಗಿ ವರ್ತಿಸುತ್ತಿರುವ ಅಧಿಕಾರಿಗಳ ಹೆಸರನ್ನು ಬರೆದಿಟ್ಟುಕೊಳ್ಳಿ. ಕಾಲವೇ ಅವರಿಗೆ ಉತ್ತರಿಸುತ್ತದೆ ಎಂದು ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪೊಲೀಸ್ ಅಧಿಕಾರಿಗಳು ಏನು ಮಾಡುತ್ತಿದ್ದಾರೆ, ಯಾರ ಒತ್ತಡಕ್ಕೆ ಮಣಿದು ಕೆಲಸ ಮಾಡುತ್ತಿದ್ದಾರೆ ಎಂಬುದು ಗೊತ್ತಿದೆ. ಇನ್ನೊಂದು ವರ್ಷ ನಾವೇ ಅಧಿಕಾರಕ್ಕೆ ಬರುತ್ತೇವೆ. ಆಗ ಲೆಕ್ಕ ಚುಕ್ತಾ ಮಾಡೋಣ. ಆದರೆ, ಕಾನೂನು ಮೀರದೆ ಜನರ ಪರವಾಗಿ ಕೆಲಸ ಮಾಡುವ ಅಧಿಕಾರಿಗಳಿಗೆ ಗೌರವ ಕೊಡಿ ಎಂದು ಹೇಳಿದರು.

ಮುಖ್ಯಮಂತ್ರಿ ಎಲ್ಲದಕ್ಕೂ ಕಾಲವೇ ಉತ್ತರಿಸುತ್ತದೆ ಎನ್ನುತ್ತಾರೆ. ನಮಗೂ ಒಂದು ಕಾಲ ಬರುತ್ತದೆ. ಆಗ ಅಂತಹ ಅಧಿಕಾರಿಗಳಿಗೆ ಮತ್ತು ರಾಜಕಾರಣಿಗಳಿಗೆ ಉತ್ತರ ಸಿಗುತ್ತದೆ. ಕಾನೂನು ಮೀರಿ ವರ್ತಿಸುವ ಪ್ರತಿಯೊಬ್ಬ ಅಧಿಕಾರಿಗೂ ಸೇವೆಯಲ್ಲಿರಲಿ, ನಿವೃತ್ತಿಯಾಗಿರಲಿ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನನ್ನ ಎಡ–ಬಲದಲ್ಲಿದ್ದವರು, ಮುಂಭಾಗದಲ್ಲಿದ್ದವರು ಯಾರೂ ಎಲ್ಲಿಗೂ ಓಡಿಹೋಗಿಲ್ಲ, ಎಲ್ಲರೂ ಇಲ್ಲೇ ಇದ್ದಾರೆ. ಜೆಡಿಎಸ್ ಕಾರ್ಯಕರ್ತ ಚಂದನ್ ಎಂಬ ಯುವಕನಿಗೆ ನಿನ್ನೆಯಷ್ಟೇ ನೋಟಿಸ್ ಜಾರಿ ಮಾಡಿದ್ದಾರೆ. ಆದರೆ ಮೊದಲೇ ಆತನನ್ನು ಪೊಲೀಸರು ಅಕ್ರಮವಾಗಿ ಹುಡುಕುತ್ತಿದ್ದರು ಎಂದು ಸಚಿವರು ಆಕ್ಷೇಪಿಸಿದರು.

**ಸ್ಟಿಂಗ್ ಆಪರೇಷನ್:** ಕಾಂಗ್ರೆಸ್‌ನ ಮಹಿಳಾ ಸೂತ್ರಧಾರಿ ಹಾಗೂ ಪಾತ್ರಧಾರಿ ಎಲ್ಲಿ:

2015ರ ಜೂನ್‌ನಲ್ಲಿ ಅಂದಿನ ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲೇ ಮಹಿಳಾ ಮತ್ತು ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗೆ ಅಧ್ಯಕ್ಷೆಯನ್ನಾಗಿ ನೇಮಿಸಲಾಗಿದ್ದ ಕಾಂಗ್ರೆಸ್‌ನ ಮಹಿಳಾ ನಾಯಕಿಯೇ ಈ ಇಡೀ ಷಡ್ಯಂತ್ರದ ಸೂತ್ರಧಾರಿ. 2023ರಲ್ಲಿ ಒಬ್ಬ ಯುವತಿಯನ್ನು ಬಳಸಿಕೊಂಡು ಮತ್ತೊಬ್ಬ ಯುವತಿಯನ್ನು ಕೂರಿಸಿ ಖಾಸಗಿ ಚಾನೆಲ್‌ನ ವ್ಯಕ್ತಿಯನ್ನು ಟ್ರ್ಯಾಪ್ ಮಾಡಲು ಪ್ರಚೋದನೆ ನೀಡಿ ವಿಡಿಯೋ ರೆಕಾರ್ಡ್ ಮಾಡಿಸಿದವರ ಬಗ್ಗೆ ತನಿಖೆ ಏಕೆ ನಡೆಯುತ್ತಿಲ್ಲ ಎಂದು ಅವರು ಪ್ರಶ್ನಿಸಿದರು. ವಿಡಿಯೋ ಚಿತ್ರೀಕರಿಸಿದ ವ್ಯಕ್ತಿ ನಾನೇ ಮಾಡಿದ್ದು ಎಂದು ತಪ್ಪು ಒಪ್ಪಿಕೊಂಡಿದ್ದರೂ ಆತನನ್ನು ಮುಕ್ತವಾಗಿ ಓಡಾಡಲು ಬಿಟ್ಟು, ಅಕ್ರಮ ಚಾನೆಲ್ ಮೂಲಕ ಸುಳ್ಳು ಸುದ್ದಿ ಹರಡಲು ಸರ್ಕಾರವೇ ರಕ್ಷಣೆ ನೀಡುತ್ತಿದೆ ಎಂದು ಎಚ್.ಡಿ. ಕುಮಾರಸ್ವಾಮಿ ತರಾಟೆಗೆ ತೆಗೆದುಕೊಂಡರು.

### ಸಿದ್ದರಾಮಯ್ಯ ವಿರುದ್ಧ ಸೇಡು ತೀರಿಸಿಕೊಳ್ಳುತ್ತಿರುವ ಖರ್ಗೆ

ಸಿದ್ದರಾಮಯ್ಯ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರು ಪುತ್ರ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಈಗ ಸೇಡು ತೀರಿಸಿಕೊಳ್ಳುತ್ತಿದ್ದಾರೆ. ಸಚಿವ ಪ್ರಿಯಾಂಕ್ ಖರ್ಗೆ ಅಸಲಿ ಉದ್ದೇಶ ಕುಮಾರಸ್ವಾಮಿಯನ್ನು ಮುಗಿಸುವುದಲ್ಲ, ಸಿದ್ದರಾಮಯ್ಯ ಅವರ ವರ್ಚಸ್ಸನ್ನು ಹಾಳು ಮಾಡುವುದಾಗಿದೆ. ಈ ಹಿಂದೆ ತಮ್ಮ ತಂದೆ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮುಖ್ಯಮಂತ್ರಿ ಸ್ಥಾನ ತಪ್ಪಲು ಸಿದ್ದರಾಮಯ್ಯನವರೇ ಕಾರಣ ಎಂಬ ಹಳೆಯ ದ್ವೇಷವನ್ನು ತೀರಿಸಿಕೊಳ್ಳಲು, ಕುಮಾರಸ್ವಾಮಿ ಹೆಸರಿನಲ್ಲಿ ಈ ಪ್ರಕರಣವನ್ನು ಹೆಣೆದು ಅಂತಿಮವಾಗಿ ಸಿದ್ದರಾಮಯ್ಯನವರನ್ನೇ ಸಿಲುಕಿಸುವ ಒಳಸಂಚು ಖರ್ಗೆ ಕುಟುಂಬ, ಹಾಲಿ ಸಿಎಂ ಸೇರಿ ಹೂಡಿದ್ದಾರೆ ಎಂದು

### ದುರಾಡಳಿತ, ರೈತ ವಿರೋಧಿ ಧೋರಣೆಗೆ ಮತದಾರರಿಂದ ತಿರುಗೇಟು

ನವಿಧಾನ ಪರಿಷತ್ ಶಿಕ್ಷಕರ ಹಾಗೂ ಪದವೀಧರ ಕ್ಷೇತ್ರಗಳ ಚುನಾವಣಾ ಫಲಿತಾಂಶವು ಪ್ರಸ್ತುತ ಆಡಳಿತದಲ್ಲಿರುವ ಕಾಂಗ್ರೆಸ್ ಸರ್ಕಾರದ ದುರಾಡಳಿತ, ರೈತ ವಿರೋಧಿ ಧೋರಣೆ ಹಾಗೂ ಭ್ರಷ್ಟ ನೀತಿಗಳಿಗೆ ಮತದಾರರು ನೀಡಿರುವ ನೇರ ಕಪಾಳಮೋಕ್ಷ ಎಂದು ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರು ತೀವ್ರ ವಾಗ್ದಾಳಿ ನಡೆಸಿದರು. ಎನ್‌ಡಿಎ ಮೈತ್ರಿಕೂಟದ ನಾಲ್ಕೂ ಅಭ್ಯರ್ಥಿಗಳ ಜಯವು ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ಹೋರಾಟಕ್ಕೆ ನಾಡಿನ ಜನತೆಯ ಆಶೀರ್ವಾದವಿದೆ ಎಂಬುದಕ್ಕೆ ಸ್ಪಷ್ಟ ದಿಕ್ಸೂಚಿಯಾಗಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಬಣ್ಣಿಸಿದರು. ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳಾದ ಶಶೀಲ್ ನಮೋಶಿ, ಎಸ್.ವಿ. ಸಂಕನೂರು, ಕೆ.ಎಂ.ಸುರೇಶ್ ಹಾಗೂ ಎ.ಪಿ.ರಂಗನಾಥ್

## 600 ಕೋಟಿ ಡೀಲ್ ಮಾಡೋದಕ್ಕೆ ತಲೆ ಕೆಟ್ಟಿದೆಯಾ: ಎಚ್.ಡಿ.ಕೆಗೆ ಸಚಿವ ಚಲುವರಾಯಸ್ವಾಮಿ ತರಾಟೆ



ಮಂಡ್ಯ, ಅ.28: ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಕುಟುಂಬವನ್ನು ಮುಗಿಸುವುದಕ್ಕೆ 600 ಕೋಟಿ ಡೀಲ್ ಕೊಡೋದಕ್ಕೆ ನಮಗೆ ತಲೆಕೆಟ್ಟಿದೆಯಾ ಎಂದು ಪ್ರಶ್ನಿಸುವ ಮೂಲಕ ಸಚಿವ ಎನ್. ಚಲುವರಾಯಸ್ವಾಮಿ ಅವರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ತರಾಟೆಗೆ ತೆಗೆದುಕೊಂಡರು.

ಮಂಡ್ಯದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇನ್ನೊಬ್ಬರನ್ನು ತೇಜೋವಧೆ ಮಾಡುವುದಕ್ಕೆ ಕುಮಾರಸ್ವಾಮಿ ಈ ರೀತಿ ಮಾಡುತ್ತಿದ್ದಾರೆಯೇ ವಿನಃ ಇನ್ಯಾರು ಮಾಡುತ್ತಿಲ್ಲ. ಸ್ಟಿಂಗ್ ಆಪರೇಷನ್ ವಿಚಾರದಲ್ಲಿ ಅವರೇ ಇದೆಲ್ಲ ಮಾಡಿಸಿಕೊಂಡು ಬಂದಿರುವ ಇತಿಹಾಸವಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದೇವೇಗೌಡರು ಪ್ರಧಾನ ಮಂತ್ರಿ ಸ್ಥಾನದಿಂದ ಕೆಳಗಿಳಿದಾಗ ನಮ್ಮನ್ನೆಲ್ಲ ರೈಲ್ವೆ ಸ್ಟೇಷನ್‌ಗೆ ಕರೆದುಕೊಂಡು ಹೋಗಿ ಹೋರಾಟ ಮಾಡಿದ್ದು, ಸಿದ್ದರಾಮಯ್ಯ ಅವರನ್ನು ಉಚ್ಚಾಟನೆ ಮಾಡಿದ್ದು, ಜೆ.ಎಚ್. ಪಟೇಲ್ ಅವರಿಗೆ ತೊಂದರೆ ಕೊಟ್ಟಿದ್ದು ಇದೇ ಕುಮಾರಸ್ವಾಮಿ ಎಂದು ಹೇಳಿದರು.

ಹಾಸನ ಪೆನ್‌ಡ್ರೈವ್ ಪ್ರಕರಣದಲ್ಲಿ ಸಂತ್ರಸ್ತರ ಹೆಣ್ಣುಮಕ್ಕಳ ಬಗ್ಗೆ ಕುಮಾರಸ್ವಾಮಿಗೆ ಅನುಕಂಪ ಇಲ್ಲ. ಪೆನ್‌ಡ್ರೈವ್ ಬಿಡುಗಡೆ ಮಾಡಿದವರ ವಿರುದ್ಧ ಕ್ರಮಕ್ಕೆ ಹೋರಾಡುತ್ತಿದ್ದಾರೆ. ಎಂದರು.

## ಭ್ರಷ್ಟಾಚಾರ, ಅಭಿವೃದ್ಧಿಶೂನ್ಯ ಕಾಂಗ್ರೆಸ್ ಸರ್ಕಾರಕ್ಕೆ ಪ್ರಜ್ಞಾವಂತ ಮತದಾರರಿಂದ ತಕ್ಕ ಉತ್ತರ




**ವಿಧಾನ ಪರಿಷತ್‌ನ ನಾಲ್ಕು ಸ್ಥಾನಗಳಲ್ಲಿ ಗೆಲುವು ಸಾಧಿಸಿದ ಎನ್‌ಡಿಎ ಅಭ್ಯರ್ಥಿಗಳಿಗೆ ವಿಜಯೇಂದ್ರ ಅಭಿನಂದನೆ**

ಬೆಂಗಳೂರು, ಅ.28: ರಾಜ್ಯ ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದು, ಭ್ರಷ್ಟಾಚಾರ ಹಾಗೂ ಅಭಿವೃದ್ಧಿ ಶೂನ್ಯ ಕಾಂಗ್ರೆಸ್ ಸರ್ಕಾರವನ್ನು ಪ್ರಜ್ಞಾವಂತ ಮತದಾರರು ತಿರಸ್ಕರಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಹೇಳಿಕೆ ನೀಡಿರುವ ಅವರು, ಈ ಚುನಾವಣಾ ಫಲಿತಾಂಶವು ರಾಷ್ಟ್ರದಲ್ಲಿ ಸಾಂವಿಧಾನಿಕ ಸಂಸ್ಥೆಗಳ ಮೇಲೆ ಸುಳ್ಳು ಆರೋಪಗಳನ್ನು ಮಾಡುತ್ತಿರುವ ಶಕ್ತಿಗಳ ವಿರುದ್ಧ ಜನತೆ ನೀಡಿರುವ ತೀರ್ಪಾಗಿದೆ. ಅಲ್ಲದೇ, ರಾಜ್ಯದಲ್ಲಿ ನಡೆಯಲಿರುವ 2028ರ ವಿಧಾನಸಭಾ ಚುನಾವಣೆಗೆ ಇದು ಸ್ಪಷ್ಟ ದಿಕ್ಸೂಚಿಯಾಗಿದೆ ಎಂದುತಿಳಿಸಿದ್ದಾರೆ.

ವಿಧಾನ ಪರಿಷತ್ತಿನ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಕೆ.ಎಂ. ಸುರೇಶ್, ಎಸ್.ವಿ. ಸಂಕನೂರು, ಶಶಿಲ್ ನಮೋಶಿ ಮತ್ತು ಎ.ಪಿ. ರಂಗನಾಥ್ ಅವರಿಗೆ, ಅಭಿನಂದನೆ ಸಲ್ಲಿಸಿರುವ ಬಿಜೆಪಿ ರಾಜ್ಯಾಧ್ಯಕ್ಷರು, ಅಭ್ಯರ್ಥಿಗಳ ಗೆಲುವಿಗೆ ಕಾರಣರಾದ ಪಕ್ಷದ ಕಾರ್ಯಕರ್ತರಿಗೂ ಧನ್ಯವಾದ ಹೇಳಿದ್ದಾರೆ.

## ನಮ್ಮ ಬಗ್ಗೆ ಮಾತನಾಡುವ ಬದಲು ಸ್ಥಾನ ಗಟ್ಟಿ ಮಾಡಿಕೊಳ್ಳಲಿ: ಖರ್ಗೆ ತಾಕೀತು

**ಬಿ.ವೈ. ವಿಜಯೇಂದ್ರ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ**

**ಬೆಂಗಳೂರು, ಅ.28:** ರಾಜ್ಯ ಬಿಜೆಪಿಯಲ್ಲಿ ಮುಂದಿನ ತಿಂಗಳಲ್ಲಿ ದೊಡ್ಡ ಮಟ್ಟದ ಬದಲಾವಣೆಗಳಾಗಲಿವೆ ಎಂದು ಅವರ ಪಕ್ಷದ ನಾಯಕರೇ ಮಾತನಾಡಿಕೊಳ್ಳುತ್ತಿದ್ದಾರೆ. ಹೀಗಿರುವಾಗ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಇನ್ನು ಒಂದು ತಿಂಗಳ ನಂತರ ತಮ್ಮ ಸ್ಥಾನವೇ ಗ್ಯಾರಂಟಿ ಇಲ್ಲ. ಇನ್ನು ನಮ್ಮ ಬಗ್ಗೆ ಮಾತನಾಡುವ ಮುನ್ನ ವಿಜಯೇಂದ್ರ ಅವರು ಮೊದಲು ತಮ್ಮ ಸ್ಥಾನವನ್ನು ಗಟ್ಟಿ ಮಾಡಿಕೊಳ್ಳಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಮುಂದಿನ 2028ರ ವಿಧಾನಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷವೇ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್



ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಜಂಟಿ ನಾಯಕತ್ವದಲ್ಲಿ ನಾವು ಮುಂದಿನ ಚುನಾವಣೆಯನ್ನು ಎದುರಿಸಲಿದ್ದೇವೆ. ರಾಜ್ಯದ ಜನತೆ ಸೌಜನ್ಯಯುತವಾಗಿ ನಮಗೆ ಆಶೀರ್ವಾದ ಮಾಡಿದ್ದು, ಅವರಿಗೆ ಸ್ವಾಭಿಮಾನದ ಬದುಕು ಕಟ್ಟಿಕೊಡಲು ನಮ್ಮ ಸರ್ಕಾರ ಪ್ರಮಾಣಿಕ ಪ್ರಯತ್ನ ಮಾಡುತ್ತಿದೆ. ನಮ್ಮ ಕಾಂಗ್ರೆಸ್‌ನ ಯಾವ ನಾಯಕರೂ ಅಹಂಕಾರ ಅಥವಾ ದಿಮಾಕಿನಿಂದ ಮಾತನಾಡುತ್ತಿಲ್ಲ ಎಂದು ತಿರುಗೇಟು ನೀಡಿದರು.

ಇದೇ ವೇಳೆ ಬಿಜೆಪಿ ಆಡಳಿತಾವಧಿಯ ವೈಫಲ್ಯಗಳನ್ನು ನೆನಪಿಸಿದ ಸಚಿವರು, ಬಿಜೆಪಿ ಅಧಿಕಾರದಲ್ಲಿದ್ದಾಗ ಪಿಎಸ್‌ಐ ನೇಮಕಾತಿ ಹಗರಣ ಹಾಗೂ ಬಿಟ್‌ಕಾಯಿನ್ ಹಗರಣಗಳು ನಡೆದವು. ಆದರೆ, ಬಿಟ್‌ಕಾಯಿನ್ ಹಗರಣ ನಡೆದೇ ಇಲ್ಲ ಎಂದು ಮರೆಮಾಚುವ ಯತ್ನ ಮಾಡಿದ್ದರು. ಸಾರ್ವಜನಿಕ ಸಭೆಗಳಲ್ಲಿ 'ದಮ್ಮು–ತಾಕತ್' ಎಂದು ಉಡಾಫೆಯಾಗಿ ಮಾತನಾಡುತ್ತಿದ್ದ ಬಿಜೆಪಿ ನಾಯಕರು, ಕೇವಲ ಭಾವನಾತ್ಮಕ ರಾಜಕಾರಣ ಮಾಡುವ ಮೂಲಕ ಕಾಲ ಕಳೆದರು. ಆದರೆ ನಾವು ಎಂದಿಗೂ ಈ ರೀತಿ ಜವಾಬ್ದಾರಿರಹಿತವಾಗಿ ನಡೆದುಕೊಂಡಿಲ್ಲ ಎಂದು ಪ್ರಿಯಾಂಕ್ ಖರ್ಗೆ ಬಿಜೆಪಿಗೆ ಖಾರವಾಗಿ ತಿರುಗೇಟು ನೀಡಿದರು.

# ಕನ್ನಡ ಮಾಧ್ಯಮ ಶಾಲೆಗಳ ಸಬಲೀಕರಣಕ್ಕೆ ಸಮಗ್ರ ನೀತಿ ರೂಪಿಸಿ: ಸಿಎಂಗೆ ದಿನೇಶ್ ಗೂಳಿಗೌಡ ಮನವಿ

ಬೆಂಗಳೂರು, ಅ.28: ಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಜ್ಯದ ಕನ್ನಡ ಮಾಧ್ಯಮ ಸರ್ಕಾರಿ ಶಾಲೆಗಳ ಸಬಲೀಕರಣ ಹಾಗೂ 50, 75 ಮತ್ತು 100 ವರ್ಷಗಳ ಇತಿಹಾಸ ಹೊಂದಿರುವ ಸರ್ಕಾರಿ ಶಾಲೆಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸಮಗ್ರ ಕಾರ್ಯಯೋಜನೆ ರೂಪಿಸುವಂತೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಅವರಿಗೆ ಮನವಿ ಸಲ್ಲಿಸಿದ್ದಾರೆ.

ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕುಸಿಯುತ್ತಿರುವುದು, ಶಿಕ್ಷಕರ ಕೊರತೆ ಹಾಗೂ ಮೂಲಸೌಕರ್ಯಗಳ ಅಭಿವೃದ್ಧಿಯ ಅಗತ್ಯವನ್ನು ಪ್ರಸ್ತಾಪಿಸಿರುವ ಅವರು, ಕನ್ನಡವನ್ನು ಮುಖ್ಯ ಬೋಧನಾ ಮಾಧ್ಯಮವಾಗಿ ಉಳಿಸಿಕೊಂಡು ಗುಣಮಟ್ಟದ ಇಂಗ್ಲಿಷ್ ಸಂವಹನ ಕೌಶಲ ಬೆಳೆಸಬೇಕು ಎಂದು ಸಲಹೆ ನೀಡಿದ್ದಾರೆ. ಐತಿಹಾಸಿಕ ಶಾಲೆಗಳನ್ನು ಗುರುತಿಸಿ, ಅವುಗಳ ಪರಂಪರೆಯನ್ನು ಸಂರಕ್ಷಿಸುವುದರ ಜೊತೆಗೆ ಆಧುನಿಕ ಶಿಕ್ಷಣ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

ಪಾರಂಪರಿಕ ಶಾಲೆಗಳಿಗೆ ವಿಶೇಷ ಅನುದಾನ, ಶೈಕ್ಷಣಿಕ ಸ್ಮಾರಕ ಗ್ಯಾಲರಿಗಳ ಸ್ಥಾಪನೆ, ಆಯ್ದ ಶಾಲೆಗಳನ್ನು ಎಲ್‌ಕೆಜಿಯಿಂದ 12ನೇ ತರಗತಿವರೆಗೆ ಶಿಕ್ಷಣ ನೀಡುವ ಸಮಗ್ರ ಮಾದರಿ ಶಾಲೆಗಳನ್ನಾಗಿ ಮೇಲ್ದರ್ಜೆಗೇರಿಸುವುದು, ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವ ಹಾಗೂ ಶಿಕ್ಷಕರ ನೇಮಕಾತಿಗೆ ಆದ್ಯತೆ ನೀಡುವುದು ಸೇರಿದಂತೆ ಹಲವು ಪ್ರಸ್ತಾವನೆಗಳನ್ನು ಮುಂದಿಟ್ಟಿದ್ದಾರೆ. ಈ ಎಲ್ಲ ಕ್ರಮಗಳನ್ನು ಒಂದೇ ಯೋಜನೆಯಡಿ ಜಾರಿಗೊಳಿಸಲು 'ಕರ್ನಾಟಕ ಪಾರಂಪರಿಕ ಶಾಲಾ ಪುನಶ್ಚೇತನ ನೀತಿ' ರೂಪಿಸಿ, ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಘೋಷಿಸಬೇಕು ಎಂದು ಮನವಿ ಮಾಡಿದ್ದಾರೆ.



- 50, 75, 100 ವರ್ಷ ಪೂರೈಸಿದ ಶಾಲೆಗಳಿಗೆ ಪಾರಂಪರಿಕ ಮಾನ್ಯತೆಗೆ ಮನವಿ
- ದಿನೇಶ್ ಗೂಳಿಗೌಡರಿಂದ ಸಿಎಂ, ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಕೆ
- ಕನ್ನಡ ರಾಜ್ಯೋತ್ಸವಕ್ಕೆ ವಿಶೇಷ ನೀತಿ ರೂಪಿಸಿ
- ಇಳಿಕೆ ಕಾಣುತ್ತಿರುವ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಿ
- ಐವತ್ತು, ನೂರು ವರ್ಷ ದಾಟಿದ ಶಾಲೆ ಉಳಿಸಿ
- ಶಾಲೆಗಳಲ್ಲಿ ಡಿಜಿಟಲ್ ಹಾಗೂ ಮೂಲಸೌಕರ್ಯ ಕಲ್ಪಿಸಿ
- ಕನ್ನಡದೊಂದಿಗೆ ಉತ್ತಮ ಇಂಗ್ಲಿಷ್ ಸಂವಹನ ಕಲಿಸಿ
- ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವಕ್ಕೆ ಅಭಿಯಾನ ರೂಪಿಸಿ
- ಖಾಲಿ ಇರುವ ಶಿಕ್ಷಕರ ಹುದ್ದೆ ಭರ್ತಿಮಾಡಿ
- ಶೈಕ್ಷಣಿಕ ಸ್ಮಾರಕ ಗ್ಯಾಲರಿ ಮತ್ತು ವಸ್ತುಸಂಗ್ರಹಾಲಯ ಸ್ಥಾಪಿಸಿ

### ಮನವಿಯಲ್ಲಿ ಏನಿದೆ

**ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಏಳು ಪ್ರಮುಖ ಪ್ರಸ್ತಾವನೆಗಳು**

**1. ಪಾರಂಪರಿಕ ಶಾಲೆಗಳ ಗುರುತಿಸುವಿಕೆ ಮತ್ತು ಅಧಿಕೃತ ಘೋಷಣೆ:**

ಮುಂಬರುವ ಕನ್ನಡ ರಾಜ್ಯೋತ್ಸವದ ಅಂಗವಾಗಿ, 50, 75 ಮತ್ತು 100 ವರ್ಷಗಳ ಇತಿಹಾಸ ಪೂರೈಸಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಲು ರಾಜ್ಯಮಟ್ಟದ ಸಮೀಕ್ಷೆ ನಡೆಸಬೇಕು. ಶಾಲೆಗಳ ಸ್ಥಾಪನೆಯ ವರ್ಷ, ಐತಿಹಾಸಿಕ ದಾಖಲೆಗಳು ಮತ್ತು ಶೈಕ್ಷಣಿಕ ಕೊಡುಗೆಗಳನ್ನು ಆಧರಿಸಿ ಅರ್ಹ ಶಾಲೆಗಳ ಪಟ್ಟಿಯನ್ನು ಸಿದ್ಧಪಡಿಸಿ, ಅವುಗಳನ್ನು ಅಧಿಕೃತವಾಗಿ ಪಾರಂಪರಿಕ ಶಾಲೆಗಳೆಂದು ಘೋಷಿಸಬೇಕು.

**2. ಶೈಕ್ಷಣಿಕ ಸ್ಮಾರಕ ಗ್ಯಾಲರಿ ಮತ್ತು ವಸ್ತುಸಂಗ್ರಹಾಲಯಗಳ ಸ್ಥಾಪನೆ:**

ಗುರುತಿಸಲಾದ ಶಾಲೆಗಳಲ್ಲಿ ಸ್ಥಳಾವಕಾಶ ಮತ್ತು ಅಗತ್ಯಗಳಿಗೆ ಅನುಗುಣವಾಗಿ ಶೈಕ್ಷಣಿಕ ಸ್ಮಾರಕ ಗ್ಯಾಲರಿಗಳನ್ನು ಸ್ಥಾಪಿಸಬೇಕು. ಆ ಶಾಲೆಗಳಲ್ಲಿ ಶಿಕ್ಷಣ ಪಡೆದಿರುವುದು ದಾಖಲೆಗಳಿಂದ ದೃಢಪಟ್ಟ ಸಾಧಕರ ಜೀವನಚರಿತ್ರೆ, ಛಾಯಾಚಿತ್ರಗಳು, ಹಳೆಯ ದಾಖಲೆಗಳು ಮತ್ತು ಅವರ ಸಾಧನೆಗಳನ್ನು ಪರಿಚಯಿಸುವ ವ್ಯವಸ್ಥೆ ಕಲ್ಪಿಸಬೇಕು.

ಸರ್ ಎಂ. ವಿಶ್ವೇಶ್ವರಯ್ಯ, ಡಾ. ಸಿ.ಎನ್. ಆರ್. ರಾವ್, ಕಡಿದಾಳ್ ಮಂಜಪ್ಪ, ಎಸ್.ಎಂ. ಕೃಷ್ಣ ಸೇರಿದಂತೆ ಮಾಜಿ ಮುಖ್ಯಮಂತ್ರಿಗಳು, ರಾಜ್ಯಕ್ಕೆ ಅಪಾರ ಕೀರ್ತಿ ತಂದ ಕ್ರೀಡಾಪಟುಗಳು, ಪ್ರಮುಖ ವಿಜ್ಞಾನಿಗಳು, ಹೆಸರಾಂತ ಸಾಹಿತಿಗಳು, ಪ್ರಮುಖ ಸಂತರು ಹೀಗೆ ವಿವಿಧ ಕ್ಷೇತ್ರಗಳಲ್ಲಿ ಅಪಾರ ಕೊಡುಗೆ ನೀಡಿರುವ ಮಹನೀಯರ ಶೈಕ್ಷಣಿಕ ಹಾಗೂ ಸಾಮಾಜಿಕ ಸಾಧನೆಗಳನ್ನು ವಿಶ್ವಾಸಾರ್ಹ ದಾಖಲೆಗಳ ಆಧಾರದ ಮೇಲೆ ವಿದ್ಯಾರ್ಥಿಗಳಿಗೆ ಪರಿಚಯಿಸಬಹುದು. ಇಂತಹ ಗ್ಯಾಲರಿಗಳು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವುದರ ಜೊತೆಗೆ, ಸ್ಥಳೀಯ ಇತಿಹಾಸ ಮತ್ತು ಶಾಲೆಗಳ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೇಂದ್ರಗಳಾಗಲಿವೆ.

**3. ಆಧುನಿಕ ಮಾದರಿ ಶಾಲೆಗಳಾಗಿ ಮೇಲ್ದರ್ಜೆಗೇರಿಸುವುದು:**

ಪಾರಂಪರಿಕ ಶಾಲೆಗಳಿಗೆ ವಿಶೇಷ ಅನುದಾನ ಒದಗಿಸಿ, ಅವುಗಳ ಐತಿಹಾಸಿಕ ಕಟ್ಟಡಗಳ ಮೂಲಸ್ವರೂಪಕ್ಕೆ ಧಕ್ಕೆಯಾಗದಂತೆ ಸಂರಕ್ಷಣೆ ಮತ್ತು ದುರಸ್ತಿ ಕಾರ್ಯಗಳನ್ನು ಕೈಗೊಳ್ಳಬೇಕು. ಅಗತ್ಯಕ್ಕೆ ಅನುಗುಣವಾಗಿ ಸ್ಮಾರ್ಟ್ ತರಗತಿಗಳು, ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯಗಳು, ಗ್ರಂಥಾಲಯಗಳು ಹಾಗೂ ಕ್ರೀಡಾ ಸೌಲಭ್ಯಗಳನ್ನು ಕಲ್ಪಿಸಬೇಕು.

ಸ್ಥಳೀಯ ಅಗತ್ಯ, ವಿದ್ಯಾರ್ಥಿಗಳ ಸಂಖ್ಯೆ ಮತ್ತು ಲಭ್ಯವಿರುವ ಸೌಲಭ್ಯಗಳನ್ನು ಪರಿಗಣಿಸಿ, ಆಯ್ದ ಶಾಲೆಗಳನ್ನು ಹಂತಹಂತವಾಗಿ ಎಲ್‌ಕೆಜಿಯಿಂದ 12ನೇ ತರಗತಿಯವರೆಗೆ ಶಿಕ್ಷಣ ನೀಡುವ ಸಮಗ್ರ ಮಾದರಿ ಶಾಲೆಗಳನ್ನಾಗಿ ಮೇಲ್ದರ್ಜೆಗೇರಿಸಬೇಕು.

**4. ಕನ್ನಡದೊಂದಿಗೆ ಗುಣಮಟ್ಟದ ಇಂಗ್ಲಿಷ್ ಸಂವಹನ ಕಲಿಕೆ:**

ಕನ್ನಡವನ್ನು ಮುಖ್ಯ ಬೋಧನಾ ಮಾಧ್ಯಮವಾಗಿ ಉಳಿಸಿಕೊಂಡು, ಪ್ರಾಥಮಿಕ ಹಂತದಿಂದಲೇ ಮಕ್ಕಳ ವಯಸ್ಸು ಮತ್ತು ಕಲಿಕಾ ಸಾಮರ್ಥ್ಯಕ್ಕೆ ಅನುಗುಣವಾಗಿ ಇಂಗ್ಲಿಷ್ ಸಂವಹನ ಕೌಶಲವನ್ನು ಬೆಳೆಸಬೇಕು. ಸಂಭಾಷಣೆ, ಚಟುವಟಿಕೆ ಆಧಾರಿತ ಕಲಿಕೆ, ಸೂಕ್ತ ಡಿಜಿಟಲ್ ಕಲಿಕಾ ಸಾಮಗ್ರಿಗಳು ಹಾಗೂ ಶಿಕ್ಷಕರಿಗೆ ವಿಶೇಷ ಭಾಷಾ ತರಬೇತಿ ನೀಡುವ ಮೂಲಕ ಮಕ್ಕಳಿಗೆ ಇಂಗ್ಲಿಷ್ ಮಾತನಾಡುವ, ಓದುವ ಮತ್ತು ಅರ್ಥಮಾಡಿಕೊಳ್ಳುವ ಸಾಮರ್ಥ್ಯವನ್ನು ಬೆಳೆಸಬೇಕು. ಇದರಿಂದ ಕನ್ನಡದ ಬುನಾದಿಯನ್ನು ಬಲಪಡಿಸುವುದರ ಜೊತೆಗೆ, ಸರ್ಕಾರಿ ಶಾಲೆಗಳ ಬಗ್ಗೆ ಪೋಷಕರ ವಿಶ್ವಾಸವನ್ನು ಹೆಚ್ಚಿಸಲು ಸಾಧ್ಯವಾಗುತ್ತದೆ.

**5. ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವ ಮತ್ತು ಸಾಮಾಜಿಕ ಹೊಣೆಗಾರಿಕೆ ನಿಧಿ:**

ಪಾರಂಪರಿಕ ಶಾಲೆಗಳಲ್ಲಿ ಶಿಕ್ಷಣ ಪಡೆದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಹಳೆಯ ವಿದ್ಯಾರ್ಥಿಗಳನ್ನು ಗುರುತಿಸಿ, ಅವರ ಸಹಭಾಗಿತ್ವದಲ್ಲಿ ಶಾಲೆಗಳ ಅಭಿವೃದ್ಧಿಗೆ ವಿಶೇಷ ಕಾರ್ಯಕ್ರಮ ರೂಪಿಸಬೇಕು.

ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿ, ಹಳೆಯ ವಿದ್ಯಾರ್ಥಿಗಳ ಕೊಡುಗೆ ಮತ್ತು ಸಾರ್ವಜನಿಕ ಸಹಭಾಗಿತ್ವದ ಮೂಲಕ ಗ್ರಂಥಾಲಯ, ಪ್ರಯೋಗಾಲಯ, ಡಿಜಿಟಲ್ ಕಲಿಕೆ ಹಾಗೂ ಮೂಲಸೌಕರ್ಯಗಳ ಅಭಿವೃದ್ಧಿಗೆ ನೆರವು ಪಡೆಯಬೇಕು. ಈ ಉದ್ದೇಶಕ್ಕಾಗಿ 'ನಮ್ಮ ಶಾಲೆ ನಮ್ಮ ಹೆಮ್ಮೆ' ಎಂಬ ಅಭಿಯಾನವನ್ನು ರೂಪಿಸಿ, ಅನುದಾನದ ಬಳಕೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಬೇಕು.

**6. ಶಿಕ್ಷಕರ ನೇಮಕಾತಿ ಮತ್ತು ನಿರಂತರ ತರಬೇತಿ:**

ಈ ಶಾಲೆಗಳಲ್ಲಿ ಅಗತ್ಯವಿರುವ ಶಿಕ್ಷಕರ ಹುದ್ದೆಗಳನ್ನು ಆದ್ಯತೆಯ ಮೇರೆಗೆ ಭರ್ತಿ ಮಾಡಬೇಕು. ಆಧುನಿಕ ಬೋಧನಾ ವಿಧಾನಗಳು, ಡಿಜಿಟಲ್ ಶಿಕ್ಷಣ, ಭಾಷಾ ಕಲಿಕೆ ಮತ್ತು ಮಕ್ಕಳ ಸಮಗ್ರ ಬೆಳವಣಿಗೆಗೆ ಸಂಬಂಧಿಸಿದಂತೆ ಶಿಕ್ಷಕರಿಗೆ ನಿರಂತರ ವೃತ್ತಿಪರ ತರಬೇತಿ ನೀಡಬೇಕು. ಇದರಿಂದ ಶಾಲೆಗಳ ಭೌತಿಕ ಅಭಿವೃದ್ಧಿಯ ಜೊತೆಗೆ ಬೋಧನೆಯ ಗುಣಮಟ್ಟವನ್ನೂ ಸುಧಾರಿಸಲು ಸಾಧ್ಯವಾಗುತ್ತದೆ.

**7. ಸಮಗ್ರ ಪಾರಂಪರಿಕ ಶಾಲಾ ಪುನಶ್ಚೇತನ ನೀತಿ:**

ಮೇಲಿನ ಎಲ್ಲಾ ಪ್ರಸ್ತಾವನೆಗಳನ್ನು ಪ್ರತ್ಯೇಕ ಕಾರ್ಯಕ್ರಮಗಳಾಗಿ ಕೈಗೊಳ್ಳುವ ಬದಲಿಗೆ, ಅವುಗಳನ್ನು ಒಂದೇ ಸಮಗ್ರ ಯೋಜನೆಯಡಿ ಜಾರಿಗೆ ತರಲು 'ಕರ್ನಾಟಕ ಪಾರಂಪರಿಕ ಶಾಲಾ ಪುನಶ್ಚೇತನ ನೀತಿ' ರೂಪಿಸಬೇಕಾಗಿ ವಿನಂತಿಸುತ್ತೇನೆ. ಈ ನೀತಿಯಡಿ ಅರ್ಹ ಶಾಲೆಗಳ ಗುರುತಿಸುವಿಕೆ, ವಿಶೇಷ ಅನುದಾನ, ಹಂತವಾರು ಅಭಿವೃದ್ಧಿ, ಶಿಕ್ಷಕರ ನೇಮಕಾತಿ, ಹಳೆಯ ವಿದ್ಯಾರ್ಥಿಗಳ ಸಹಭಾಗಿತ್ವ ಮತ್ತು ಕಾರ್ಯಮೌಲ್ಯಮಾಪನಕ್ಕೆ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸಬೇಕು. ಯೋಜನೆಯ ಅನುಷ್ಠಾನ ಮತ್ತು ಅನುದಾನದ ಬಳಕೆಯನ್ನು ನಿಯಮಿತವಾಗಿ ಪರಿಶೀಲಿಸುವ ವ್ಯವಸ್ಥೆಯನ್ನೂ ಕಲ್ಪಿಸಬೇಕು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಗುಣಮಟ್ಟದಲ್ಲಿ ಲಿಡ್ಕರ್ ಉತ್ಪನ್ನಗಳು ಯಾವುದೇ ಬ್ರ್ಯಾಂಡ್‌ಗಿಂತ ಕಡಿಮೆಯಿಲ್ಲ

## ಸ್ವಂತ ಬ್ರ್ಯಾಂಡ್ ಸೃಷ್ಟಿಸಿ ಉದ್ಯಮಿಗಳಾಗಿ: ಚರ್ಮ ಕುಶಲಕರ್ಮಿಗಳಿಗೆ ಸಚಿವ ಕೆ.ಎಚ್. ಮುನಿಯಪ್ಪ ಕರೆ

**ಬೆಂಗಳೂರು, ಅ.28:** ಲಿಡ್ಕರ್ ಉತ್ಪನ್ನಗಳು ಲಿಬರ್ಟಿ, ಬಾಟಾ ಉತ್ಪನ್ನಗಳಿಗಿಂತ ಕಡಿಮೆ ಇಲ್ಲ ಎಂದು ಸಮಾಜ ಕಲ್ಯಾಣ ಸಚಿವ ಕೆ. ಎಚ್. ಮುನಿಯಪ್ಪ ಹೇಳಿದರು.



ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವದ್ಧಿ ನಿಗಮ (ಲಿಡ್ಕರ್) ಸುವರ್ಣ ಮಹೋತ್ಸವದ ಅಂಗವಾಗಿ ಹಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಿಮ್ಮ ಬಳಿಯೇ ತಯಾರಿಸಿ ಅವರು ಲೇಬಲ್ ಅಂಟಿಸಿಕೊಂಡು ಮಾರುತ್ತಿದ್ದಾರೆ. ನೀವು ಅವರಿಗಿಂತ ಮೇಲ್ಮುಖವಾಗಿ ಬೆಳೆಯಬೇಕು. ನಿಮ್ಮದೇ ಲೇಬಲ್ ಸೃಷ್ಟಿ ಮಾಡಿ ಉದ್ಯಮಿಗಳಾಗಿ ಬೆಳೆಯಬೇಕು ಎಂದು ಚರ್ಮ ಕುಶಲಕರ್ಮಿಗಳಿಗೆ ಕರೆ ನೀಡಿದರು.

ದೊಡ್ಡ ಚಪ್ಪಲಿ ಬ್ರ್ಯಾಂಡ್‌ಗಳಂತೆ ನಮ ಲಿಡ್ಕರ್ ಉತ್ಪನ್ನಗಳು ಕೂಡ ಪ್ರಪಂಚದ್ಯಾಂತ ನಮದೇ ದೊಡ್ಡ ಬ್ರ್ಯಾಂಡ್‌ಗಳ ಮೂಲಕ ಬೆಳೆಯಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಕಾರ್ಯನಿರ್ವಹಿಸಬೇಕು. ಜಿಲ್ಲೆಗೆ ಒಂದೊಂದು ಶೋರೂಮ್ ತೆರೆದು ಮಾರಾಟ ವ್ಯವಸ್ಥೆ ಮಾಡಿ ಎಂದು ಸಲಹೆ ನೀಡಿದರು. ಚರ್ಮ ಕುಶಲಕರ್ಮಿಗಳ ಮಕ್ಕಳನ್ನು ವಿದ್ಯಾಭ್ಯಾಸದ ಕಡೆ ಗಮನ ಹರಿಸುವಂತೆ ಮಾಡಬೇಕು. ವೈದ್ಯರು, ಎಂಜಿನಿಯರ್, ಕೆಎಎಸ್ ಆಗಬೇಕು ಎಂಬ ಬಯಕೆ ಇದೆ. ಅದಕ್ಕಾಗಿ ಪ್ರತಿ ಹೋಬಳಿಯಲ್ಲೂ ಒಂದು ವಸತಿ ಶಾಲೆಯನ್ನು ತೆರೆಯಲು ನಿರ್ಧರಿಸಿದ್ದೇವೆ ಎಂದರು.

ಈ ಮಹಾತ್ವಕಾಂಕ್ಷಿ ಯೋಜನೆ ಆರಂಭಿಸಲು ಎಲ್ಲಾ ಸಿದ್ದತೆಗಳು ನಡೆದಿವೆ. ಪ್ರಸ್ತುತ ಇರುವ ಭವನಗಳನ್ನು ಉಪಯೋಗಿಸಿಕೊಂಡು ಅಲ್ಲಿ ಸ್ಪರ್ಧಾತಕ ಪರೀಕ್ಷೆಗಳಿಗೆ ತರಬೇತಿ ನೀಡಲು ಸರ್ಕಾರ ಮುಂದಾಗಿದೆ ಎಂದು ಹೇಳಿದರು.

ಅಗತ್ಯ ಬಿದ್ದರೆ ಹೊಸ ಭವನಗಳನ್ನು ನಿರ್ಮಿಸಲಾಗುವುದು ಎಂದ ಅವರು, ಶಿಕ್ಷಣ ವ್ಯವಸ್ಥೆಯಲ್ಲಿ ಗುಣಮಟ್ಟ ತರಲು ಮುಖ್ಯಮಂತ್ರಿ ಬಳಿ ಮಾತನಾಡಿ ತೀರ್ಮಾನಿಸುತ್ತೇವೆ ಎಂದರು.

ಲಿಡ್ಕರ್‌ನ ಅಧ್ಯಕ್ಷ ಮುಂಡರಗಿ ನಾಗರಾಜ ಮಾತನಾಡಿ, ಲಿಡ್ಕರ್ ಐವತ್ತು ವರ್ಷದ ಸಾರ್ಥಕ ಸಾಧನೆ ಅನುಭವ, ಹೋರಾಟ, ಪರಂಪರೆ, ಕೌಶಲ್ಯ ಮತ್ತು ಸಾಧನೆ, ಇತಿಹಾಸ ಮರುಕಳಿಸಬೇಕು.

ಮಾದರ ಚೆನ್ನಯ್ಯ ನಮಗೆ ಸ್ಫೂರ್ತಿ. ಚರ್ಮ ಕುಶಲಕರ್ಮಿಗಳಿಗೆ ಜಾತಿ ಮುಖ್ಯ ಅಲ್ಲ, ಕೌಶಲ್ಯ ಮುಖ್ಯ,ಇವರ ಶ್ರಮ ನಮ್ಮ ಶಕ್ತಿ. ಇವರು ಉದ್ಯಮಗಳಾಗಬೇಕು. ಸ್ವಂತ ಬ್ರ್ಯಾಂಡ್ ಮಾಲೀಕರಾಗಬೇಕು. ಚರ್ಮ ಕಾಯಕ ಇದು ಜಾತಿಯ ಸಂಕೇತವಲ್ಲ ಇದೊಂದು ಸಂಸ್ಕೃತಿ. ವೈಜಾನಿಕ ಅಡಿಪಾಯದಲ್ಲಿ ಬೆಳೆಯಬೇಕು ಎಂದರು.

ಮಾಜಿ ಸಚಿವ ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಸರ್ಕಾರದ ಕಾರ್ಯದರ್ಶಿ ಮೋಹನ್ ರಾಜ್, ಆಯುಕ್ತ ಎನ್.ಎಂ. ನಾಗರಾಜ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷ ನರೇಂದ್ರ, ಅಲೆಮಾರಿ ನಿಗಮದ ಅಧ್ಯಕ್ಷೆ ಪಲ್ಲವಿ, ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಅಶೋಕ್ ಸಾಲಪ್ಪ, ಆದಿಜಾಂಬವ ನಿಗಮದ ಅಧ್ಯಕ್ಷ ಮಂಜುನಾಥ್, ಆರ್ಯ ವೈಶ್ಯ ನಿಗಮದ ಅಧ್ಯಕ್ಷ ರಾಮಪ್ರಸಾದ್, ವ್ಯವಸ್ಥಾಪಕ ನಿರ್ದೇಶಕ ಡಾ.ಎಚ್. ನಟರಾಜ್ ಹಾಗೂ ಲಿಡ್ಕರ್‌ನ ಮಾಜಿ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು, ಅಧಿಕಾರಿಗಳು ಮುಂತಾದ ಇತರ ದಲಿತ ಸಂಘಟನೆ ಮುಖಂಡರು ಉಪಸ್ಥಿತರಿದ್ದರು.



ಸಿಎಂ ಡಿ.ಕೆ.ಶಿವಕುಮಾರ್ ಅವರು ಗೃಹಕಚೇರಿ ಕೃಷ್ಣಾದಲ್ಲಿ ಕೃಷ್ಣಾಭಾಗ್ಯ ಜಲ ನಿಗಮದ ಆಡಳಿತ ಮಂಡಳಿ ಸಭೆಯನ್ನು ಬುಧವಾರ ನಡೆಸಿದರು. ಸಚಿವ ಚಲುವರಾಯಸ್ವಾಮಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಸಿಎಂ ಆರ್ಥಿಕ ಸಲಹೆಗಾರ ಎಲ್. ಕೆ.ಅತೀಕ್, ಜಲಸಂಪನ್ಮೂಲ ಹಾಗೂ ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ತಾಂತ್ರಿಕ ಸಲಹೆಗಾರ ಕೆ.ಜಯಪ್ರಕಾಶ್, ಕೆಬಿಜೆಎನ್‌ಎಲ್ ವ್ಯವಸ್ಥಾಪಕ ನಿರ್ದೇಶಕ ಕೃಷ್ಣಮೂರ್ತಿ ಬಿ ಕುಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು.

## ಕರ್ನಾಟಕದಲ್ಲಿ ಕಾಂಗ್ರೆಸ್ ಗೆದ್ದಿದ್ದೆಷ್ಟು: ಮೋದಿ ಲೇವಡಿ

**ನವದೆಹಲಿ, ಅ.28:** ನಾಲ್ಕು ರಾಜ್ಯಗಳ 28 ವಿಧಾನ ಪರಿಷತ್ ಸ್ಥಾನಗಳಿಗೆ ನಡೆದ ಚುನಾವಣೆಯ ಫಲಿತಾಂಶಗಳ ಪ್ರಕಟವಾಗಿದ್ದು ಪ್ರಧಾನಿ ನರೇಂದ್ರ ಮೋದಿ ಕಾಂಗ್ರೆಸ್ ಅನ್ನು ಕುಟುಕಿದ್ದಾರೆ.ಉತ್ತರ ಪ್ರದೇಶ, ಮಹಾರಾಷ್ಟ್ರ, ಬಿಹಾರ ಮತ್ತು ಕರ್ನಾಟಕದಲ್ಲಿ ಒಟ್ಟು 28 ಸ್ಥಾನಗಳಿಗೆ ಚುನಾವಣೆಗಳು ನಡೆದಿದ್ದು ಕಾಂಗ್ರೆಸ್ ಒಂದೇ ಒಂದು ಸ್ಥಾನವನ್ನು ಗೆಲ್ಲಲು ವಿಫಲವಾಗಿದೆ. ಈ ಚುನಾವಣೆಗಳನ್ನು ಬ್ಯಾಲೆಟ್ ಪೇಪರ್ ಬಳಸಿ ನಡೆಸಲಾಗಿದೆ ಎಂದು ತಮ್ಮ ಎಕ್ಸ್‌ನಲ್ಲಿ ಬರೆದಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟವು ಕರ್ನಾಟಕದ 4 ಮತ್ತು ಉತ್ತರ ಪ್ರದೇಶದಲ್ಲಿ ಬಿಜೆಪಿ 4 ಮತ್ತು ಎಸ್‌ಪಿ 2 ಸ್ಥಾನ ಗೆದ್ದಿವೆ. ಬ್ಯಾಲೆಟ್ ಪೇಪರ್ ಬಳಸಿ ಚುನಾವಣೆಗಳು ನಡೆದರೂ ಕಾಂಗ್ರೆಸ್ ಎಷ್ಟು ಸ್ಥಾನ ಗೆದ್ದಿದೆ ಎಂದು ಊಹಿಸಿ ಎಂದು ವ್ಯಂಗ್ಯವಾಡಿದ್ದಾರೆ.

# ಮೇಲ್ಮನೆ ಚುನಾವಣೆಯಲ್ಲಿ ಎನ್‌ಡಿಎ ಗೆಲುವು ಕಾಂಗ್ರೆಸ್‌ಗೆ ಕಪಾಳಮೋಕ್ಷ

## 2028ರಲ್ಲೂ ನಾವೇ ಅಧಿಕಾರಕ್ಕೆ ಬರುತ್ತೇವೆ ಎಂದು ದರ್ಪ ಮೆರೆದವರಿಗೆ ಗರ್ವಭಂಗ ; ಹೆಚ್.ಡಿ ಕುಮಾರಸ್ವಾಮಿ

**ನವದೆಹಲಿ, ಅ.28:** ವಿಧಾನ ಪರಿಷತ್ ಶಿಕ್ಷಕರ ಹಾಗೂ ಪದವೀಧರ ಕ್ಷೇತ್ರಗಳ ಚುನಾವಣಾ ಫಲಿತಾಂಶವು ಪ್ರಸ್ತುತ ಆಡಳಿತದಲ್ಲಿರುವ ಕಾಂಗ್ರೆಸ್ ಸರ್ಕಾರದ ದುರಾಡಳಿತ, ರೈತ ವಿರೋಧಿ ಧೋರಣೆ ಹಾಗೂ ಭ್ರಷ್ಟ ನೀತಿಗಳಿಗೆ ಮತದಾರರು ನೀಡಿರುವ ನೇರ ಕಪಾಳಮೋಕ್ಷ ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ತೀವ್ರ ವಾಗ್ದಾಳಿ ನಡೆಸಿದರು.



ಎನ್ಡಿಎ ಮೈತ್ರಿಕೂಟದ ನಾಲ್ಕೂ ಅಭ್ಯರ್ಥಿಗಳ ಜಯವು ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ಹೋರಾಟಕ್ಕೆ ನಾಡಿನ ಜನತೆಯ ಆಶೀರ್ವಾದವಿದೆ ಎಂಬುದಕ್ಕೆ ಸ್ಪಷ್ಟ ದಿಕ್ಸೂಚಿ ಎಂದು ಬಣ್ಣಿಸಿದರು.

ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಎನ್ಡಿಎ ಮೈತ್ರಿಕೂಟದ ಅಭ್ಯರ್ಥಿಗಳಾದ ಶಶೀಲ್ ನಮೋಶಿ, ಎಸ್.ವಿ.ಸಂಕನೂರು, ಕೆ.ಎಂ.ಸುರೇಶ್ ಹಾಗೂ ಎ.ಪಿ.ರಂಗನಾಥ್ ಗೆಲುವು ಸಾಧಿಸಿದ್ದಾರೆ. ಅವರೆಲ್ಲರಿಗೂ ನನ್ನ ಅಭಿನಂದನೆಗಳು.

ಜೆಡಿಎಸ್ ಮುಖಂಡರು, ಕಾರ್ಯಕರ್ತರ ಅತ್ಯುತ್ತಮ ಸಮನ್ವಯತೆಯಿಂದ ಇಂಥ ಗೆಲುವು ಸಾಧ್ಯವಾಗಿದೆ. 2028ರಲ್ಲೂ ನಾವೇ ಅಧಿಕಾರಕ್ಕೆ ಬರುತ್ತೇವೆ ಎಂದು ಸಾರ್ವಜನಿಕವಾಗಿ ಬೀಗುತ್ತಿದ್ದ ಮುಖ್ಯಮಂತ್ರಿಗಳು ಮತ್ತು ಸಚಿವರ ಅಹಂಕಾರವನ್ನು ಪ್ರಜ್ಞಾವಂತ ಮತದಾರರು ಮಣ್ಣುಪಾಲು ಮಾಡಿದ್ದಾರೆ ಎಂದು ಕೇಂದ್ರ ಸಚಿವರು ಹೇಳಿದರು.

ದಿನನಿತ್ಯ ಕೇವಲ ಬಾಯಿಮಾತಿನ ಭರವಸೆಗಳು ಮತ್ತು ಘೋಷಣೆಗಳಿಗೆ ಸೀಮಿತವಾಗಿರುವ ಈ ಸರ್ಕಾರದ ವಿರುದ್ಧ ಜನ ಆಕ್ರೋಶಗೊಂಡಿದ್ದಾರೆ. ಬಿಡದಿಯ ರೈತ ವಿರೋಧಿ ಭೂಸ್ವಾಧೀನ ನೀತಿ, ನೈಸ್ ಯೋಜನೆಯ ಅಕ್ರಮಗಳು, ಕೆಪಿಎಸ್ಸಿ ಪರೀಕ್ಷಾ ಹಗರಣಗಳು ಮತ್ತು ಯುವಜನತೆಗೆ ಮಾಡಿದ ಮೋಸ ಹಾಗೂ ಸ್ವತಃ ಮುಖ್ಯಮಂತ್ರಿಗಳೇ ಹುಟ್ಟುಹಾಕಿದ ಸ್ಟಿಂಗ್ ಆಪರೇಷನ್ ಪ್ರಕರಣಗಳ ವಿರುದ್ಧ ಮತದಾರರು ತಮ್ಮ ಆಕ್ರೋಶವನ್ನು ಮತಗಳ ರೂಪದಲ್ಲಿ ಹೊರಹಾಕಿದ್ದಾರೆ ಎಂದು ಅವರು ಸ್ಪಷ್ಟಪಡಿಸಿದರು.

### ಪ್ರಧಾನಿ ಮೋದಿ ಹಾಗೂ ದೇವೇಗೌಡರ ಕೊಡುಗೆ ಸ್ಮರಣೆ

ಗೆಲುವು ಸಾಧಿಸಿದ ನಾಲ್ಕೂ ಮೈತ್ರಿ ಅಭ್ಯರ್ಥಿಗಳಿಗೆ ಹಾಗೂ ಹಗಲಿರುಳು ಶ್ರಮಿಸಿದ ಬಿಜೆಪಿ ಮತ್ತು ಜೆಡಿಎಸ್ನ ಕಾರ್ಯಕರ್ತರು, ಶಾಸಕರು ಮತ್ತು ಮುಖಂಡರಿಗೆ ಅಭಿನಂದನೆ ಸಲ್ಲಿಸಿದ ಸಚಿವರು; ಉಭಯ ಪಕ್ಷಗಳ ನಡುವೆ ಗಟ್ಟಿಯಾದ ಸಮನ್ವಯತೆ ಮೂಡಿಸಲು ಪ್ರತಿದಿನ ತಮ್ಮೊಂದಿಗೆ ಸಂಪರ್ಕದಲ್ಲಿದ್ದು ದೊಡ್ಡ ಜವಾಬ್ದಾರಿ ನಿಭಾಯಿಸಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಶ್ರಮವನ್ನು ವಿಶೇಷವಾಗಿ ಶ್ಲಾಘಿಸಿದರು. ದೇಶದ ಸಮಗ್ರ ಪ್ರಗತಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮಹತ್ತರ ಕೊಡುಗೆ ಮತ್ತು ಅವರ ಜನಪ್ರಿಯ ವರ್ಚಸ್ಸು ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾದ ಹೆಚ್.ಡಿ. ದೇವೇಗೌಡರ ಸುದೀರ್ಘ ಪರಿಶ್ರಮ ಮತ್ತು ಜನರಲ್ಲಿದ್ದ ಅವರ ಮೇಲಿನ ಒಲವು ಈ ಗೆಲುವಿಗೆ ಪ್ರಮುಖ ಅಡಿಪಾಯವಾಗಿದೆ. 2028ರಲ್ಲಿ ರಾಜ್ಯದಲ್ಲಿ ಭ್ರಷ್ಟಾಚಾರ ರಹಿತ ಮತ್ತು ಅಭಿವೃದ್ಧಿಪರ ಆಡಳಿತ ಮರಳಿ ತರಬೇಕೆಂಬ ಸ್ಪಷ್ಟ ಸಂದೇಶವನ್ನು ಮತದಾರರು ನೀಡಿದ್ದಾರೆ ಎಂದು ಅವರು ತಿಳಿಸಿದರು.

## ಕೇಂದ್ರ ಸರ್ಕಾರಿ ನೌಕರರ ತುಟ್ಟಿಭತ್ಯೆ ಶೇ.3 ಹೆಚ್ಚಳ; ಜುಲೈ 1ರಿಂದಲೇ ಜಾರಿ

**ನವದೆಹಲಿ, ಅ.28:** ಕೇಂದ್ರ ಸರ್ಕಾರ ದೀಪಾವಳಿ ಹಬ್ಬಕ್ಕೂ ಮುನ್ನವೇ ತನ್ನ ನೌಕರರಿಗೆ ಭರ್ಜರಿ ಗಿಫ್ಟ್ ನೀಡಿದ್ದು, ತುಟ್ಟಿಭತ್ಯೆ (ಡಿಎ) ಯನ್ನು ಶೇಕಡಾ ಮೂರರಷ್ಟು ಹೆಚ್ಚಿಸಲು ಅನುಮೋದನೆ ನೀಡಿದೆ. ಕೇಂದ್ರ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು ಶೇ. 3ರಷ್ಟು ಹೆಚ್ಚಳ ಮಾಡಲು ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರು ಬುಧವಾರ ತಿಳಿಸಿದ್ದಾರೆ. ಈ ಪರಿಷ್ಕೃತ ತುಟ್ಟಿಭತ್ಯೆಯು 2026ರ ಜುಲೈ 1ರಿಂದಲೇ ಪೂರ್ವಾನ್ವಯವಾಗುವಂತೆ ಜಾರಿಗೆ ಬರಲಿದೆ ಎಂದು ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಕೇಂದ್ರ ಸರ್ಕಾರದ ಈ ಹೊಸ ನಿರ್ಧಾರದಿಂದಾಗಿ ನೌಕರರ ತುಟ್ಟಿಭತ್ಯೆಯು ಮೂಲ ವೇತನದ (ಃಛುಿಛಿ ಕಚಿಥಿ) ಶೇ. 60ರಿಂದ ಶೇ. 63ಕ್ಕೆ ಏರಿಕೆಯಾಗಿದೆ. ಇದೇ ರೀತಿ ಪಿಂಚಣಿದಾರರಿಗೆ ನೀಡಲಾಗುವ ತುಟ್ಟಿ ಪರಿಹಾರದಲ್ಲೂ (DR ? Dearness Relief) ಅನುರೂಪವಾದ ಹೆಚ್ಚಳವಾಗಲಿದೆ. ಈ ತುಟ್ಟಿಭತ್ಯೆ ಏರಿಕೆಯಿಂದ ಸರ್ಕಾರಕ್ಕೆ ಹೆಚ್ಚುವರಿಯಾಗಿ 10,016 ಕೋಟಿ ರೂ ವ್ಯಯವಾಗಲಿದೆ. ಕೇಂದ್ರ ಸರ್ಕಾರವು ವರ್ಷಕ್ಕೆ ಎರಡು ಬಾರಿ ಡಿಎ ಹೆಚ್ಚಳವನ್ನು ಘೋಷಿಸುತ್ತದೆ. ಪ್ರತಿ ವರ್ಷ ಜನವರಿ ಮತ್ತು ಜುಲೈ ತಿಂಗಳಲ್ಲಿ ಡಿಎ ಹೆಚ್ಚಳ ಮಾಡುತ್ತದೆ. ಸಾಮಾನ್ಯವಾಗಿ ಹೋಳಿ ಅಥವಾ ದೀಪಾವಳಿಯಂತಹ ಹಬ್ಬಗಳ ಸಮಯದಲ್ಲಿ ಕೇಂದ್ರ ಸರ್ಕಾರ, ತನ್ನ ನೌಕರರಿಗೆ ಸಿಹಿ ಸುದ್ದಿ ನೀಡುತ್ತದೆ.



ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಬುಧವಾರ ಭೇಟಿ ಮಾಡಿದ ಪರಿಶಿಷ್ಟ ಜಾತಿ ಹಾಗೂ ಪಂಗಡದ ಸಚಿವರು ಹಾಗೂ ಶಾಸಕರು ಹಾಗೂ ಶ್ರೀಗಳು ಸಮುದಾಯದ ವಿವಿಧ ಬೇಡಿಕೆಗಳ ಕುರಿತು ಸಮಾಲೋಚನೆ ನಡೆಸಿದರು. ಮಹರ್ಷಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮೀಜಿ, ಸಚಿವರಾದ ಸತೀಶ್ ಜಾರಕಿಹೊಳಿ, ಟಿ ರಘುಮೂರ್ತಿ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ, ಅನ್ನಪೂರ್ಣ ತುಕಾರಾಂ, ಡಾ. ಶ್ರೀನಿವಾಸ್ ಇತರರಿದ್ದರು.

# ಪರಿಷತ್ ಚುನಾವಣೆ ಫಲಿತಾಂಶದಿಂದ ಕಾಂಗ್ರೆಸ್ ಪಕ್ಷಕ್ಕೆ ಹಿನ್ನಡೆಯಾಗಿಲ್ಲ

**ಬೆಂಗಳೂರು, ಅ.28:** ಪದವೀಧರ ಮತ್ತು ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣಾ ಫಲಿತಾಂಶಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಯಾವುದೇ ಹಿನ್ನಡೆಯಾಗಿಲ್ಲ. ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಒಂದಾಗಿ ಸ್ಪರ್ಧಿಸಿದ್ದರಿಂದ ಅವರಿಗೆ ಹೆಚ್ಚಿನ ಬಲ ಬಂದಿದೆ ಎಂದು ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಚುನಾವಣಾ ಫಲಿತಾಂಶದ ಕುರಿತು ಕೆಲವರ ವಾದಗಳನ್ನು ತಳ್ಳಿಹಾಕಿದರು. 'ನಾವು ಈ ಚುನಾವಣೆಯಲ್ಲಿ ನಮ್ಮ ಕೈಯಲ್ಲಿದ್ದ ಯಾವುದೇ ಸೀಟುಗಳನ್ನು ಕಳೆದುಕೊಂಡಿಲ್ಲ. ಸ್ಪರ್ಧಿಸಿದ್ದ ನಾಲ್ಕು ಸ್ಥಾನಗಳಲ್ಲಿ ಕೇವಲ ಒಂದು ಮಾತ್ರ ನಮ್ಮದಾಗಿತ್ತು, ಉಳಿದ ಮೂರು ಸ್ಥಾನಗಳು ಮೊದಲೇ ವಿರೋಧ ಪಕ್ಷಗಳ ಬಳಿಯಿದ್ದವು. ಈಗ ಅವರು ತಮ್ಮ ಸ್ಥಾನಗಳನ್ನು ಮರಳಿ ಗೆದ್ದುಕೊಂಡಿದ್ದಾರೆ ಅಷ್ಟೇ' ಎಂದರು.

ಮುಖ್ಯಮಂತ್ರಿಗಳ ಬದಲಾವಣೆ ಅಥವಾ ನಾಯಕತ್ವದ ವೈಫಲ್ಯದಿಂದಲೇ ಈ ಸೋಲಾಗಿದೆ ಎಂಬ ವಾದವನ್ನು ಸತೀಶ್ ಜಾರಕಿಹೊಳಿ ತಳ್ಳಿಹಾಕಿದರು. 'ಹಿಂದೆ ಸಿದ್ದರಾಮಯ್ಯ ಹಾಗೂ ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದ ಕಾಲದಲ್ಲೂ ನಾವು ಈ ಕ್ಷೇತ್ರಗಳಲ್ಲಿ ಸೋಲುಂಡಿದ್ದೆವು. ಇದು ಹೊಸದಲ್ಲ ಎಂದಿದ್ದಾರೆ.

ಈ ಫಲಿತಾಂಶವನ್ನು ಮುಂದಿನ ವಿಧಾನಸಭೆ ಚುನಾವಣೆಗೆ ಮಾನದಂಡವಾಗಿ ಪರಿಗಣಿಸಲು ಸಾಧ್ಯವಿಲ್ಲ' ಎಂದು ಅವರು ಸ್ಪಷ್ಟಪಡಿಸಿದರು. ಒಟ್ಟಾರೆಯಾಗಿ, ವಿಧಾನ ಪರಿಷತ್ ಚುನಾವಣೆಯ ಈ ಫಲಿತಾಂಶವು ಪಕ್ಷದ ಆಡಳಿತ ವೈಫಲ್ಯದ ಪ್ರತಿಬಿಂಬವಲ್ಲ ಎಂದು ಅವರು ಪುನರುಚ್ಚರಿಸಿದ್ದಾರೆ.

# ಫಲಿತಾಂಶ ಅಚ್ಚರಿ ತಂದಿಲ್ಲ, ಇದು ಎನ್‌ಡಿಎ ಗೆಲುವು, ಬಿಜೆಪಿಯದ್ದಲ್ಲ

**ಬೆಂಗಳೂರು, ಅ.28:** ವಿಧಾನ ಪರಿಷತ್ ಚುನಾವಣೆಯಲ್ಲಿ ನಾಲ್ಕೂ ಕ್ಷೇತ್ರಗಳಲ್ಲಿಯೂ (2 ಶಿಕ್ಷಕರ ಮತ್ತು 2 ಪದವೀಧರರ ಕ್ಷೇತ್ರಗಳು) ಪಕ್ಷವು ಹೀನಾಯವಾಗಿ ಸೋಲು ಕಂಡಿರುವ ಹಿನ್ನೆಲೆಯಲ್ಲಿ, ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಬುಧವಾರ ಪಕ್ಷದ ಸೋಲನ್ನು ಒಪ್ಪಿಕೊಂಡಿದ್ದಾರೆ. ಈ ಫಲಿತಾಂಶ ಅಚ್ಚರಿಯಲ್ಲ. ಎನ್‌ಡಿಎ ಗೆದ್ದಿರುವ ಪೈಕಿ ಮೂರು ಸ್ಥಾನಗಳು ಈ ಹಿಂದೆ ಬಿಜೆಪಿ ವಶದಲ್ಲಿದ್ದವು ಎಂದು ತಿಳಿಸಿದ್ದಾರೆ.



■ ವಿಧಾನ ಪರಿಷತ್ ಚುನಾವಣೆ ಸೋಲು ಒಪ್ಪಿದ ಬಿ.ಕೆ. ಹರಿಪ್ರಸಾದ್

ಮತಪತ್ರಗಳನ್ನು ಬಳಸಲಾಗಿದ್ದರೂ ಎನ್‌ಡಿಎ ಗೆಲುವು ಸಾಧಿಸಿರುವ ಕುರಿತು ಪ್ರತಿಕ್ರಿಯಿಸಿದ ಹರಿಪ್ರಸಾದ್, ನಾವು ಶಿಕ್ಷಕರು ಮತ್ತು ಪದವೀಧರರ ಕ್ಷೇತ್ರಗಳ ನಾಲ್ಕೂ ಸ್ಥಾನಗಳನ್ನು ಕಳೆದುಕೊಂಡಿದ್ದೇವೆ. ಪದವೀಧರರು ಮತ್ತು ಶಿಕ್ಷಕರು ನೀಡಿರುವ ತೀರ್ಪನ್ನು ಸ್ವೀಕರಿಸುತ್ತೇನೆ. ಈ ಮೂರು ಸ್ಥಾನಗಳು ಈ ಹಿಂದೆ ಬಿಜೆಪಿ ಬಳಿಯಲ್ಲಿದ್ದ ಕಾರಣ, ಇದೇನೂ ನಮಗೆ ಆಶ್ಚರ್ಯದ ಸಂಗತಿಯಲ್ಲ. ಇದು ಬಿಜೆಪಿಯ ಗೆಲುವಲ್ಲ, ಬದಲಾಗಿ ಎನ್‌ಡಿಎ ಮೈತ್ರಿಕೂಟದ ಗೆಲುವು. ಕಳೆದ 10 ತಿಂಗಳುಗಳಿಂದ ಶ್ರಮಿಸಿದ ನನ್ನ ಕಾಂಗ್ರೆಸ್ ನಾಯಕರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಕಾರ್ಯಕರ್ತರು ಹಾಗೂ ಮತದಾರರಿಗೆ ನಾನು ಧನ್ಯವಾದ ಅರ್ಪಿಸುತ್ತೇನೆ ಎಂದು ಹೇಳಿದರು.

ವಾರಾಣಸಿಯಲ್ಲಿ ಬಿಜೆಪಿ ವಿರುದ್ಧ ಸಮಾಜವಾದಿ ಪಕ್ಷವು ಗಳಿಸಿದ ಗೆಲುವನ್ನು ಉಲ್ಲೇಖಿಸಿದ ಅವರು, ಗೆಲುವು ಮತ್ತು ಸೋಲು ಪ್ರಜಾಪ್ರಭುತ್ವದ ಭಾಗಗಳಾಗಿವೆ; ಅಲ್ಲದೆ, ತಮ್ಮ ಪಕ್ಷವು ತನ್ನ ನ್ಯೂನತೆಗಳನ್ನು ಗುರುತಿಸಿ, ಅವುಗಳನ್ನು ಸರಿಪಡಿಸಿಕೊಳ್ಳಲಿದೆ ಎಂದರು. ರಾಷ್ಟ್ರೀಯ ನೀತಿಯ ಭಾಗವಾಗಿ ಇವಿಎಂಗಳನ್ನು ವಿರೋಧಿಸಲು ನಮ್ಮ ಹೈಕಮಾಂಡ್ ನಿರ್ಧಾರ ತೆಗೆದುಕೊಂಡಿದೆ. ಆದ್ದರಿಂದ, ಆದ್ಯತಾ ಮತದಾನ ವ್ಯವಸ್ಥೆ ಇರುವ ಈ ಚುನಾವಣೆಗಳಲ್ಲೂ ಇವಿಎಂಗಳು ಕೆಲಸ ಮಾಡುವುದಿಲ್ಲ. ಇದೇ ಕಾರಣಕ್ಕಾಗಿ, ಇಲ್ಲಿ ಮತಪತ್ರಗಳನ್ನು ಬಳಸಲಾಗಿದೆ. ಕೇವಲ ಕರ್ನಾಟಕದಲ್ಲಿ ಮಾತ್ರವಲ್ಲ, ಆದ್ಯತಾ ಮತದಾನ ವ್ಯವಸ್ಥೆ ಇರುವ ಎಲ್ಲ ಕಡೆಗಳಲ್ಲೂ ಮತಪತ್ರಗಳನ್ನು ಬಳಸುವುದು ಅನಿವಾರ್ಯವಾಗಿದೆ ಎಂದರು.

# ಬಸವ ಜಯಂತಿ ಹೊತ್ತಿಗೆ ಆಧುನಿಕ ಅನುಭವ ಮಂಟಪ ಪೂರ್ಣ

**ಕೆ.ಆರ್.ನಗರ, ಅ.28:** ಬಸವಕಲ್ಯಾಣದಲ್ಲಿ 750 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಆಧುನಿಕ ಅನುಭವ ಮಂಟಪ ಕಾಮಗಾರಿ ಬರುವ ಬಸವ ಜಯಂತಿಯ ವೇಳೆಗೆ ಪೂರ್ಣವಾಗಲಿದೆ ಎಂದು ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.



■ ಅಕ್ಕ, ಬಸವಣ್ಣ, ಅಲ್ಲಮರ ಮಾತನಾಡುವ ರೊಬೋಟಿಕ್ ಪುತ್ಥಳಿ ಅಭಿವೃದ್ಧಿ: ಸಚಿವ ಈಶ್ವರ ಖಂಡ್ರೆ

ಕೆ.ಆರ್.ನಗರದಲ್ಲಿ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಸಮಾಜದ ಸಂಘಟನೆಗಳ ಒಕ್ಕೂಟ ಬುಧವಾರ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, 770 ಅಮರಗಣಂಗಳ ಹೆಸರಿನಲ್ಲಿ 770 ಕಂಬಗಳ ಮೇಲೆ ಭವ್ಯ ಅತ್ಯಾಧುನಿಕ ಅನುಭವ ಮಂಟಪವನ್ನು ನಿರ್ಮಿಸಲಾಗುತ್ತಿದ್ದು, ಬಹುತೇಕ ಶೇ.80ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಆಧುನಿಕ ಅನುಭವ ಮಂಟಪ ಲೋಕಾರ್ಪಣೆಯಾದ ಬಳಿಕ ದೇಶದ ಮಹತ್ವದ ಪ್ರವಾಸಿ ತಾಣಗಳಲ್ಲಿ ಒಂದಾಗಲಿದೆ ಎಂದೂ ತಿಳಿಸಿದರು.

ಜಗತ್ತಿಗೆ ಪ್ರಜಾಪ್ರಭುತ್ವ ಮತ್ತು ಸಂಸತ್ತಿನ ಪರಿಕಲ್ಪನೆಯನ್ನು ಕಟ್ಟಿಕೊಟ್ಟಿದ್ದೇ ಬಸವಕಲ್ಯಾಣದ ಅನುಭವ ಮಂಟಪ. 12ನೇ ಶತಮಾನದಲ್ಲಿ ಅನುಭವ ಮಂಟಪದಲ್ಲಿ ನಡೆಯುತ್ತಿದ್ದ ಶರಣರ ಚಿಂತನ ಮಂಥನವನ್ನು ಇಂದಿನ ಯುವಪೀಳಿಗೆಗೆ ದೃಶ್ಯ ಶ್ರವಣದ ಮೂಲಕ ತಲುಪಿಸುವ ಸಲುವಾಗಿ ರೋಬೋಟಿಕ್ ತಂತ್ರಜ್ಞಾನ ಬಳಸಲಾಗುತ್ತಿದೆ. ಈ ತಂತ್ರಜ್ಞಾನದ ನೆರವಿನಿಂದ ಅಲ್ಲಮಪ್ರಭು, ಬಸವಣ್ಣ ಹಾಗೂ ಅಕ್ಕಮಹಾದೇವಿ ಸೇರಿದಂತೆ 20 ಶರಣರ ರೋಬೋ ಪುತ್ತಳಿಗಳನ್ನು ನಿರ್ಮಿಸಲಾಗುತ್ತಿದ್ದು, ರೊಬೋಟ್ ಪುತ್ಥಳಿ ಗಳು ಸಂಭಾಷಣೆ ನಡೆಸುವ ಮೂಲಕ ಅಂದಿನ ಅನುಭವ ಮಂಟಪದ ಚಿತ್ರಣವನ್ನು ಸಾಕ್ಷಾತ್ಕರಿಸಲಿವೆ ಎಂದು ವಿವರಿಸಿದರು.

### ಇಷ್ಟಲಿಂಗ ಪೂಜೆಯ ವೈಜ್ಞಾನಿಕ ಅನುಭವಕ್ಕೂ ಅವಕಾಶ

ಐಐಟಿ ಹೈದ್ರಾಬಾದ್ ಮತ್ತು ಐಐಟಿ ಖರಗ್‌ಪುರದ ನೆರವಿನಿಂದ ವೈದ್ಯಕೀಯ ಉಪಕರಣವನ್ನು ವಿಶೇಷವಾಗಿ ರೂಪಿಸಲಾಗಿದ್ದು, ಅನುಭವ ಮಂಪಟಕ್ಕೆ ಬರುವವರಿಗೆ ವೈಜ್ಞಾನಿಕವಾಗಿ ಇಷ್ಟಲಿಂಗ ಪೂಜೆ ಮಾಡುವುದರಿಂದ ಮನಸ್ಸು, ಮೆದುಳು ಮತ್ತು ದೇಹದ ಮೇಲೆ ಆಗುವ ಪರಿಣಾಮದ ಸಾಕ್ಷಾತ್ ಅನುಭವ ಪಡೆಯುವ ಅವಕಾಶ ಕಲ್ಪಿಸಲಾಗಿದೆ. ಇಲ್ಲಿ ಮೊದಲಿಗೆ ಸಂದರ್ಶಕರ ಹೃದಯ ಬಡಿತ, ನಾಡಿಮಿಡಿತ, ಮೆದುಳಿನ ರಕ್ತ ಸಂಚಾರ ಮೊದಲಾದ ಅಂಶಗಳನ್ನು ದಾಖಲಿಸಿ ನಂತರ ಅವರಿಗೆ ಇಷ್ಟಲಿಂಗ ಪೂಜೆ ಮಾಡಲು ಅವಕಾಶ ನೀಡಲಾಗುವುದು. ನಂತರ ನಾಡಿ ಮಿಡಿತ, ಹೃದಯ ಬಡಿತದ ಪರೀಕ್ಷೆ ಮಾಡಿ ಅವರಲ್ಲಾಗುವ ಶಾರೀರಿಕ ಬದಲಾವಣೆ ವಿವರವನ್ನು ತಿಳಿಸಲಾಗುವುದು. ಮನಸ್ಸನ್ನು ನಿರಾಳಗೊಳಿಸುವಲ್ಲಿ ಇಷ್ಟಲಿಂಗ ಪೂಜೆ ಎಷ್ಟು ಸಹಕಾರಿ ಎಂಬುದನ್ನು ಈ ವೈದ್ಯಕೀಯ ಉಪಕರಣ ಸಾಬೀತು ಪಡಿಸಲಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

# 31 ಲಕ್ಷ ಬೋಗಸ್ ಮತದಾರರ ಗುರುತಿನ ಚೀಟಿ ಮುದ್ರಣ, ಎಸ್‌ಐಆರ್ ಬಗ್ಗೆ ಗೊತ್ತಿದ್ದರೂ ಟೆಂಡರ್

**ಬೆಂಗಳೂರು, ಅ.28:** ಎಸ್‌ಐಆರ್ ನಡೆಯಲಿದೆ ಎಂದು ಗೊತ್ತಿದ್ದರೂ ರಾಜ್ಯ ಚುನಾವಣಾ ಆಯೋಗದಿಂದ 90 ಲಕ್ಷ ಮತದಾರರ ಗುರುತಿನ ಚೀಟಿಗಳನ್ನು ಮುದ್ರಿಸಿ 20 ಕೋಟಿ ರೂ. ಹಗರಣ ನಡೆಸಲಾಗಿದೆ. ಇದರಲ್ಲಿ ಕಾಂಗ್ರೆಸ್ ಸರ್ಕಾರ ಭಾಗಿಯಾಗಿದ್ದು, ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಚುನಾವಣಾ ಆಯೋಗದ ಮೂಲಕ ಸರ್ಕಾರ ನಡೆಸಿರುವ ಹಗರಣ, ಟೆಂಡರ್ ದಾಖಲೆಗಳನ್ನು ಅವರು ಬಿಡುಗಡೆ ಮಾಡಿ ಮಾತನಾಡಿ, ಮೂರೂವರೆ ವರ್ಷಗಳಿಂದ ಕಾಂಗ್ರೆಸ್ ಸರ್ಕಾರ ಸರಣಿಯಂತೆ ಹಗರಣಗಳನ್ನು ಮಾಡುತ್ತಿದೆ. ಕಾಂಗ್ರೆಸ್‌ನವರು ಎಸ್‌ಐಆರ್ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದಾರೆ. ಆದರೆ, ರಾಜ್ಯದಲ್ಲಿ ಚುನಾವಣಾ ಆಯೋಗದ ಮೂಲಕವೇ ಕಾಂಗ್ರೆಸ್ ಸರ್ಕಾರ 20 ಕೋಟಿ ರೂ. ಮೊತ್ತದ ಹಗರಣ ನಡೆಸಿದೆ ಎಂದರು.

ಬೆಂಗಳೂರಿನ ಮತದಾರರಿಗೆ ಎಸ್‌ವಿಐಸಿ ಕಾರ್ಡ್ ಎಂದರೆ ಮತದದಾರರ ಗುರುತಿನ ಚೀಟಿ ನೀಡಲು ರಾಜ್ಯ ಚುನಾವಣಾ ಆಯೋಗದಿಂದ ಕ್ರಮ ವಹಿಸಲಾಗಿದೆ. ಆದರೆ ನಿಯಮ ಉಲ್ಲಂಘಿಸಿ 90 ಲಕ್ಷ ಕಾರ್ಡ್ ಮುದ್ರಿಸಲು ಒಂದೇ ಟೆಂಡರ್ ಕರೆಯಲಾಗಿದೆ. ಪ್ರತಿ ಮನೆಗೆ ಹೋಗಿ ಮಾಹಿತಿ ಸಂಗ್ರಹಿಸಿ, ಫೋಟೋ ಸೆರೆಹಿಡಿದು ನಂತರ ಮುದ್ರಣ ಮಾಡಬೇಕು. ಆದರೆ ಎಲ್ಲಿಗೂ ಹೋಗದೆ ಲೋಕಸಭಾ ಚುನಾವಣೆಯ ಮತದಾರರ ಪಟ್ಟಿಯನ್ನು ಆಧರಿಸಲಾಗಿದೆ. 2026ರ ಮೇ 14ರಂದು ಕೇಂದ್ರ ಚುನಾವಣಾ ಆಯೋಗದಿಂದ ಎಸ್‌ಐಆರ್ ಮಾಡಲಾಗುವುದು ಎಂದು ಆದೇಶ ನೀಡಲಾಗಿತ್ತು. ಆದರೆ ಮೇ 15ರಂದು ರಾಜ್ಯ ಚುನಾವಣಾ ಆಯೋಗದಿಂದ ಟೆಂಡರ್ ಕರೆಯಲಾಗಿದೆ. ಮೇ 29ರಂದು ಕಾರ್ಯಾದೇಶ ನೀಡಲಾಗಿದೆ. ಇದೇ ರಾಜ್ಯ ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ನಲ್ಲಿ ಅಫಿಡವಿಟ್ ಸಲ್ಲಿಸಿದ್ದು, ಎಸ್‌ಐಆರ್ ಬಳಿಕ ಮತದಾರರ ಹೊಸ ಪಟ್ಟಿ ಬಂದ ಬಳಿಕ ಸ್ಥಳೀಯ ಚುನಾವಣೆ ನಡೆಸುತ್ತೇವೆ ಎಂದು ಹೇಳಲಾಗಿದೆ ಎಂದರು.



### ಸರ್ಕಾರದಿಂದ 20 ಕೋಟಿ ರೂ. ಬೃಹತ್ ಹಗರಣ: ತನಿಖೆಗೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಗ್ರಹ

ಕೇಂದ್ರ ಚುನಾವಣಾ ಆಯೋಗದ ಮತದಾರರ ಪಟ್ಟಿಯಿಂದಲೇ ಚುನಾವಣೆ ನಡೆಯುವಾಗ, ರಾಜ್ಯ ಚುನಾವಣಾ ಆಯೋಗದಿಂದ ಪ್ರತ್ಯೇಕವಾಗಿ ಹೊಸ ಕಾರ್ಡ್‌ಗಳನ್ನು ಮುದ್ರಿಸಲಾಗಿದೆ. ಬೆಂಗಳೂರಿನಲ್ಲಿ ಎಸ್‌ಐಆರ್ ನಂತರ ಒಟ್ಟು 59,09,775 ಮತದಾರರಿದ್ದಾರೆ. ವಿಳಾಸ ಬದಲಾದವರ, ಸ್ಥಳಾಂತರಗೊಂಡವರ ಹೆಸರ ತೆಗೆದುಹಾಕಲಾಗಿದೆ. ಆದರೆ ರಾಜ್ಯ ಚುನಾವಣಾ ಆಯೋಗದಿಂದ 90 ಲಕ್ಷ ಗುರುತಿನ ಚೀಟಿ ಮುದ್ರಿಸಲಾಗಿದೆ ಎಂದರೆ, ಇದರಲ್ಲಿ ಹಗರಣ ನಡೆದಿರುವುದು ಖಚಿತವಾಗಿದೆ. ಈ ಕಾರ್ಡ್‌ಗಳನ್ನು ಈಗ ಯಾರಿಗೆ ವಿತರಣೆ ಮಾಡಲಾಗುತ್ತದೆ, ಮುದ್ರಣವಾಗಿ ಇಷ್ಟು ದಿನಗಳಾದರೂ ಯಾಕೆ ವಿತರಣೆ ಮಾಡಿಲ್ಲ, ಇದಕ್ಕೆ 20 ಕೋಟಿ ರೂ. ಹಣ ಖರ್ಚು ಮಾಡಲಾಗಿದೆ. ಈ ಹಣ ವ್ಯರ್ಥವಾಗಿದೆ ಎಂದರು.

ವೋಟ್ ಚೋರಿ ಎನ್ನುವ ರಾಹುಲ್ ಗಾಂಧಿಯವರೇ ಈಗ ಬೆಂಗಳೂರಿಗೆ ಬಂದು ಹೊಸ ಕಾರ್ಡ್‌ಗಳನ್ನು ವಿತರಣೆ ಮಾಡಬೇಕು. ಏಕೆಂದರೆ ಬೆಂಗಳೂರಿನಲ್ಲಿ ವಾಸ್ತವದಲ್ಲಿ 59 ಲಕ್ಷ ಮತದಾರರಿದ್ದರೆ, ರಾಜ್ಯ ಚುನಾವಣಾ ಆಯೋಗದಿಂದ 90 ಲಕ್ಷ ಕಾರ್ಡ್ ಮುದ್ರಿಸಲಾಗಿದೆ. ಇದು ಅತಿ ದೊಡ್ಡ ಹಗರಣವಾಗಿದ್ದು, ಸರ್ಕಾರದಿಂದ ಇದಕ್ಕೆ ಉತ್ತರ ನೀಡಬೇಕು. ಅಂದರೆ ವೋಟ್ ಚೋರಿಗೆ ಹಾಗೂ 31 ಲಕ್ಷ ಜನರಿಗೆ ಬೋಗಸ್ ಕಾರ್ಡ್ ನೀಡಲು ಕಾಂಗ್ರೆಸ್ ಕಾರಣವಾಗಿದೆ. 31 ಲಕ್ಷ ಮತದಾರರು ಎಲ್ಲಿದ್ದಾರೆ ಎಂಬುದನ್ನು ಈಗ ಸರ್ಕಾರ ಪತ್ತೆ ಮಾಡಬೇಕಿದೆ ಎಂದು ಆಗ್ರಹಿಸಿದರು.

### ವೋಟ್ ಚೋರಿ ಆರೋಪ ಸುಳ್ಳು, ಬ್ಯಾಲೆಟ್‌ನಲ್ಲೂ ಬಿಜೆಪಿಗೆ ಗೆಲುವು

ವಿಧಾನ ಪರಿಷತ್ ಚುನಾವಣೆಯಲ್ಲಿ ರಾಜ್ಯದಲ್ಲಿ ನಾಲ್ಕು ಸ್ಥಾನಗಳನ್ನು ಹಾಗೂ ದೇಶದಲ್ಲಿ 28 ಸ್ಥಾನಗಳನ್ನು ಎನ್‌ಡಿಎ ಗೆದ್ದಿದೆ. ಇದು ಬ್ಯಾಲೆಟ್ ಪೇಪರ್ ಚುನಾವಣೆಯಾಗಿದ್ದು, ಅದರಲ್ಲೂ ಬಿಜೆಪಿ ಗೆದ್ದಿದೆ ಅಂದರೆ ಕಾಂಗ್ರೆಸ್ ವೋಟ್ ಚೋರಿ ಆರೋಪ ಸುಳ್ಳಾಗಿದ್ದು, ಎಲ್ಲದರಲ್ಲೂ ಕಾಂಗ್ರೆಸ್‌ಗೆ ಸೋಲಾಗಿದೆ. ಸಿಎಂ ಡಿ.ಕೆ.ಶಿವಕುಮಾರ್ ಅವರ ಸಾಧನೆ ಶೂನ್ಯ ಎನ್ನುವುದು ಇದರಿಂದ ತಿಳಿದುಬಂದಿದೆ. ಈ ಬಾರಿ ಜೆಡಿಎಸ್–ಬಿಜೆಪಿ ಸಮನ್ವಯ ಸಭೆಗಳು ನಡೆದಿದ್ದು, ಜೆಡಿಎಸ್‌ನ ಎಲ್ಲ ಮುಖಂಡರು ಸಂಪೂರ್ಣ ಸಹಕಾರ ನೀಡಿ ಶ್ರಮಿಸಿದ್ದಾರೆ. ಎಲ್ಲರಿಗೂ ಅಭಿನಂದನೆ ತಿಳಿಸುತ್ತೇನೆ ಎಂದರು.

# ಮತದಾರರ ಸೆಳೆಯಲು ಯೋಗಿ ಹೊಸ ಯೋಜನೆಗಳ ಘೋಷಣೆ



**ಲಖನೌ, ಅ.28:** ಉತ್ತರ ಪ್ರದೇಶ ವಿಧಾನಸಭಾ ಚುನಾವಣೆ ಸಮೀಪಿಸುತ್ತಿರುವ (2027ರ ಫೆಬ್ರವರಿ ಮಾರ್ಚ್‌ನಲ್ಲಿ ನಡೆಯುವ ನಿರೀಕ್ಷೆಯಿದೆ) ಬೆನ್ನಲ್ಲೇ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತದಾರರನ್ನು ಸೆಳೆಯಲು ಹೊಸ ಯೋಜನೆಗಳನ್ನ ಘೋಷಿಸುತ್ತಿದ್ದಾರೆ. ಹಸು ಖರೀದಿಗೆ ಶೇ. 50ರಷ್ಟು ಸಬ್ಸಿಡಿ, ಬಡ ಕುಟುಂಬಗಳಿಗೆ ಉಚಿತವಾಗಿ 100 ಕೋಳಿ ಮರಿಗಳು, ಲಕ್ಷಾಂತರ ಬೋಧಕೇತರ ಸಿಬ್ಬಂದಿಗೆ ನಗದುರಹಿತ ಆರೋಗ್ಯ ಸೇವೆ ಸೇರಿದಂತೆ 1,700 ಕೋಟಿಗೂ ಹೆಚ್ಚಿನ ಯೋಜನೆಗಳಿಗೆ ಒಪ್ಪಿಗೆ ನೀಡುವ ಮೂಲಕ ಬಿಜೆಪಿ ಸರ್ಕಾರ ಚುನಾವಣಾ ತಂತ್ರಕ್ಕೆ ಚಾಲನೆ ನೀಡಿದೆ.

ಹೊರರಾಜ್ಯಗಳಿಂದ ಹಸು ಖರೀದಿಸುವವರಿಗೆ ಶೇ.50ರಷ್ಟು ಸಬ್ಸಿಡಿ ನೀಡಲು ಸರ್ಕಾರ ನಿರ್ಧರಿಸಿದೆ. ಗರಿಷ್ಠ ಎರಡು ಹಸುಗಳ ಖರೀದಿಗೆ ಈ ಸೌಲಭ್ಯ ಅನ್ವಯವಾಗಲಿದೆ. 50,000 ಮೌಲ್ಯದ ಹಸುವಿಗೆ 25,000 ಸಬ್ಸಿಡಿ ಸಿಗಲಿದೆ. ಇದು ಬಿಜೆಪಿಯ ಸಾಂಪ್ರದಾಯಿಕ ಹಿಂದುತ್ವ ಗೋಸಂರಕ್ಷಣೆ ಅಜೆಂಡಾಕ್ಕೆ ಪೂರಕವಾಗಿದೆ. ಜೊತೆಗೆ ಬಡ ಕುಟುಂಬಗಳಿಗೆ ತಲಾ 100 ಕೋಳಿ ಮರಿಗಳನ್ನು ಉಚಿತವಾಗಿ ವಿತರಿಸಲಾಗುವುದು ಎಂದು ಪಶುಸಂಗೋಪನಾ ಸಚಿವ ಧರಂಪಾಲ್ ಸಿಂಗ್ ತಿಳಿಸಿದ್ದಾರೆ.

ಈ ಮೂಲಕ ಎಸ್ಸಿ/ಎಸ್ಟಿ ಮತ್ತು ಹಿಂದುಳಿದ ವರ್ಗಗಳ ಮತಬ್ಯಾಂಕ್ ಗಟ್ಟಿಗೊಳಿಸಲು ಸರ್ಕಾರ ಯತ್ನಿಸಿದೆ. ಈ ಯೋಜನೆಗಳು ಗ್ರಾಮೀಣ ಕುಟುಂಬಗಳ ಆದಾಯ ಹೆಚ್ಚಿಸಲು ಎಷ್ಟರ ಮಟ್ಟಿಗೆ ನೆರವಾಗಲಿವೆ ಎಂಬುದು ಅನುಷ್ಠಾನದ ಬಳಿಕ ಸ್ಪಷ್ಟವಾಗಲಿದೆ.

ಹಾಲು ಉತ್ಪಾದನೆ ಹೆಚ್ಚಿಸುವುದು, ಜಾನುವಾರುಗಳ ತಳಿಯನ್ನು ಸುಧಾರಿಸುವುದು ಮತ್ತು ರೈತರ ಆದಾಯ ವೃದ್ಧಿಸುವ ಉದ್ದೇಶದಿಂದ ರಾಜ್ಯ ಜಾನುವಾರು ಮಿಷನ್ ಆರಂಭಿಸಲು ಸಂಪುಟ ಅನುಮೋದನೆ ನೀಡಿದೆ. ಹಸುಗಳ ವಿಮಾ ಕಂತಿನ ಶೇ. 85ರಷ್ಟು ಮೊತ್ತವನ್ನು ಸರ್ಕಾರ ಭರಿಸಲಿದ್ದು, ಉಳಿದ ಶೇ. 15ರಷ್ಟು ಮೊತ್ತವನ್ನು ರೈತರು ಪಾವತಿಸಬೇಕು.

ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮತ್ತು ಸಂಸ್ಕೃತ ಪ್ರೌಢಶಾಲೆಗಳ 48,062 ಬೋಧಕೇತರ ಸಿಬ್ಬಂದಿ ಹಾಗೂ ಅವರ ಕುಟುಂಬಸ್ಥರಿಗೆ 5 ಲಕ್ಷದವರೆಗೆ ಉಚಿತ ನಗದುರಹಿತ ಚಿಕಿತ್ಸೆ ಒದಗಿಸಲಾಗುವುದು. ಇದಕ್ಕಾಗಿ ಸರ್ಕಾರವೇ ತಲಾ 3,000 ವಾರ್ಷಿಕ ವಿಮಾ ಕಂತು ಪಾವತಿಸಲಿದೆ. ಇದಲ್ಲದೆ ಮೂಲ ಶಿಕ್ಷಣ ಮಂಡಳಿ ಹಾಗೂ ಸಮಗ್ರ ಶಿಕ್ಷಣ ಯೋಜನೆಯ 1,22,304 ಸಿಬ್ಬಂದಿಗೂ ಈ ಯೋಜನೆ ವಿಸ್ತರಿಸಲಾಗಿದೆ. ಉತ್ತರ ಪ್ರದೇಶ ಒಳನಾಡು ಜಲಸಾರಿಗೆ ನಿಯಮಾವಳಿಗೆ ಅನುಮೋದನೆ ನೀಡಲಾಗಿದ್ದು, ಗಂಗಾ, ಯಮುನಾ, ಸರಯೂ, ಘಾಘ್ರಾ ಸೇರಿದಂತೆ 11 ನದಿಗಳಲ್ಲಿ ಸಂಚರಿಸುವ ದೋಣಿಗಳು ಮತ್ತು ಸ್ಟೀಮರ್ಗಳಿಗೆ ನೋಂದಣಿ ಕಡ್ಡಾಯ ಗೊಳಿಸಲಾಗಿದೆ. ಪ್ರಯಾಣಿಕರಲ್ಲದ ದೋಣಿಗಳಿಗೆ 50 ಶುಲ್ಕ ನಿಗದಿಪಡಿಸಲಾಗಿದೆ. ಅನಾಹುತಗಳನ್ನು ತಡೆಯಲು ಮತ್ತು ಭದ್ರತೆ ಹೆಚ್ಚಿಸಲು ಪ್ರಯಾಣಿಕರು ಹಾಗೂ ದೋಣಿ ಚಾಲಕರಿಗೆ ವಿಮೆ ಒದಗಿಸಲಾಗುತ್ತದೆ.



**ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರಸಿಂಗ್ ಶೇಖಾವತ್ ಅವರು ಟೈಮ್‌ಲೆಸ್ ಇಂಡಿಯಾ: ಪ್ರೊಟೆಕ್ಷನ್ ಅಂಡ್ ರಿವೈವಲ್ ಆಫ್ ಇಂಡಿಯನ್ ಕಲ್ಚರಲ್ ಐಡೆಂಟಿಟಿ ಎಂಬ ಪುಸ್ತಕವನ್ನು ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಬುಧವಾರ ನವದೆಹಲಿಯಲ್ಲಿ ಬಿಡುಗಡೆ ಮಾಡಿದರು.**

# ಮಹಿಳಾ ಹಕ್ಕುಗಳು V/S ತೃತೀಯಲಿಂಗಿಗಳ ಹಕ್ಕು ಕೇಂದ್ರದ ನಿಲುವು ಕೇಳಿದ ಸುಪ್ರೀಂ ಕೋರ್ಟ್



**ನವದೆಹಲಿ, ಅ.28:** ಮಹಿಳೆಯರ ಹಕ್ಕುಗಳು ಮತ್ತು ತೃತೀಯಲಿಂಗಿಗಳ ಹಕ್ಕುಗಳಿಗೆ ಸಂಬಂಧಿಸಿದ ಕಾನೂನುಗಳ ನಡುವಿನ ಸಂಘರ್ಷದ ಕುರಿತು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರದ ಪ್ರತಿಕ್ರಿಯೆ ಕೋರಿದೆ. ತೃತೀಯಲಿಂಗಿಗಳ ಹಕ್ಕುಗಳ ರಕ್ಷಣೆಗಾಗಿ ಜಾರಿಗೆ ತಂದಿರುವ ತಿದ್ದುಪಡಿ ಕಾನೂನಿನಿಂದ ಮಹಿಳೆಯರ ಹಕ್ಕುಗಳ ಮೇಲೆ ಯಾವ ರೀತಿಯ ಪರಿಣಾಮ ಉಂಟಾಗಬಹುದು ಎಂಬುದನ್ನು ನ್ಯಾಯಾಲಯ ಪ್ರಶ್ನಿಸಿದೆ. ತೃತೀಯಲಿಂಗಿಗಳ ಹಕ್ಕುಗಳ ರಕ್ಷಣೆ ಮತ್ತು ಮಾನ್ಯತೆಗೆ ಸಂಬಂಧಿಸಿದ 2026ರ ತಿದ್ದುಪಡಿ ಕಾಯ್ದೆಯನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಗಳು ಸಲ್ಲಿಕೆಯಾಗಿವೆ. ಈ ಕಾನೂನಿನ ಸಾಂವಿಧಾನಿಕ ಸಿಂಧುತ್ವದ ಕುರಿತು ನ್ಯಾಯಾಲಯ ವಿಚಾರಣೆ ನಡೆಸುತ್ತಿದೆ. ಕಾನೂನಿನ ಕೆಲವು ನಿಬಂಧನೆಗಳು ಲಿಂಗ ಗುರುತಿನ ಸ್ವಯಂ ನಿರ್ಧಾರದ ಹಕ್ಕನ್ನು ಸೀಮಿತಗೊಳಿಸುತ್ತವೆ ಎಂಬುದು ಅರ್ಜಿದಾರರ ಪ್ರಮುಖ ಆಕ್ಷೇಪವಾಗಿದೆ.

**ಲಿಂಗ ಗುರುತಿನ ಸ್ವಯಂ ನಿರ್ಧಾರದ ಹಕ್ಕಿನ ಬಗ್ಗೆ ಚರ್ಚೆ**

2014ರಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ (ನಾಲ್ಸಾ) ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ವ್ಯಕ್ತಿಯ ಲಿಂಗ ಗುರುತಿನ ಹಕ್ಕನ್ನು ಗುರುತಿಸಿತ್ತು. ಆದರೆ, 2026ರ ತಿದ್ದುಪಡಿ ಕಾಯ್ದೆಯು ಲಿಂಗ ಗುರುತಿನ ಮಾನ್ಯತೆಗೆ ವೈದ್ಯಕೀಯ ಮಂಡಳಿಯ ಪರಿಶೀಲನೆ ಮತ್ತು ಪ್ರಮಾಣಪತ್ರದ ವ್ಯವಸ್ಥೆಯನ್ನು ಪರಿಚಯಿಸಿದೆ. ಇದರಿಂದ ವ್ಯಕ್ತಿಯ ಸ್ವಯಂ ನಿರ್ಧಾರದ ಹಕ್ಕಿಗೆ ಧಕ್ಕೆಯಾಗಲಿದೆ ಎಂದು ತೃತೀಯಲಿಂಗಿಗಳ ಹಕ್ಕುಗಳ ಪರ ಹೋರಾಟಗಾರರು ಆತಂಕ ವ್ಯಕ್ತಪಡಿಸಿದ್ದಾರೆ.

ಲಿಂಗ ಗುರುತಿನ ಸ್ವಯಂ ನಿರ್ಧಾರದ ತತ್ವವನ್ನು ಯಾವುದೇ ಮಿತಿಯಿಲ್ಲದೆ ಒಪ್ಪಿಕೊಳ್ಳುವುದರಿಂದ ಇತರ ಕಾನೂನುಗಳ ಅನುಷ್ಠಾನದಲ್ಲಿ ಸಮಸ್ಯೆಗಳು ಎದುರಾಗಬಹುದು ಎಂದು ಕೇಂದ್ರ ಸರ್ಕಾರ ಈ ಹಿಂದೆ ಸುಪ್ರೀಂ ಕೋರ್ಟ್‌ನಲ್ಲಿ ವಾದಿಸಿತ್ತು. ವಾರಸುದಾರಿಕೆ, ಮಹಿಳೆಯರಿಗೆ ಮೀಸಲಾದ ಸೌಲಭ್ಯಗಳು ಹಾಗೂ ಇತರ ಕಾನೂನು ಹಕ್ಕುಗಳ ಮೇಲಿನ ಪರಿಣಾಮಗಳ ಬಗ್ಗೆಯೂ ಸರ್ಕಾರ ಕಳವಳ ವ್ಯಕ್ತಪಡಿಸಿತ್ತು. ತೃತೀಯಲಿಂಗಿಗಳ ಹಕ್ಕುಗಳ ರಕ್ಷಣೆ ಮತ್ತು ಮಹಿಳೆಯರ ಹಕ್ಕುಗಳ ನಡುವಿನ ಸಮತೋಲನವನ್ನು ಹೇಗೆ ಕಾಯ್ದುಕೊಳ್ಳಬೇಕು ಎಂಬುದು ಈ ಪ್ರಕರಣದಲ್ಲಿ ಪ್ರಮುಖ ಪ್ರಶ್ನೆಯಾಗಿದೆ. ತಿದ್ದುಪಡಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವದ ಕುರಿತು ಅಂತಿಮ ತೀರ್ಪು ಹೊರಬಿದ್ದಿಲ್ಲ.

# ಔಷಧ ಎಂಆರ್‌ಪಿ ದರ ವಿಕಿಪ್ಟ ಜಾಸ್ತಿ: ಕೇಂದ್ರಕ್ಕೆ ಸುಪ್ರೀಂ ಪ್ರಶ್ನೆ

**ನವದೆಹಲಿ, ಅ. 28:** ಭಾರತದಲ್ಲಿ ಔಷಧಿಗಳ ಗರಿಷ್ಠ ಚಿಲ್ಲರೆ ಬೆಲೆ ಮತ್ತು ಚಿಲ್ಲರೆ ವ್ಯಾಪಾರಿಗಳು ಅವುಗಳನ್ನು ಖರೀದಿಸುವ ದರದ ನಡುವೆ ಇರುವ ಭಾರಿ ವ್ಯತ್ಯಾಸದ ಕುರಿತು ಸುಪ್ರೀಂ ಕೋರ್ಟ್ ಮಂಗಳವಾರ ಕೇಂದ್ರ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ. ಔಷಧಿ ತಯಾರಿಕಾ ಕಂಪನಿಗಳಿಗೆ ಸಹಾಯ ಮಾಡುವುದಕ್ಕಾಗಿಯೇ ಸಂಪೂರ್ಣ ವ್ಯವಸ್ಥೆಯು ಕೆಲಸ ಮಾಡುತ್ತಿದೆಯೇ ಎಂದು ಪ್ರಶ್ನಿಸಿರುವ ನ್ಯಾಯಾಲಯ, ಔಷಧ ಮಾರಾಟದಲ್ಲಿ ನಡೆಯುತ್ತಿರುವ ಲೂಟಿಯ ಕುರಿತು ಮೌನವಾಗಿರುವುದರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರಿದ್ದ ಪೀಠವು ದೇಶದಲ್ಲಿ ಔಷಧಿ ಬೆಲೆ ನಿಗದಿಗೆ ಸಂಬಂಧಿಸಿದ ಎರಡು ಪ್ರಮುಖ ಅರ್ಜಿಗಳ ವಿಚಾರಣೆ ನಡೆಸಿ ಈ ಪ್ರಶ್ನೆಗಳನ್ನು ಎತ್ತಿದೆ. ಎಂಆರ್ಪಿ ಮತ್ತು ಚಿಲ್ಲರೆ ವ್ಯಾಪಾರಿಗಳ ದರದ ನಡುವಿನ ಬೃಹತ್ ವ್ಯತ್ಯಾಸವನ್ನು ಉಲ್ಲೇಖಿಸಿದ ಪೀಠವು, ಸರ್ಕಾರವೇ ತನ್ನ ಕಣ್ಣೆದುರೇ ಇಂತಹ ಅನ್ಯಾಯ ನಡೆಯಲು ಅವಕಾಶ ನೀಡುತ್ತಿದೆ ಎಂದು ಆಕ್ರೋಶ ಹೊರಹಾಕಿತು. ಇದೇ ವೇಳೆ, ಇಡೀ ವ್ಯವಸ್ಥೆಯನ್ನು ಯಾವುದೇ ನಿಯಂತ್ರಣವಿಲ್ಲದೆ ಮನಬಂದಂತೆ ನಡೆಯಲು ಬಿಡಬೇಕೇ ಎಂದು ಪ್ರಶ್ನಿಸಿದ ಕೋರ್ಟ್, ರಾಷ್ಟ್ರೀಯ ಔಷಧೀಯ ಬೆಲೆ ನಿಗದಿ ಪ್ರಾಧಿಕಾರವು ಸಂಪೂರ್ಣವಾಗಿ ನಿಷ್ಕ್ರಿಯಗೊಂಡ ಸಂಸ್ಥೆಯಂತೆ ಕಾಣುತ್ತಿದೆ ಎಂದು ಕಳವಳ ವ್ಯಕ್ತಪಡಿಸಿತು.

ಕೇಂದ್ರ ಸರ್ಕಾರದ ಪರವಾಗಿ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯಾ ಭಾಟಿ ಅವರು ಪ್ರಸ್ತುತ ಚೌಕಟ್ಟನ್ನು ಸಮರ್ಥಿಸಿಕೊಂಡರು. ಭಾರತದಲ್ಲಿ ಔಷಧಿ ಬೆಲೆಗಳು ಜಗತ್ತಿನಲ್ಲೇ ಅತ್ಯಂತ ಕಡಿಮೆಯಿರುವ ಪೈಕಿ ಒಂದಾಗಿವೆ ಎಂದು ತಿಳಿಸಿದ ಅವರು, ಇಡೀ ಔಷಧೀಯ ವ್ಯವಸ್ಥೆಯನ್ನು ಸಂಪೂರ್ಣವಾಗಿ ನಿಯಂತ್ರಿಸಬಾರದು ಎಂಬುದು ಸರ್ಕಾರದ ಧೋರಣೆಯಾಗಿದ್ದು, ಅತಿಯಾದ ಬೆಲೆ ನಿಯಂತ್ರಣವು ಈ ಕ್ಷೇತ್ರದಲ್ಲಿನ ಸಂಶೋಧನೆ ಮತ್ತು ಆವಿಷ್ಕಾರಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಎಂದು ವಿವರಿಸಿದರು.

ಇದಕ್ಕೆ ಉತ್ತರಿಸಿದ ನ್ಯಾಯಮೂರ್ತಿ ಮೆಹ್ತಾ, ಕಳೆದ 30 ವರ್ಷಗಳಲ್ಲಿ ಭಾರತೀಯ ಔಷಧೀಯ ಉದ್ಯಮವು ಕಂಡುಹಿಡಿದ 5 ಹೊಸ ಅಣುಗಳನ್ನು ಹೆಸರಿಸಿ ನೋಡೋಣ ಎಂದು ಕೇಂದ್ರ ಸರ್ಕಾರಕ್ಕೆ ನೇರ ಸವಾಲೆಸೆದರು.

ವಿಚಾರಣೆ ವೇಳೆ, ಡೀಲರ್‌ಗೆ ಕೇವಲ 11,000ಕ್ಕೆ ಸಿಗುವ ಕ್ಯಾನ್ಸರ್ ಇಂಜೆಕ್ಷನ್ ಅನ್ನು ಪ್ರಸಿದ್ಧ ಆಸ್ಪತ್ರೆಯೊಂದು 1.30 ಲಕ್ಷಕ್ಕೆ ಮಾರಾಟ ಮಾಡುತ್ತಿದೆ. ರೋಗಿ ತಾನೇ ಹೊರಗಡೆಯಿಂದ ತಂದು ಕೊಡುತ್ತೇನೆ ಎಂದರೂ ಆಸ್ಪತ್ರೆ ಒಪ್ಪಲಿಲ್ಲ. ಇದನ್ನು ದರೋಡೆ ಎನ್ನದೆ ಇನ್ನೇನನ್ನಬೇಕು ಎಂದು ಕೋರ್ಟ್ ಪ್ರಶ್ನಿಸಿತು. ಚಿಲ್ಲರೆ ದರದಲ್ಲಿ ಕೇವಲ 15 ಕ್ಕೆ ಸಿಗುವ ಸಲ್ಯೂನ್/ಡ್ರಿಪ್‌ಲೈನ್ ರೋಗಿಗಳಿಗೆ 250 ಕ್ಕೆ ಮಾರಾಟ ಮಾಡಲಾಗುತ್ತಿದೆ. ದೇಶದಲ್ಲಿ ಶೇ. 90 ರಷ್ಟು ಔಷಧಿಗಳು ರಾಷ್ಟ್ರೀಯ ಅಗತ್ಯ ನಿಯಂತ್ರಿತ ಔಷಧಿಗಳ ಪಟ್ಟಿಯಿಂದ ಹೊರಗುಳಿದಿವೆ. ನಿಯಂತ್ರಣದಲ್ಲಿರುವ ಶೇ. 10 ರಷ್ಟು ಔಷಧಗಳಿಗೆ ಸರ್ಕಾರ ದರ ನಿಗದಿ ಮಾಡುತ್ತದೆ. ಆದರೆ ಉಳಿದ ಶೇ. 90 ರಷ್ಟು ಬ್ರಾಂಡೆಡ್ ಔಷಧಿಗಳ ಮೇಲೆ ಕಂಪನಿಗಳು ಮತ್ತು ಖಾಸಗಿ ಆಸ್ಪತ್ರೆಗಳು ತಮಗಿಷ್ಟ ಬಂದಷ್ಟು (ಶೇ. 100 ರಿಂದ ಶೇ. 1000 ರಷ್ಟು) ಮಾರ್ಜಿನ್ ಇಟ್ಟುಕೊಂಡು ಎಂಆರ್ಪಿ ಮುದ್ರಿಸುತ್ತಿವೆ. ಆಯುಷ್ಮಾನ್ ಭಾರತ್ ನಂತಹ ಸರ್ಕಾರಿ ಆರೋಗ್ಯ ಯೋಜನೆಗಳಡಿ ಸರ್ಕಾರವೇ ಈ ಅತಿಯಾದ ದರದ ಬಿಲ್ಲಗಳನ್ನು ಆಸ್ಪತ್ರೆಗಳಿಗೆ ಮರುಪಾವತಿಸುತ್ತದೆ. ಆಸ್ಪತ್ರೆಗಳು ನಕಲಿ/ಅತಿಯಾದ ಎಂಆರ್‌ಪಿ ಹಾಕಿ ಬಿಲ್ ಮಾಡುವುದರಿಂದ ಅಂತಿಮವಾಗಿ ವ್ಯರ್ಥವಾಗುತ್ತಿರುವುದು ಸಾರ್ವಜನಿಕರ ತೆರಿಗೆ ಹಣ ಎಂದು ಕೋರ್ಟ್ ಕಳವಳ ವ್ಯಕ್ತಪಡಿಸಿತು.

ಭಾರತದಲ್ಲಿ ಒಬ್ಬ ಸಾಧಾರಣ ವ್ಯಕ್ತಿಯ ಒಟ್ಟು ವೈದ್ಯಕೀಯ ವೆಚ್ಚದ ಶೇ.15 ರಿಂದ 19 ರಷ್ಟು ಹಣ ಕೇವಲ ಔಷಧಿಗಳನ್ನು ಖರೀದಿಸುವುದಕ್ಕೇ ವೆಚ್ಚವಾಗುತ್ತದೆ. ಸರ್ಕಾರ ಜಾರಿಗೊಳಿಸುವ ಜೆನೆರಿಕ್ ಔಷಧಿ ನೀತಿಗಳು ಮತ್ತು ಎನ್‌ಪಿಪಿಎ ಬೆಲೆ ಪ್ರಾಧಿಕಾರಗಳು ಕಾಗದದ ಮೇಲಷ್ಟೇ ಇದ್ದು, ಅನುಷ್ಠಾನದಲ್ಲಿ ಸಂಪೂರ್ಣ ವಿಫಲವಾಗಿವೆ ಎಂಬ ಅಂಶ ಈ ವಿಚಾರಣೆಯಿಂದ ಸ್ಪಷ್ಟವಾಗುತ್ತದೆ.

ಕೇಂದ್ರದ ವಾದಗಳಿಂದ ಸಮಾಧಾನಗೊಳ್ಳದ ನ್ಯಾಯಾಲಯವು ವಿಚಾರಣೆ ಪೂರ್ಣಗೊಳಿಸಿ ಪ್ರಕರಣದ ತೀರ್ಪನ್ನು ಕಾಯ್ದಿರಿಸಿದೆ. ಈ ವಿಚಾರಣೆಯು ನ್ಯಾಯಾಲಯದ ನಿರಂತರ ಪರಿಶೀಲನೆಯ ಭಾಗವಾಗಿದ್ದು, ಈ ಹಿಂದೆ ಅಕ್ಟೋಬರ್ 12 ರಂದು ನಡೆದ ವಿಚಾರಣೆಯಲ್ಲೂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿತ್ತು. ಕ್ಯಾನ್ಸರ್ ನಿರೋಧಕ ಔಷಧಿಗಳ ಮಾರ್ಜಿನ್ ಅನ್ನು ಎಂಆರ್ಪಿಯ ಶೇ.30ಕ್ಕೆ ಮಿತಿಗೊಳಿಸಿರುವ ಕೇಂದ್ರದ ನಿರ್ಧಾರವು ಖುಷಿಪಡುವ ವಿಷಯವೇನಲ್ಲ ಎಂದಿದ್ದ ಪೀಠ, ಕ್ಯಾನ್ಸರ್ ಔಷಧಿಗಳಂತೆಯೇ ಇತರ ಜೀವ ರಕ್ಷಕ ಔಷಧಿಗಳ ಮೇಲೆಯೂ ಸರ್ಕಾರ ವ್ಯಾಪಾರ ಮಿತಿಯನ್ನು ಏಕೆ ವಿಧಿಸುತ್ತಿಲ್ಲ ಎಂದು ಪ್ರಶ್ನಿಸಿತ್ತು.

# ಯುಪಿ ಎಂಎಲ್‌ಸಿ ಚುನಾವಣೆ: ಬಿಜೆಪಿ 5, ಎಸ್‌ಪಿ 3






**ಎಡದಿಂದ 1. ದಿನೇಶ್ ಕುಮಾರ್ ಗೋಯಲ್, 2. ಶ್ರೀಚಂದ್ ಶರ್ಮಾ. 3. ಹರಿ ಸಿಂಗ್ ಧಿಲ್ಲೋನ್, 4.ಉಮೇಶ್ ದ್ವಿವೇದಿ, 5. ಮಾನವೇಂದ್ರ ಪ್ರತಾಪ್ ಸಿಂಗ್ ಗುರೂಜಿ..**

ಉತ್ತರ ಪ್ರದೇಶ ವಿಧಾನ ಪರಿಷತ್ತಿನ 11 ಸ್ಥಾನಗಳಿಗೆ ನಡೆದ ದ್ವೈವಾರ್ಷಿಕ ಚುನಾವಣೆಯ ಮತ ಎಣಿಕೆಯಲ್ಲಿ ಆಡಳಿತಾರೂಢ ಬಿಜೆಪಿ ಆರಂಭಿಕ ಮುನ್ನಡೆಯನ್ನು ಕಾಯ್ದುಕೊಂಡಿದ್ದು, ಐದು ಸ್ಥಾನಗಳನ್ನು ಗೆದ್ದಿದೆ. ಸಮಾಜವಾದಿ ಪಕ್ಷ ಮೂರು ಸ್ಥಾನಗಳಲ್ಲಿ ಗೆಲುವು ದಾಖಲಿಸಿದೆ. ಈ ಚುನಾವಣೆ 2027ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಗೆ ಮುನ್ನ ಬಿಜೆಪಿಎಸ್‌ಪಿ ನಡುವಿನ ಪ್ರಮುಖ ಪ್ರತಿಷ್ಠೆಯ ಕಣವಾಗಿ ಪರಿಗಣಿಸಲಾಗಿತ್ತು.

**ಬಿಜೆಪಿ ಗೆದ್ದ ಪ್ರಮುಖ ಸ್ಥಾನಗಳು:**

- **ಮೀರತ್ ಪದವೀಧರ ಕ್ಷೇತ್ರ - ದಿನೇಶ್ ಕುಮಾರ್ ಗೋಯಲ್..**
- **ಮೀರತ್ ಶಿಕ್ಷಕರ ಕ್ಷೇತ್ರ - ಶ್ರೀಚಂದ್ ಶರ್ಮಾ..**
- **ಬರೇಲಿ-ಮೊರಾದಾಬಾದ್ ಶಿಕ್ಷಕರ ಕ್ಷೇತ್ರ - ಹರಿ ಸಿಂಗ್ ಧಿಲ್ಲೋನ್..**
- **ಲಖನೌ ಶಿಕ್ಷಕರ ಕ್ಷೇತ್ರ - ಉಮೇಶ್ ದ್ವಿವೇದಿ..**
- **ಆಗ್ರಾ ಪದವೀಧರ ಕ್ಷೇತ್ರ ಮಾನವೇಂದ್ರ ಪ್ರತಾಪ್ ಸಿಂಗ್ ಗುರೂಜಿ..**

**ವಾರಾಣಸಿಯಲ್ಲಿ ಬಿಜೆಪಿಗೆ ಹಿನ್ನಡೆ:**

ಪ್ರಧಾನಿ ನರೇಂದ್ರ ಮೋದಿ ಲೋಕಸಭಾ ಕ್ಷೇತ್ರ ವಾರಾಣಸಿಯಲ್ಲಿ ಬಿಜೆಪಿಗೆ ದೊಡ್ಡ ಆಘಾತ ಎದುರಾಗಿದೆ. ವಾರಾಣಸಿ ಶಿಕ್ಷಕರ ಕ್ಷೇತ್ರವನ್ನು ಎಸ್‌ಪಿಯ ಲಾಲ್ ಬಿಹಾರಿ ಯಾದವ್ ಗೆದ್ದಿದ್ದಾರೆ. ಅವರು ಬಿಜೆಪಿಯ ಡಾ. ಪ್ರಮೋದ್ ಕುಮಾರ್ ಮಿಶ್ರಾ ಅವರನ್ನು ಸೋಲಿಸಿದ್ದಾರೆ. ಈ ಮೂಲಕ ವಾರಾಣಸಿ ಶಿಕ್ಷಕರ ಕ್ಷೇತ್ರವನ್ನು ಎಸ್‌ಪಿ ಮತ್ತೊಮ್ಮೆ ತನ್ನಲ್ಲೇ ಉಳಿಸಿಕೊಂಡಿದೆ.

ವಾರಾಣಸಿ ಪದವೀಧರ ಕ್ಷೇತ್ರದಲ್ಲೂ ಎಸ್‌ಪಿ ಅಭ್ಯರ್ಥಿ ಆಶುತೋಷ್ ಸಿನ್ಹಾ ಮುನ್ನಡೆ ಸಾಧಿಸಿದ್ದರು. ಹೀಗಾಗಿ ಪ್ರಧಾನಿ ಮೋದಿಯವರ ಸ್ವಕ್ಷೇತ್ರದಲ್ಲೇ ಬಿಜೆಪಿ ವಿರುದ್ಧ ಎಸ್‌ಪಿ ಉತ್ತಮ ಪ್ರದರ್ಶನ ನೀಡಿರುವುದು ರಾಜಕೀಯವಾಗಿ ಗಮನ ಸೆಳೆದಿದೆ.

**ಆಗ್ರಾದಲ್ಲಿ ಮಿಶ್ರ ಫಲಿತಾಂಶ:**

ಆಗ್ರಾದ ಎರಡು ಸ್ಥಾನಗಳಲ್ಲಿ ಬಿಜೆಪಿ ಮತ್ತು ಎಸ್‌ಪಿ ತಲಾ ಒಂದು ಸ್ಥಾನ ಗೆದ್ದಿವೆ.

ಆಗ್ರಾ ಪದವೀಧರ ಕ್ಷೇತ್ರದಲ್ಲಿ ಬಿಜೆಪಿಯ ಡಾ. ಮಾನವೇಂದ್ರ ಪ್ರತಾಪ್ ಸಿಂಗ್ ಗುರುಜಿ ಎಸ್‌ಪಿ ಅಭ್ಯರ್ಥಿ ಶಶಾಂಕ್ ಯಾದವ್ ಅವರನ್ನು ಸೋಲಿಸಿ ತಮ್ಮ ಸ್ಥಾನವನ್ನು ಉಳಿಸಿಕೊಂಡಿದ್ದಾರೆ.

ಆದರೆ ಆಗ್ರಾ ಶಿಕ್ಷಕರ ಕ್ಷೇತ್ರ ಎಸ್‌ಪಿ ಪಾಲಾಗಿದೆ. ಡಾ. ಆಕಾಶ್ ಅಗರ್ವಾಲ್ ಗೆಲುವು ಸಾಧಿಸಿದ್ದಾರೆ. ಈ ಕ್ಷೇತ್ರದ ಮತ ಎಣಿಕೆ ವೇಳೆ ಬಿಜೆಪಿ–ಎಸ್‌ಪಿ ಕಾರ್ಯಕರ್ತರ ನಡುವೆ ತೀವ್ರ ವಾಗ್ವಾದ ಮತ್ತು ಆರೋಪ–ಪ್ರತ್ಯಾರೋಪ ನಡೆದಿದ್ದವು.

**ಅಲಹಾಬಾದ್–ಝೂನ್ಸಿಯಲ್ಲಿ ಎಸ್‌ಪಿಯ ದೊಡ್ಡ ಗೆಲುವು:**

ಅಲಹಾಬಾದ್–ಝೂನ್ಸಿ ಪದವೀಧರ ಕ್ಷೇತ್ರದಲ್ಲಿ ಎಸ್‌ಪಿಯ ಮಾನ್ ಸಿಂಗ್ ಯಾದವ್ ಬಿಜೆಪಿಯ ಅಶೋಕ್ ರಾಥೋಡ್ ಅವರನ್ನು 27,663 ಮತಗಳ ಅಂತರದಿಂದ ಸೋಲಿಸಿದ್ದಾರೆ. ಇದು ಎಸ್‌ಪಿಗೆ ಪ್ರಮುಖ ಗೆಲುವಾಗಿದೆ.

**ಗೋರಖ್‌ಪುರದಲ್ಲಿ ಕೊನೆಗೂ ಕಮಲಕ್ಕೆ ಜಯ :**

ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರ ರಾಜಕೀಯ ಭದ್ರಕೋಟೆ ಎಂದು ಪರಿಗಣಿಸಲಾಗುವ ಗೋರಖ್‌ಪುರಫೈಜಾಬಾದ್ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಧ್ರುವ್ ಕುಮಾರ್ ತ್ರಿಪಾಠಿ ಗೆಲುವು ಸಾಧಿಸಿದ್ದಾರೆ. ಆರಂಭದಲ್ಲಿ ಸ್ವತಂತ್ರ ಅಭ್ಯರ್ಥಿ ರಾಜೀವ್ ಯಾದವ್ ಅವರೊಂದಿಗೆ ಅತ್ಯಂತ ನಿಕಟ ಸ್ಪರ್ಧೆ ನಡೆದಿತ್ತು. ಎರಡನೇ ಪ್ರಾಶಸ್ತ್ಯದ ಮತಗಳ ಎಣಿಕೆಯ ನಂತರವೂ ತೀವ್ರ ಪೈಪೋಟಿ ಮುಂದುವರಿದಿತ್ತು. ಕೊನೆಗೆ ಬಿಜೆಪಿ ಅಭ್ಯರ್ಥಿ ಗೆಲುವು ದಾಖಲಿಸಿದರು.

ಈ ಕ್ಷೇತ್ರದ ಮತ ಎಣಿಕೆ ವಿವಾದಕ್ಕೂ ಕಾರಣವಾಗಿತ್ತು. ಎಸ್‌ಪಿ ಅಭ್ಯರ್ಥಿ ಸಂಜಯನ್ ತ್ರಿಪಾಠಿ ಮತ್ತು ಸ್ವತಂತ್ರ ಅಭ್ಯರ್ಥಿ ರಾಜೀವ್ ಯಾದವ್ ಬೆಂಬಲಿಗರು ಎಣಿಕೆ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಿದ್ದರು. ಕೆಲವು ಹಂತಗಳಲ್ಲಿ ಎಸ್‌ಪಿ ಮತ ಎಣಿಕೆಯನ್ನು ಬಹಿಷ್ಕರಿಸಿತ್ತು.

**ಒಟ್ಟಾರೆ ರಾಜಕೀಯ ಚಿತ್ರ**

**ಈ ಫಲಿತಾಂಶವನ್ನು ನೋಡಿದರೆ, ಬಿಜೆಪಿ ತನ್ನ ಸಂಘಟನಾ ಶಕ್ತಿಯನ್ನು ಮತ್ತೊಮ್ಮೆ ತೋರಿಸಿದರೂ, ಎಸ್‌ಪಿ ವಾರಾಣಸಿ ಮತ್ತು ಅಲಹಾಬಾದ್–ಝೂನ್ಸಿಯಂತಹ ಪ್ರಮುಖ ಕ್ಷೇತ್ರಗಳಲ್ಲಿ ಗಮನಾರ್ಹ ಗೆಲುವು ಸಾಧಿಸಿದೆ. ವಿಶೇಷವಾಗಿ ವಾರಾಣಸಿಯಲ್ಲಿ ಎಸ್‌ಪಿಯ ಸಾಧನೆ ಬಿಜೆಪಿ ಪಾಲಿಗೆ ಎಚ್ಚರಿಕೆಯ ಸಂಕೇತವಾಗಿದೆ.**

**ಆಗ್ರಾದಲ್ಲಿ ಎರಡು ಕ್ಷೇತ್ರಗಳಿದ್ದು, ಪದವೀಧರ ಕ್ಷೇತ್ರವನ್ನು ಬಿಜೆಪಿ ಮತ್ತು ಶಿಕ್ಷಕರ ಕ್ಷೇತ್ರವನ್ನು ಎಸ್‌ಪಿ ಗೆದ್ದಿವೆ. ಹಾಗೆಯೇ**

# ಅರ್ನಬ್ ಚಂಡಮಾರುತ: ತೆಲಂಗಾಣ, ಒಡಿಶಾದಲ್ಲಿ ಭಾರಿ ಮಳೆ, ಕಟ್ಟೆಚ್ಚರ



ನವದೆಹಲಿ, ಅ. 28: ಬಂಗಾಳ ಕೊಲ್ಲಿಯಲ್ಲಿ ತೀವ್ರ ಸ್ವರೂಪದ ಅರ್ನಬ್ ಚಂಡಮಾರುತ ಸೃಷ್ಟಿಯಾಗಿದ್ದು, ಆಂಧ್ರಪ್ರದೇಶ, ಒಡಿಶಾ ಮತ್ತು ಪುದುಚೇರಿಯ ಕರಾವಳಿ ತೀರದ ನಡುವೆ ಅಪ್ಪಳಿಸಿದೆ. ಭೂ ಕುಸಿತ ಪ್ರಕ್ರಿಯು ಮರು ಗಂಟೆಗಳ ಕಾಲ ಮುಂದುವರಿಯಲಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆ ಕೊಟ್ಟಿದೆ.

ಗಂಟೆಗೆ 125–135 ಕಿ.ಮೀ ವೇಗದಲ್ಲಿ ಬೀಸಿದ ಗಾಳಿಯು ಗರಿಷ್ಠ 150 ಕಿಲೋ ಮೀಟರ್ ವೇಗವನ್ನು ತಲುಪಿರುವ ಕಾರಣ, ಚಂಡಮಾರುತದ ಅಬ್ಬರಕ್ಕೆ ಆಂಧ್ರಪ್ರದೇಶ ಮತ್ತು ಯಾನಂ, ಒಡಿಶಾ, ತೆಲಂಗಾಣ, ಪಶ್ಚಿಮ ಬಂಗಾಳ ಹಾಗೂ ತಮಿಳುನಾಡಿನ ಕರಾವಳಿ ಭಾಗದಲ್ಲಿ ವರುಣಾರ್ಭಟ ಜೋರಾಗಿದ್ದು, ಜನ ಹೈರಾಣಾಗಿದ್ದಾರೆ.

ಅನಕಾಪಲ್ಲಿ, ವಿಶಾಖಪಟ್ಟಣ, ಕಾಕಿನಾಡ ಮತ್ತು ಕೋನಸೀಮೆ ಜಿಲ್ಲೆಗಳ ವಿವಿಧೆಡೆ ಭಾರೀ ಮಳೆಯಾಗಿದೆ. ವಿಶಾಖಪಟ್ಟಣಂ, ಕಾಕಿನಾಡ, ಕೋನಸೀಮ ಮತ್ತು ಪಶ್ಚಿಮ ಗೋದಾವರಿ ಪ್ರದೇಶಗಳಲ್ಲಿ ಭಾರೀ ಮಳೆ ಹಾಗೂ ಬಿರುಗಾಳಿ ಬೀಸುತ್ತಿರುವ ಬಗ್ಗೆ ಜಿಲ್ಲಾಧಿಕಾರಿಗಳು ಮಾಹಿತಿ ಹಂಚಿಕೊಂಡಿದ್ದಾರೆ. ಬಿರುಗಾಳಿಯ ಪ್ರಭಾವದಿಂದ ಹಲವೆಡೆ ಮರಗಳು ಧರೆಗುರುಳಿವೆ ಎನ್ನುವ ಮಾಹಿತಿಯನ್ನು ಹಂಚಿಕೊಂಡಿದ್ದಾರೆ.

ಅರ್ನಬ್ ಚಂಡಮಾರುತವು ಬಂಗಾಳ ಕೊಲ್ಲಿಯಲ್ಲಿ ಸೃಷ್ಟಿಯಾಗಿ ಅ.28ರಂದು ಬುಧವಾರ ನಸುಕಿನ ಮುಂಜಾನೆ ಸುಮಾರು 1:20 ರ ಸುಮಾರಿಗೆ ಆಂಧ್ರಪ್ರದೇಶದ ಕರಾವಳಿ ಕಾಕಿನಾಡ ತೀವ್ರ ಸ್ವರೂಪ ಪಡೆಯಿತು. ಈ ಚಂಡಮಾರುತವು ಬಾಪಟ್ಲ ಮತ್ತು ವಿಶಾಖಪಟ್ಟಣದ ನಡುವೆ, ಯಾನಂನ ದಕ್ಷಿಣಕ್ಕೆ ಹತ್ತಿರದಲ್ಲಿ ಕರಾವಳಿಯನ್ನು ದಾಟಿದ್ದು ಗಂಟೆಗೆ 125–135 ಕಿ.ಮೀ ವೇಗದಲ್ಲಿ (ಗರಿಷ್ಠ 150 ಕಿ.ಮೀ ವರೆಗಿನ ವೇಗದ ಗಾಳಿಯೊಂದಿಗೆ) ಅಪ್ಪಳಿಸಿದೆ. ಭೂಕುಸಿತ ಪ್ರಕ್ರಿಯೆ ಮೂರು ಗಂಟೆಗಳ ಕಾಲ ಮುಂದುವರೆಯಲಿದ್ದು, ಕ್ರಮೇಣವಾಗಿ ಚಂಡಮಾರುತವು ವಾಯುವ್ಯ ದಿಕ್ಕಿನಿಂದ ಉತ್ತರ ವಾಯು ತೆಲಂಗಾಣದತ್ತ ಚಲಿಸುವ ವೇಳೆಗೆ ದುರ್ಬಲವಾಗಲಿದೆ ಎಂದು ಎಂದು ಭಾರತೀಯ ಹವಾಮಾನ ಇಲಾಖೆ ಹೇಳಿದೆ.

ಕೋನಸೀಮಾ, ಕಾಕಿನಾಡ ಮತ್ತು ಅನಕಾಪಲ್ಲಿ ಸೇರಿದಂತೆ ಆಂಧ್ರಪ್ರದೇಶದ ಕರಾವಳಿ ಪ್ರದೇಶದ ಹಲವು ಕಡೆ ನೂರಾರು ಮರಗಳು, ವಿದ್ಯುತ್ ಕಂಬಗಳು ನೆಲಕ್ಕೆ ಉರುಳಿದೆ. ಎರಡೂ ರಾಜ್ಯಗಳಲ್ಲಿ ಇಲ್ಲಿಯವರೆಗೆ ಯಾವುದೇ ಜೀವಹಾನಿ ಸಂಭವಿಸಿಲ್ಲ. ವಿದ್ಯುತ್ ಸರಬರಾಜು ಅಸ್ತವ್ಯಸ್ತಗೊಂಡಿದೆ.

ವಿಶಾಖಪಟ್ಟಣದ ಬೀಚ್ ರಸ್ತೆ ಸೇರಿದಂತೆ ತಗ್ಗು ಪ್ರದೇಶಗಳು ಮುಳುಗಡೆಯಾಗಿದೆ. ಹೆದ್ದಾರಿ ರಸ್ತೆಯಲ್ಲಿ ಮರಗಳು ಉರುಳಿ ಬಿದ್ದು ಸಂಚಾರ ಸ್ಥಗಿತಗೊಂಡಿತ್ತು. ವಿಶಾಖಪಟ್ಟಣದಲ್ಲಿ ಮಂಗಳವಾರ ಮುಂಜಾನೆಯಿಂದ ಬುಧವಾರ ಮಧ್ಯರಾತ್ರಿಯವರೆಗೂ 216.9 ಮಿ.ಮೀ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ಮಾಹಿತಿ ಹಂಚಿಕೊಂಡಿದೆ. ಕಳಿಂಗಪಟ್ಟಣದಲ್ಲಿ 147 ಮಿ.ಮೀ, ಕಾಕಿನಾಡದಲ್ಲಿ 118 ಮತ್ತು ಮಚಲಿಪಟ್ಟಣದಲ್ಲಿ 115 ಮಿ.ಮೀ ಮಳೆಯಾಗಿದೆ.

ಇನ್ನೂ ಕರಾವಳಿ ತೀರದಲ್ಲಿ ಬೃಹತ್ ಎತ್ತರದ ಅಲೆಗಳು 1.5 ರಿಂದ 2.5 ಮೀಟರ್ ಎತ್ತರದಲ್ಲಿ ಅಪ್ಪಳಿಸುತ್ತಿದೆ. ಯಾನಂ ಸಮೀಪದ ಸವತ್ರಿ ನಗರದಲ್ಲಿದ್ದ ಪರಿಹಾರ ಕೇಂದ್ರಕ್ಕೆ ಸಮುದ್ರದ ನೀರು ನುಗ್ಗಿದೆ. ಒಡಿಶಾದ ಗಂಜಾಂ, ರಾಯಗಢ, ಬಾಲಸೋರ್ ಸೇರಿದಂತೆ ಹಲವು ಜಿಲ್ಲೆಗಳಿಗೆ ಮಳೆಯ ಮುನ್ಸೂಚನೆ ನೀಡಲಾಗಿದೆ.

# ಪ್ರಶಾಂತ್ ಕಿಶೋರ್ ಆಪ್ತ ನಿಗೂಢ ಸಾವು



ಪಾಟ್ನಾ, ಅ. 28: ರಾಜಕೀಯ ತಂತ್ರಜ್ಞ ಪ್ರಶಾಂತ್ ಕಿಶೋರ್ ನೇತೃತ್ವದ ಜನ್ ಸುರಾಜ್ ಪಕ್ಷದ (ಜೆಎಸ್ಪಿ) ಡಿಜಿಟಲ್ ಕಮ್ಯುನಿಕೇಷನ್ಸ್ ಮ್ಯಾನೇಜರ್ ದೇವಪಾಲಿಕ್ ಗುಪ್ತಾ (31) ಅವರು ರೈಲು ಪ್ರಯಾಣದ ವೇಳೆ ನಾಪತ್ತೆಯಾಗಿ, ನಿಗೂಢವಾಗಿ ಶವವಾಗಿ ಪತ್ತೆಯಾಗಿರುವ ಆಘಾತಕಾರಿ ಘಟನೆ ಜಾರ್ಖಂಡ್‌ನ ರಾಂಚಿಯಲ್ಲಿ ನಡೆದಿದೆ. ಸೋಮವಾರ ಮಧ್ಯಾಹ್ನ ರಾಂಚಿ–ಪಟನಾ ಜನಶತಾಬ್ದಿ ಎಕ್ಸ್‌ಪ್ರೆಸ್ ರೈಲಿನಲ್ಲಿ ಇಬ್ಬರು ಸಹೋದ್ಯೋಗಿಗಳೊಂದಿಗೆ ಪ್ರಯಾಣಿಸುತ್ತಿದ್ದ ದೇವಪಾಲಿಕ್ ದಿಢೀರ್ ನಾಪತ್ತೆಯಾಗಿದ್ದರು. ನಾಪತ್ತೆಯಾದ 24 ಗಂಟೆಗಳ ಬಳಿಕ ಮಂಗಳವಾರ ಮಧ್ಯಾಹ್ನ ರಾಂಚಿಯ ಅಂಗಾರ ಪೊಲೀಸ್ ಠಾಣಾ ವ್ಯಾಪ್ತಿಯ ಜರ್ವಾಡಿಹ್ ಬಳಿಯ ರೈಲ್ವೆ ಹಳಿಗಳ ಪಕ್ಕದ ಪೊದೆಯಲ್ಲಿ ಅವರ ಮೃತದೇಹ ಹಾಗೂ ವಸ್ತುಗಳು ಪತ್ತೆಯಾಗಿವೆ.

ಮಧ್ಯಾಹ್ನ 2.25ರ ಸುಮಾರಿಗೆ ರೈಲು ರಾಂಚಿಯಿಂದ ಪಟನಾಗೆ ಹೊರಟಿತ್ತು. ಕೇವಲ 10 ನಿಮಿಷಗಳ ನಂತರ ಊಟ ತರಲು ಪ್ಯಾಂಟ್ರಿ ಕಾರ್ ಕಡೆಗೆ ಹೋದ ದೇವಪಾಲಿಕ್ ಮರಳಿ ಬರಲಿಲ್ಲ. ಎರಡು ಗಂಟೆಗಳಾದರೂ ಅವರು ಬಾರದಿದ್ದಾಗ ನಮಗೆ ಅನುಮಾನ ಶುರುವಾಯಿತು. ಪಕ್ಕದ ಬೋಗಿ, ಪ್ಯಾಂಟ್ರಿ ಸೇರಿದಂತೆ ಇಡೀ ರೈಲಿನಲ್ಲಿ ಹುಡುಕಾಡಿದರೂ ಅವರು ಸಿಗಲಿಲ್ಲ. ರೈಲು ಮುರಿ ಜಂಕ್ಷನ್ ತಲುಪಿದಾಗ ರೈಲ್ವೆ ಪೊಲೀಸರಿಗೆ (ಜಿಆರ್‌ಪಿ) ದೂರು ನೀಡಿದೆವು, ಎಂದು ಅವರೊಂದಿಗೆ ಪ್ರಯಾಣಿಸುತ್ತಿದ್ದ ಸಹೋದ್ಯೋಗಿಗಳಾದ ಗೌತಮ್ ಕುಮಾರ್ ಮತ್ತು ನಿಶಾಂತ್ ವಿವರಿಸಿದ್ದಾರೆ. ರಾಂಚಿಯಿಂದ ಹೊರಟ ಬಳಿಕ ರೈಲು ನಿಲ್ಲುವ ಮೊದಲ ನಿಲ್ದಾಣವೇ ಮುರಿ ಜಂಕ್ಷನ್ ಆಗಿದ್ದರಿಂದ, ಅವರು ಬೇರೆಲ್ಲೂ ಇಳಿಯುವ ಸಾಧ್ಯತೆಯಿರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಹಿರಿಯ ಪೊಲೀಸ್ ಅಧಿಕಾರಿ ಗೌರವ್ ಗೋಸ್ವಾಮಿ ಈ ಬಗ್ಗೆ ಮಾಹಿತಿ ನೀಡಿದ್ದು, ಪ್ರಾಥಮಿಕ ತನಿಖೆಯ ಪ್ರಕಾರ ದೇವಪಾಲಿಕ್ ಅವರ ತಲೆಗೆ ಪೆಟ್ಟಾಗಿರುವುದು ಕಂಡುಬಂದಿದೆ. ಚಲಿಸುತ್ತಿದ್ದ ರೈಲಿನಿಂದ ಅವರು ಆಯತಪ್ಪಿ ಬಿದ್ದಿರಬಹುದು ಎಂದು ಮೇಲ್ನೋಟಕ್ಕೆ ಶಂಕಿಸಲಾಗಿದೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ರಾಂಚಿಯ ರಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದ್ದು, ನಿಖರ ಕಾರಣ ತಿಳಿಯಲು ತನಿಖೆ ಮುಂದುವರಿದಿದೆ, ಎಂದು ಹೇಳಿದ್ದಾರೆ.

ಜನ್ ಸುರಾಜ್ ಪಕ್ಷದ ರಾಷ್ಟ್ರೀಯ ವಕ್ತಾರ ಕುಮಾರ್ ಸೌರಭ್ ಸಿಂಗ್ ಅವರು ಸೋಮವಾರ ರಾತ್ರಿ 9 ಗಂಟೆಗೆ ಎಫ್‌ಐಆರ್ ದಾಖಲಿಸಿರುವುದಾಗಿ ತಿಳಿಸಿದ್ದಾರೆ. ಈ ಸಾವಿನ ಬಗ್ಗೆ ನಿಷ್ಪಕ್ಷಪಾತ ತನಿಖೆಯಾಗಬೇಕೆಂದು ಪಕ್ಷ ಆಗ್ರಹಿಸಿದೆ. ದೇವ್ಪಾಲಿಕ್ ಯಾವ ಪರಿಸ್ಥಿತಿಯಲ್ಲಿ ಮೃತಪಟ್ಟರು ಎಂಬುದು ನಮಗೆ ತಿಳಿದಿಲ್ಲ. ಹೀಗಾಗಿ ಇದು ರಾಜಕೀಯ ಅಥವಾ ಇತರ ಯಾವುದೇ ಪಿತೂರಿ ಎಂದು ಅಧಿಕೃತವಾಗಿ ಹೇಳಲಾಗದು. ಒಂದು ವೇಳೆ ಇದರ ಹಿಂದೆ ಯಾವುದೇ ಪಿತೂರಿ ಇದ್ದರೆ, ಅದರ ಬಗ್ಗೆ ನಿಷ್ಪಕ್ಷಪಾತ ತನಿಖೆಯಾಗಬೇಕು ಎಂದು ಪಕ್ಷದ ವಕ್ತಾರರು ಒತ್ತಾಯಿಸಿದ್ದಾರೆ. ಸಾಮಾಜಿಕ ಕಾರ್ಯಕರ್ತೆ ನೇಹಾ ಸಿಂಗ್ ರಾಥೋಡ್ ಹಾಗೂ ಐಐಎಂಸಿ ಹಳೆಯ ವಿದ್ಯಾರ್ಥಿಗಳ ಸಂಘ ಕೂಡ ಈ ನಿಗೂಢ ಸಾವಿನ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಆಗ್ರಹಿಸಿವೆ.

# 5 ವರ್ಷದ ಬಾಲಕಿಗೆ ಲೈಂಗಿಕ ದೌರ್ಜನ್ಯ: 20 ವರ್ಷ ಜೈಲು

ಠಾಣೆ, ಅ. 28: ಐದು ವರ್ಷದ ಪುಟ್ಟ ಮಗುವಿನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ ಆರೋಪಿಗೆ ಠಾಣೆಯ ವಿಶೇಷ ಪೋಕ್ಸೋ ಕೋರ್ಟ್ 20 ವರ್ಷ ಕಠಿಣ ಜೈಲು ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. 2019ರಲ್ಲಿ ನಡೆದ ಈ ಘಟನೆಗೆ ಸಂಬಂಧಿಸಿದಂತೆ, ಆಕಾಶ್ ಬಾಬುರಾವ್ ತೋರತ್ ಎಂಬಾತನಿಗೆ ಶಿಕ್ಷೆಯಾಗಿದೆ. ಈ ಕೇಸ್ನಲ್ಲಿ ಮಗು ನೀಡಿದ ಸಾಕ್ಷ್ಯೇ ಅತ್ಯಂತ ಪ್ರಮುಖವಾಯಿತು. ಮಗುವಿಗೆ ಯಾರೂ ಹೇಳಿಕೊಟ್ಟು ಸಾಕ್ಷಿ ಹೇಳಿಸಿಲ್ಲ ಎಂಬುದನ್ನು ಗಮನಿಸಿದ ಕೋರ್ಟ್, ಆಕೆಯ ಹೇಳಿಕೆಯನ್ನೇ ಆಧರಿಸಿ ಆರೋಪಿಗೆ ಶಿಕ್ಷೆ ಖಾಯಂ ಮಾಡಿದೆ.

ಡಿಸೆಂಬರ್ 1, 2019 ರಂದು ಠಾಣೆಯ ಮುಂಬ್ರಾ ಪ್ರದೇಶದ ಚಾಲ್ನಲ್ಲಿ ಮಗು ಆಟವಾಡುತ್ತಿದ್ದಾಗ, ನೆರೆಮನೆಯಲ್ಲಿದ್ದ ಆಕಾಶ್ ಮಗುವನ್ನು ಪುಸಲಾಯಿಸಿ ತನ್ನ ಮನೆಗೆ ಕರೆದೊಯ್ದಿದ್ದ. ಟಿವಿ ಹಾಕಿ ಕೊಟ್ಟು ಮಗುವಿನ ಮೇಲೆ ದೌರ್ಜನ್ಯ ಎಸಗಿದ್ದ. ಹೆದರಿದ ಮಗು ಮನೆಗೆ ಬಂದು ಅಮ್ಮನಿಗೆ ವಿಷಯ ತಿಳಿಸಿತ್ತು. ತಕ್ಷಣ ತಾಯಿ ಪೊಲೀಸರಿಗೆ ದೂರು ನೀಡಿದ್ದರು.

ವಿಶೇಷ ಪೋಕ್ಸೋ ಕೋರ್ಟ್ ಆರೋಪಿಗೆ ಪೋಕ್ಸೋ ಕಾಯ್ದೆಯ ಸೆಕ್ಷನ್ 6ರಡಿ20 ವರ್ಷಗಳ ಕಠಿಣ ಜೈಲು ಶಿಕ್ಷೆ ಮತ್ತು 5,000 ರೂಪಾಯಿ ದಂಡ ವಿಧಿಸಿದ್ದು, ದಂಡ ತೆರಲು ತಪ್ಪಿದರೆ ಹೆಚ್ಚುವರಿ 3 ತಿಂಗಳ ಕಠಿಣ ಜೈಲು ಶಿಕ್ಷೆಯನ್ನು ವಿಧಿಸಿದೆ. ಇದರ ಜತೆಗೆ, ಭಾರತೀಯ ದಂಡ ಸಂಹಿತೆಯ ಸೆಕ್ಷನ್ 354ಂ (ಲೈಂಗಿಕ ಕಿರುಕುಳ) ಅಡಿಯಲ್ಲಿ 3 ವರ್ಷಗಳ ಕಠಿಣ ಜೈಲು ಶಿಕ್ಷೆ ಹಾಗೂ 1,000 ರೂಪಾಯಿ ದಂಡ ವಿಧಿಸಲಾಗಿದೆ. ಎರಡೂ ಶಿಕ್ಷೆಗಳನ್ನು ಆರೋಪಿ ಒಟ್ಟಿಗೆ ಅನುಭವಿಸಬೇಕಾಗುತ್ತದೆ.

ಎರಡೂ ಶಿಕ್ಷೆಗಳನ್ನು ಆರೋಪಿ ಒಟ್ಟಿಗೆ ಅನುಭವಿಸಬೇಕಾಗುತ್ತದೆ. ಜೊತೆಗೆ ಸಂಗ್ರಹವಾಗುವ 6,000 ರೂ. ದಂಡವನ್ನು ಮಗುವಿಗೆ ನೀಡಬೇಕು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಸಂತ್ರಸ್ತ ಮಗುವಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಕೋರ್ಟ್ ಆದೇಶಿಸಿದೆ.

### ಜಿಬಿಎ ಸಮಗ್ರ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿ

## ಬೆಂಗಳೂರು ಶಾಸಕರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಮನವಿ



**ಬೆಂಗಳೂರು, ಅ.28:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಮಗ್ರ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವಂತೆ ನಗರದ ಶಾಸಕರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿಕೊಂಡಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನಡೆದ ಬೆಂಗಳೂರು ಅಭಿವೃದ್ಧಿ ಕುರಿತ ಸಭೆಯಲ್ಲಿ ನಗರದ ವಿವಿಧ ಸಮಸ್ಯೆಗಳ ಬಗ್ಗೆ ಚರ್ಚೆ ನಡೆದಿದ್ದು, ಬಹುತೇಕ ಶಾಸಕರು ತಮ್ಮ ಕ್ಷೇತ್ರಗಳ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವಂತೆ ಬೇಡಿಕೆ ಇಟ್ಟಿದ್ದಾರೆ.

ನಗರದ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಚರ್ಚಿಸಲು ಆಯೋಜಿಸಿದ್ದ ಸಭೆಯಲ್ಲಿ ಬೆಂಗಳೂರಿನ ಶಾಸಕರು ಭಾಗವಹಿಸಿ ತಮ್ಮ ಕ್ಷೇತ್ರಗಳಲ್ಲಿನ ಸಮಸ್ಯೆಗಳು, ಕೈಗೊಳ್ಳಬೇಕಿರುವ ಕಾಮಗಾರಿಗಳು ಮತ್ತು ಅಗತ್ಯ ಅನುದಾನದ ಕುರಿತು ಸಲಹೆ-ಅಭಿಪ್ರಾಯಗಳನ್ನು ಮಂಡಿಸಿದರು.

**ಕ್ಷೇತ್ರವಾರು ಕಾಮಗಾರಿಗಳ ಮಾಹಿತಿ ಕೇಳಿದ ಸಿಎಂ:** ಶಾಸಕರ ಬೇಡಿಕೆಗಳಿಗೆ ಸ್ಪಂದಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಪ್ರತಿಯೊಬ್ಬ ಶಾಸಕರು ತಮ್ಮ ಕ್ಷೇತ್ರದಲ್ಲಿ ಕೈಗೊಳ್ಳಬೇಕಿರುವ ಅಭಿವೃದ್ಧಿ ಕಾಮಗಾರಿಗಳ ವಿವರ ಹಾಗೂ ಅವುಗಳಿಗೆ ಅಗತ್ಯವಿರುವ ಅನುದಾನದ ಪ್ರಮಾಣದ ಮಾಹಿತಿಯನ್ನು ಒದಗಿಸುವಂತೆ ಸೂಚಿಸಿದರು. ಶಾಸಕರು ನೀಡುವ ಪ್ರಸ್ತಾವನೆಗಳನ್ನು ಪರಿಶೀಲಿಸಿದ ಬಳಿಕ ಅನುದಾನ ಬಿಡುಗಡೆ ಕುರಿತು ತೀರ್ಮಾನ ಕೈಗೊಳ್ಳುವುದಾಗಿ ಭರವಸೆ ನೀಡಿದರು. ನಗರದ ರಸ್ತೆ, ಸಂಚಾರ ವ್ಯವಸ್ಥೆ ಸೇರಿದಂತೆ ವಿವಿಧ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡುವ ಅಗತ್ಯದ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆಯಿತು. ಕ್ಷೇತ್ರಗಳ ಅಗತ್ಯಗಳಿಗೆ ಅನುಗುಣವಾಗಿ ಕಾಮಗಾರಿಗಳ ಪಟ್ಟಿ ಸಿದ್ಧಪಡಿಸಿ ಸಲ್ಲಿಸಿದ ಬಳಿಕ ಅನುದಾನದ ಹಂಚಿಕೆ ಕುರಿತು ಮುಂದಿನ ಕ್ರಮ ಕೈಗೊಳ್ಳುವ ಬಗ್ಗೆ ಭರವಸೆ ನೀಡಿದರು.

**ಗುತ್ತಿಗೆದಾರರ ವಿರುದ್ಧ ಶಾಸಕರ ಅಸಮಾಧಾನ:** ಬೆಂಗಳೂರು ನಗರದ ಕಸ ವಿಲೇವಾರಿ ಸಮಸ್ಯೆಯೂ ಸಭೆಯಲ್ಲಿ ಪ್ರಮುಖವಾಗಿ ಪ್ರಸ್ತಾಪವಾಯಿತು. ಕಸ ಸಂಗ್ರಹಣೆ ಮತ್ತು ವಿಲೇವಾರಿ ವ್ಯವಸ್ಥೆ ಸಮರ್ಪಕವಾಗಿ ನಡೆಯದಿರುವ ಕುರಿತು ಶಾಸಕರು ಅಸಮಾಧಾನ ವ್ಯಕ್ತಪಡಿಸಿದರು. ಕಸದ ನಿರ್ವಹಣೆಯ ಗುತ್ತಿಗೆದಾರರ ಕಾರ್ಯವೈಖರಿ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ ಅವರು, ಟೆಂಡರ್ ಪ್ರಕ್ರಿಯೆಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗೆ ಮನವಿ ಮಾಡಿದರು.

**ಟನಲ್ ರಸ್ತೆ, ಎಲಿವೇಟೆಡ್ ಕಾರಿಡಾರ್‌ಗಳ ಪ್ರಸ್ತಾಪ:** ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಕೈಗೊಳ್ಳಲು ಉದ್ದೇಶಿಸಿರುವ ಸುರಂಗ ರಸ್ತೆ (ಟನಲ್ ರಸ್ತೆ) ಹಾಗೂ ಎಲಿವೇಟೆಡ್ ಕಾರಿಡಾರ್‌ಗಳ ನಿರ್ಮಾಣ ಯೋಜನೆಗಳ ಕುರಿತು ಸಭೆಯಲ್ಲಿ ಮಾಹಿತಿ ಹಂಚಿ ಕೊಂಡರು. ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆಗೆ ಪರಿಹಾರ ಕಂಡುಕೊಳ್ಳಲು ಪರ್ಯಾಯ ರಸ್ತೆ ಸಂಪರ್ಕ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸುವ ಅಗತ್ಯದ ಕುರಿತು ಚರ್ಚಿಸಲಾಯಿತು. ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿ, ಕ್ಷೇತ್ರವಾರು ಅನುದಾನದ ಹಂಚಿಕೆ ಹಾಗೂ ಕಸ ವಿಲೇವಾರಿ ವ್ಯವಸ್ಥೆಯ ಸುಧಾರಣೆ ಸಭೆಯಲ್ಲಿ ಪ್ರಮುಖ ಚರ್ಚೆ ಅಯಿತು.

### ಸರ್ಕಾರಕ್ಕೆ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಆಗ್ರಹ

## ವಸತಿ ಸಮುಚ್ಚಯಗಳಲ್ಲಿ ಕನ್ನಡ ಬಳಕೆಗೆ ಅಧಿಸೂಚನೆ ಮೂಲಕ ರಾಜ್ಯೋತ್ಸವ ಅರ್ಥಪೂರ್ಣಗೊಳಿಸಿ



**ಬೆಂಗಳೂರು, ಅ.28:** 71ನೇ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಬೆಂಗಳೂರಿನ ವಸತಿ ಸಮುಚ್ಚಯಗಳ ನಾಮಫಲಕಗಳಲ್ಲಿ ಕನ್ನಡಕ್ಕೆ ಆದ್ಯತೆ ನೀಡುವುದರ ಜೊತೆಗೆ ಅವುಗಳ ಆಡಳಿತ ವ್ಯವಸ್ಥೆಯಲ್ಲಿಯೂ ಕನ್ನಡದ ಬಳಕೆಯನ್ನು ಕಡ್ಡಾಯಗೊಳಿಸುವ ಕುರಿತು ಸರ್ಕಾರವು ಮುಂದಾಗುವ ಮೂಲಕ ರಾಜ್ಯೋತ್ಸವನ್ನು ಅರ್ಥಪೂರ್ಣವಾಗಿಸಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರನ್ನು ಆಗ್ರಹಿಸಿದ್ದಾರೆ.

ಈ ಕುರಿತಂತೆ ಸಚಿವರಿಗೆ ಪತ್ರ ಬರೆದಿರುವ ಬಿಳಿಮಲೆ, ಬೆಂಗಳೂರಿನ ಅನೇಕ ವಸತಿ ಸಮುಚ್ಚಯಗಳು ಆಂಗ್ಲ ಭಾಷೆಯ ಹೆಸರುಗಳನ್ನು ಹೊಂದಿರುವುದು, ಅವುಗಳ ನಾಮಫಲಕಗಳು ಸಂಪೂರ್ಣವಾಗಿ ಆಂಗ್ಲ ಭಾಷೆಯಲ್ಲಿರುವುದು ಕನ್ನಡದ ಬೆಳವಣಿಗೆಯ ದೃಷ್ಟಿಯಿಂದ ಸೂಕ್ತವಲ್ಲ. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮದ ಆಶಯದಂತೆ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡಕ್ಕೆ ಮತ್ತು ಶೇ.40ರಷ್ಟು ಆಂಗ್ಲ ಭಾಷೆಗೆ ಅವಕಾಶ ಕಲ್ಪಿಸುವ ನಿಯಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕೆಂದು ಒತ್ತಾಯಿಸಿದ್ದಾರೆ.

ವಸತಿ ಸಮುಚ್ಚಯಗಳ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳ ಸಭಾ ಸೂಚನೆಗಳು, ಸುತ್ತೋಲೆಗಳು, ಪ್ರಕಟಣೆಗಳು ಹಾಗೂ ಆಡಳಿತಾತ್ಮಕ ವ್ಯವಹಾರಗಳಲ್ಲಿಯೂ ಕನ್ನಡದ ಬಳಕೆಗೆ ಆದ್ಯತೆ ನೀಡಬೇಕೆಂದು ಆಗ್ರಹಿಸಿರುವ ಬಿಳಿಮಲೆ, ಈ ನಿಟ್ಟಿನಲ್ಲಿ ಪ್ರತ್ಯೇಕ ಅಧಿಸೂಚನೆಯನ್ನು ಹೊರಡಿಸಿ ಕನ್ನಡದ ಬಳಕೆಯನ್ನು ಕಡ್ಡಾಯಗೊಳಿಸಲು ಅಗತ್ಯಕ್ರಮ ಕೈಗೊಳ್ಳಬೇಕೆಂದು ಕೋರಿದ್ದಾರೆ.

ಬೆಂಗಳೂರಿನ ವಸತಿ ಸಮುಚ್ಚಯಗಳಲ್ಲಿ ವಾಸಿಸುತ್ತಿರುವ ಅಸಂಖ್ಯಾತ ಕನ್ನಡೇತರರಿಗೆ ಕನ್ನಡ ಕಲಿಸುವ ಅಭಿಯಾನವನ್ನು ವ್ಯಾಪಕವಾಗಿ ಕೈಗೆತ್ತಿಕೊಳ್ಳಲು 2025ರಲ್ಲಿ ನಡೆದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಂದಿನ ಆಯುಕ್ತರಿಗೆ ನೀಡಿದ್ದ ಸೂಚನೆಯನ್ನು ಸ್ಮರಿಸಿರುವ ಬಿಳಿಮಲೆ, ಇದನ್ನು ಮುಂದಿನ ಹಂತಕ್ಕೆ ಕೊಂಡೊಯ್ಯುವ ಪ್ರಯತ್ನಕ್ಕೆ ಇದು ಸಕಾಲವಾಗಿದೆ. ಬೆಂಗಳೂರಿನ ಎಲ್ಲಾ ವಸತಿ ಸಮುಚ್ಚಯಗಳು ರಾಜ್ಯೋತ್ಸವವನ್ನು ಕಡ್ಡಾಯವಾಗಿ ಆಚರಿಸಬೇಕೆಂಬ ಸುತ್ತೋಲೆಯನ್ನು ಸಹ ಜಾರಿ ಮಾಡಿದಲ್ಲಿ ಇದು ಇನ್ನಷ್ಟು ಅರ್ಥಪೂರ್ಣವಾಗಲಿದೆ ಎಂದಿದ್ದಾರೆ.

71ನೇ ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ಇಂತಹ ತೀರ್ಮಾನವು ಕನ್ನಡ ಭಾಷೆಗೆ ಮತ್ತು ಅಸ್ಮಿತೆಗೆ ಸರ್ಕಾರ ಸಲ್ಲಿಸುವ ವಿಶೇಷ ಗೌರವವಾಗಲಿದೆ ಎಂದಿರುವ ಬಿಳಿಮಲೆ, ಬೆಂಗಳೂರಿನ ಸಾರ್ವಜನಿಕ ಬದುಕಿನಲ್ಲಿ ಕನ್ನಡವು ಸಹಜವಾಗಿ ಬಳಕೆಯಾಗುವ ಭಾಷೆಯಾಗಿ ನೆಲೆಗೊಳ್ಳಲು ಇದು ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

### ರೇಣುಕಾಸ್ವಾಮಿ ಕೊಲೆ ಪ್ರಕರಣ: ಹೇಳಿಕೆಯಿಂದ ಹಿಂದೆಸರಿದು ಅಚ್ಚರಿ ಮೂಡಿಸಿದ ಪ್ರತ್ಯಕ್ಷ ಸಾಕ್ಷಿ ಪುನೀತ್

## ಘಟನೆ ನಡೆದ ದಿನ ನಟ ದರ್ಶನ್, ಪವಿತ್ರಾ ಗೌಡ ಸೇರಿ ಯಾರೂ ಬಂದಿರಲಿಲ್ಲ

**ಬೆಂಗಳೂರು, ಅ.28:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ನ್ಯಾಯಾಂಗ ವಿಚಾರಣೆಯಲ್ಲಿ ಮಹತ್ವದ ತಿರುವು ಸಿಕ್ಕಿದೆ.

ಪ್ರಕರಣದ ಪ್ರಮುಖ ಪ್ರತ್ಯಕ್ಷ ಸಾಕ್ಷಿಯಾಗಿದ್ದ ಪುನೀತ್ ನ್ಯಾಯಾಲಯದಲ್ಲಿ ತನ್ನ ಹಿಂದಿನ ಹೇಳಿಕೆಯಿಂದ ಸಂಪೂರ್ಣವಾಗಿ ಹಿಂದೆ ಸರಿದು ಪ್ರತಿಕೂಲ ಸಾಕ್ಷಿಯಾಗಿ ಅಚ್ಚರಿ ಮೂಡಿಸಿದ್ದಾನೆ. ಬೆಂಗಳೂರಿನ 59ನೇ ಸಿಸಿಎಚ್ ಕೋರ್ಟ್‌ನಲ್ಲಿ ಬುಧವಾರ ನಡೆದ ಸಾಕ್ಷ್ಯ ವಿಚಾರಣೆ ವೇಳೆ ಈ ಬೆಳವಣಿಗೆ ನಡೆದಿದೆ. ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿ ಮೇಲೆ ಹಲ್ಲೆ ನಡೆದ ಸಂದರ್ಭದಲ್ಲಿ ಪುನೀತ್ ಹಾಗೂ ಕಿರಣ್ ಎಂಬಿಬ್ಬರು ಸ್ಥಳದಲ್ಲೇ ಇದ್ದು, ಕೃತ್ಯವನ್ನು ಕಣ್ಣಾರೆ ಕಂಡಿದ್ದರು ಎನ್ನಲಾಗಿತ್ತು. ರೇಣುಕಾಸ್ವಾಮಿಯನ್ನು ಅಪಹರಿಸಿ ಶೆಡ್‌ಗೆ ಕರೆತಂದಿದ್ದನ್ನು ಹಾಗೂ ಆತನ ಮೇಲೆ ನಡೆಸಲಾದ ಮಾರಣಾಂತಿಕ ಹಲ್ಲೆಯನ್ನು ಇವರು ನೋಡಿದ್ದಾರೆ ಎಂದು ತನಿಖಾಧಿಕಾರಿಗಳು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದ್ದರು. ಅಲ್ಲದೆ, ಪುನೀತ್ ಈ ಹಿಂದೆ ಮ್ಯಾಜಿಸ್ಟ್ರೇಟ್ ಮುಂದೆ ಸಿಆರ್‌ಪಿಸಿ ಸೆಕ್ಷನ್ 164ರ ಅಡಿಯಲ್ಲಿ ಹೇಳಿಕೆಯನ್ನೂ ದಾಖಲಿಸಿದ್ದನು. ಡಿ ಕಂಪನಿ ಫ್ಯಾನ್ ಪೇಜ್ ಅಡ್ಮಿನ್ ಆಗಿದ್ದ ಪುನೀತ್, ನಟ ದರ್ಶನ್ ಜೊತೆ ನಿಕಟ ಒಡನಾಟ ಹೊಂದಿದ್ದ ವ್ಯಕ್ತಿಯಾಗಿದ್ದ ಕಾರಣ ಆತನ ಹೇಳಿಕೆ ಈ ಕೇಸ್‌ನಲ್ಲಿ ಅತ್ಯಂತ ನಿರ್ಣಾಯಕವೆಂದು ಪರಿಗಣಿಸಲಾಗಿತ್ತು.

ಅಕ್ಟೋಬರ್ 27ರಂದು ನಡೆದ ವಿಚಾರಣೆಗೆ ಪುನೀತ್ ಹಾಜರಾಗದೆ ಗೈರಾಗಿದ್ದನು. ಸಮನ್ಸ್ ಜಾರಿಯಾಗಿದ್ದರೂ ಸಾಕ್ಷಿ ಹಾಜರಾಗದ ಹಿನ್ನೆಲೆಯಲ್ಲಿ, ಎಸ್‌ಪಿಪಿ ಮನವಿ ಮೇರೆಗೆ ನ್ಯಾಯಾಲಯವು ಆತನ ವಿರುದ್ಧ ಜಾಮೀನುರಹಿತ ಬಂಧನ ವಾರಂಟ್ ಹೊರಡಿಸಿ ವಿಚಾರಣೆಯನ್ನು ಅಕ್ಟೋಬರ್ 28ಕ್ಕೆ ಮುಂದೂಡಿತ್ತು. ವಾರೆಂಟ್ ಜಾರಿಯಾದ ಬೆನ್ನಲ್ಲೇ ಬುಧವಾರ ಕೋರ್ಟ್‌ಗೆ ಹಾಜರಾದ ಪುನೀತ್, ನ್ಯಾಯಾಧೀಶರ ಮುಂದೆ ಸಾಕ್ಷ್ಯ ನುಡಿಯುವಾಗ ಉಲ್ಟಾ ಹೊಡೆದಿದ್ದಾನೆ. ಘಟನೆ ನಡೆದ ದಿನ ಶೆಡ್ ಬಳಿ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ ಯಾವುದೇ ಆರೋಪಿಗಳು ಬಂದಿರಲೇ ಇಲ್ಲ. ಪ್ರಸ್ತುತ ಕೋರ್ಟ್ ಹಾಲ್‌ನಲ್ಲಿರುವ ಹಾಗೂ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಹಾಜರಾಗಿರುವ ಯಾವುದೇ ಆರೋಪಿಗಳು ಅಲ್ಲಿ ಇರಲಿಲ್ಲ ಎಂದು ಹೇಳಿಕೆ ನೀಡುವ ಮೂಲಕ ಪೊಲೀಸರ ತನಿಖಾ ವರದಿಯನ್ನೇ ತಲೆಕೆಳಗಾಗಿಸಿದ್ದಾನೆ.ತನ್ನ ಹಿಂದಿನ 164 ಹೇಳಿಕೆಗೆ ತದ್ವಿರುದ್ಧವಾಗಿ ಸಾಕ್ಷಿ ನುಡಿದ ಹಿನ್ನೆಲೆಯಲ್ಲಿ ನ್ಯಾಯಾಲಯವು ಆತನನ್ನು 'ಪ್ರತಿಕೂಲ ಸಾಕ್ಷಿ' ಎಂದು ಘೋಷಿಸಿತು.

ಸದ್ಯ ಪುನೀತ್‌ನ ಭಾಗಶಃ ಹೇಳಿಕೆಯನ್ನು ಮಾತ್ರ ದಾಖಲಿಸಿಕೊಂಡಿರುವ ನ್ಯಾಯಾಲಯ, ವಿಚಾರಣೆಯನ್ನು ಗುರುವಾರಕ್ಕೆ ಮುಂದೂಡಿದೆ. ಪ್ರಮುಖ ಪ್ರತ್ಯಕ್ಷ ಸಾಕ್ಷಿಯೇ ಕೋರ್ಟ್‌ನಲ್ಲಿ ತಿರುಗಿ ಬಿದ್ದಿರುವುದು ಪ್ರಾಸಿಕ್ಯೂಷನ್‌ಗೆ ಹಿನ್ನಡೆಯಾಗಿ ಪರಿಣಮಿಸಿದ್ದು, ಪ್ರಕರಣಕ್ಕೆ ಹೊಸ ಟ್ವಿಸ್ಟ್ ನೀಡಿದೆ.

## 50 ವಿಕಲಚೇತನ ಮಕ್ಕಳಿಗೆ ವೀಲ್‌ಚೇರ್ ವಿತರಣೆ



**ಬೆಂಗಳೂರು, ಅ.27:** ವಿಕಲಚೇತನ ಮಕ್ಕಳಿಗೆ ನೆರವು ನೀಡುವ ಹಾಗೂ ಅವರಲ್ಲಿ ಆತ್ಮವಿಶ್ವಾಸ ತುಂಬುವ ಉದ್ದೇಶದಿಂದ ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್‌ನಿಂದ 50 ವಿಶೇಷಚೇತನ ಮಕ್ಕಳಿಗೆ ಉಚಿತ ವೀಲ್‌ಚೇರ್ ವಿತರಿಸುವ ಸಮಾಜಮುಖಿ ಕಾರ್ಯಕ್ರಮವನ್ನು ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್‌ನ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಅಸೋಸಿಯೇಷನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಹಾಗೂ ಉಪಾಧ್ಯಕ್ಷ ಫಾರೂಕ್ ಅಹಮದ್ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶೇಷಚೇತನ ಮಕ್ಕಳಿಗೆ ವೀಲ್ ಚೇರ್‌ಗಳನ್ನು ವಿತರಿಸಿ ಮಾನವೀಯ ಕಾಳಜಿ ಮೆರೆಯಲಾಯಿತು.

ವಿಶೇಷಚೇತನ ಮಕ್ಕಳಿಗೆ ಅಗತ್ಯ ಸಾಧನಗಳನ್ನು ಒದಗಿಸುವ ಮೂಲಕ ಅವರ ದೈನಂದಿನ ಜೀವನವನ್ನು ಸುಗಮಗೊಳಿಸುವುದು ಹಾಗೂ ಸಮಾಜದಲ್ಲಿ ಸಮಾನ ಅವಕಾಶ ಗಳನ್ನು ಕಲ್ಪಿಸುವ ಧ್ಯೇಯದೊಂದಿಗೆ ಕಾರ್ಯಕ್ರಮ ಆಯೋಜಿಸಲಾಯಿತು.

ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ 4ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಆಯೋಜಿಸಲಾಗಿತ್ತು.

### ರಾಜೀನಾಮೆ ನೀಡಿ ಚುನಾವಣೆ ಎದುರಿಸಿ: ಸಿಎಂಗೆ ಬಿ.ಎಸ್. ಯಡಿಯೂರಪ್ಪ ಸವಾಲು

## ಪರಿಷತ್ ಚುನಾವಣೆಯ ಸೋಲು ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ಗಂಟೆ



**ಬೆಂಗಳೂರು, ಅ.28:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸ್ವಲ್ಪವಾದರೂ ಗೌರವ ಇದ್ದರೆ ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಮತ್ತೆ ಚುನಾವಣೆ ಎದುರಿಸಿ ಎಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಬಹಿರಂಗ ಸವಾಲು ಹಾಕಿದ್ದಾರೆ.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಎರಡು ಶಿಕ್ಷಕರು ಹಾಗೂ ಎರಡು ಪದವೀಧರ ಕ್ಷೇತ್ರಗಳ ಫಲಿತಾಂಶ ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ಗಂಟೆಯಾಗಿ ಪರಿಣಮಿಸಿದೆ. ಅಧಿಕಾರದಲ್ಲಿ ಮುಂದುವರೆಯುವ ನೈತಿಕತೆಯನ್ನು ಕಳೆದುಕೊಂಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರದಲ್ಲಿ ಮುಂದುವರಿಯುವ ನೈತಿಕತೆಯನ್ನು ಕಳೆದುಕೊಂಡಿದ್ದಾರೆ. ಅವರಿಗೆ ಗೌರವ ಇದ್ದರೆ ಒಂದು ಕ್ಷಣವೂ ಕೂಡ ತಡ ಮಾಡದೆ ತಮ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊಸ ಜನಾದೇಶ ಪಡೆಯಲಿ ಎಂದು ಸವಾಲು ಎಸೆದರು.

ಈ ಸರ್ಕಾರ ಮುಂದುವರಿಯಲು ನೈತಿಕ ಹಕ್ಕಿಲ್ಲ. ಮುಖ್ಯಮಂತ್ರಿ ಕೂಡಲೇ ರಾಜೀನಾಮೆ ನೀಡಿ ಅಧಿಕಾರದಿಂದ ಕೆಳಗಿಳಿಯಲಿ. ಜನರ ಬಳಿಗೆ ಹೋಗೋಣ, ಜನರ ತೀರ್ಪು ಏನೆಂಬುದನ್ನು ನೋಡೋಣ. ಆಡಳಿತಾರೂಢ ಕಾಂಗ್ರೆಸ್ ವಿರುದ್ಧ ಸ್ಪರ್ಧಿಸಿ ಎನ್‌ಡಿಎ ಅಭ್ಯರ್ಥಿಗಳು ಗೆಲುವು ಸಾಧಿಸಿರುವುದು, ಸರ್ಕಾರದ ವಿರುದ್ಧದ ಜನರ ಆಕ್ರೋಶಕ್ಕೆ ಸಾಕ್ಷಿಯಾಗಿದೆ. ಈ ಬಾರಿ ಮತದಾನ ಪ್ರಮಾಣ ಹೆಚ್ಚಿರುವುದು ಕಾಂಗ್ರೆಸ್ ವಿರೋಧಿ ಅಲೆಯನ್ನು ಪ್ರತಿಬಿಂಬಿಸುತ್ತದೆ ಎಂದು ಯಡಿಯೂರಪ್ಪ ಅಭಿಪ್ರಾಯಪಟ್ಟರು.

ಕೆ.ಎಂ.ಸುರೇಶ, ಸಂಕನೂರು, ಶಶಿಲ್ ಜಿ. ನಮೋಶಿ ಹಾಗೂ ಎ.ಪಿ. ರಂಗನಾಥ ಅವರು ಭಾರಿ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಶಿಕ್ಷಕರು, ಪದವೀಧರರು ಸೇರಿದಂತೆ ಪ್ರಜ್ಞಾವಂತ ಮತದಾರರು ತಮ ತೀರ್ಪು ನೀಡಿದ್ದಾರೆ. ಮುಂಬರುವ ವಿಧಾನಸಭೆ ಚುನಾವಣೆಗೆ ಈ ಫಲಿತಾಂಶ ದಿಕ್ಸೂಚಿಯಾಗಲಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಂಸದ ಗೋವಿಂದ ಕಾರಜೋಳ, ಶಾಸಕ ಗೋಪಾಲಯ್ಯ, ನೂತನ ವಿಧಾನ ಪರಿಷತ್ ಸದಸ್ಯರಾದ ಕೆ.ಎಂ. ಸುರೇಶ ಮತ್ತು ಎ.ಪಿ. ರಂಗನಾಥ, ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್ ಹಾಗೂ ಪ್ರಕೋಷ್ಠ ಸಂಚಾಲಕ ದತ್ತಾತ್ರಿ ಉಪಸ್ಥಿತರಿದ್ದರು.

**ಸರ್ಕಾರದ ಆರ್ಥಿಕ ಸ್ಥಿತಿಗೆ ಸಿಎಂ ಹೇಳಿಕೆ ಕನ್ನಡಿಯಂತಿದೆ**

ಕಬ್ಬು ಬೆಳೆಗಾರರ ಸಭೆಯಲ್ಲಿ ರೈತರಿಗೆ ಹಣ ಎಲ್ಲಿಂದ ತಂದು ಕೊಡಲಿ ಎಂದು ಮುಖ್ಯಮಂತ್ರಿ ಕೇಳಿರುವುದು ಸರ್ಕಾರದ ಆರ್ಥಿಕ ಸ್ಥಿತಿಯನ್ನು ತೋರಿಸುತ್ತದೆ. ಜನರು ಕಟ್ಟಿದ ತೆರಿಗೆ ಹಣ ಎಲ್ಲಿಗೆ ಹೋಗಿದೆ ಎಂಬುದಕ್ಕೆ ಮುಖ್ಯಮಂತ್ರಿ ಉತ್ತರಿಸಬೇಕು ಎಂದು ಯಡಿಯೂರಪ್ಪ ಆಗ್ರಹಿಸಿದರು.

## ಇವಿಎಂ-ಬ್ಯಾಲೆಟ್ ಪೇಪರ್‌ನಿಂದ ಕಾಂಗ್ರೆಸ್‌ಗೆ ಗೆಲುವು ಸಾಧ್ಯವಿಲ್ಲ: ಎನ್.ರವಿಕುಮಾರ್ ವ್ಯಂಗ್ಯ



**ಬೆಂಗಳೂರು, ಅ.28:** ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಇನ್ನು ಮುಂದೆ ಚುನಾವಣೆಗಳನ್ನು ತಾಳೆಗರಿ ಮೂಲಕ ನಡೆಸುವಂತೆ ಕಾಂಗ್ರೆಸ್ ಪಕ್ಷ ಬೇಡಿಕೆ ಇಡಲಿ ಎಂದು ವ್ಯಂಗ್ಯವಾಡಿದ್ದಾರೆ. ಇವಿಎಂ ಅಥವಾ ಬ್ಯಾಲೆಟ್ ಪೇಪರ್ ಯಾವುದರಿಂದಲೂ ಕಾಂಗ್ರೆಸ್‌ಗೆ ಗೆಲುವು ಸಾಧಿಸಲು ಸಾಧ್ಯವಾಗಿಲ್ಲ ಎಂದು ಟೀಕಿಸಿದರು.

ಇನ್ನು ಈ ಹಳೆಯ ಪಕ್ಷವು ತಾಳೆಗರಿಯ ಮೂಲಕ ಚುನಾವಣೆ ನಡೆಸುವಂತೆ ಬೇಡಿಕೆ ಇಡಲಿ. ಒಮ್ಮೆ ಅದನ್ನೂ ಪ್ರಯತ್ನಿಸಲಿ. ಬಹುಶಃ ಆಗ ಅಲ್ಲೊಂದು ಇಲ್ಲೊಂದು ಸ್ಥಾನವಾದರೂ ಸಿಗಬಹುದು ಎಂದು ರವಿ ಕುಮಾರ್ ವ್ಯಂಗ್ಯವಾಗಿ ಹೇಳಿದರು.

ಇದೇ ವೇಳೆ ಗಂಭೀರವಾಗಿ ಮಾತನಾಡಿದ ಅವರು, ಜನರ ವಿಶ್ವಾಸ ಮತ್ತು ನಂಬಿಕೆಯನ್ನು ಗಳಿಸುವವರೆಗೆ ಕಾಂಗ್ರೆಸ್ ಪಕ್ಷಕ್ಕೆ ಇವಿಎಂ ಆಗಲಿ, ಬ್ಯಾಲೆಟ್ ಪೇಪರ್ ಆಗಲಿ ಗೆಲುವು ತಂದುಕೊಡಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು.

ಸರ್ಕಾರದಲ್ಲಿದ್ದಾಗಲೂ, ವಿರೋಧ ಪಕ್ಷದಲ್ಲಿದ್ದಾಗಲೂ ಕಳಪೆ ಕಾರ್ಯನಿರ್ವಹಣೆ, ಆಕ್ಷೇಪಾರ್ಹ ನಡೆ ಮತ್ತು ಖಂಡನೀಯ ವರ್ತನೆಯಿಂದ ಕಾಂಗ್ರೆಸ್ ಜನರೊಂದಿಗಿನ ಸಂಪರ್ಕವನ್ನು ಕಳೆದುಕೊಂಡಿದೆ ಎಂದು ರವಿಕುಮಾರ್ ಟೀಕಿಸಿದರು.

## ಸೌಜನ್ಯಾ ಕೊಲೆ ಪ್ರಕರಣ: ಸಿಎಂಗೆ ತನಿಖೆ ಪ್ರಗತಿಯ ಮಾಹಿತಿ ನೀಡಿದ ಎಸ್‌ಐಟಿ ಮುಖ್ಯಸ್ಥ ಶಶಿಕುಮಾರ್



**ಬೆಂಗಳೂರು, ಅ.28:** ರಾಜ್ಯದಲ್ಲಿ ತೀವ್ರ ಕುತೂಹಲ ಮೂಡಿಸಿರುವ ಸೌಜನ್ಯಾ ಕೊಲೆ ಪ್ರಕರಣದ ಮರು ತನಿಖೆಗೆ ಸಂಬಂಧಿಸಿದಂತೆ, ವಿಶೇಷ ತನಿಖಾ ಮುಖ್ಯಸ್ಥ ಶಶಿಕುಮಾರ್ ಅವರು ಬುಧವಾರ ಬೆಂಗಳೂರಿನ ಸದಾಶಿವನಗರದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿವಾಸದಲ್ಲಿ ಭೇಟಿಯಾಗಿ ಮಹತ್ವದ ಸಮಾಲೋಚನೆ ನಡೆಸಿದ್ದಾರೆ.

ಈ ವೇಳೆ, ಪ್ರಕರಣದ ತನಿಖೆಯನ್ನು ನಡೆಸುತ್ತಿರುವ ಶಶಿಕುಮಾರ್ ನೇತೃತ್ವದ ತಂಡವು ಇದುವರೆಗೆ ನಡೆಸಿರುವ ತನಿಖೆಯ ಪ್ರಗತಿ ಮತ್ತು ಮುಂದಿನ ಹಂತದ ಕುರಿತು ಸಂಪೂರ್ಣ ಮಾಹಿತಿಯನ್ನು ಮುಖ್ಯಮಂತ್ರಿಗಳಿಗೆ ಒದಗಿಸಿದೆ. ತನಿಖೆಯನ್ನು ತೀವ್ರಗೊಳಿಸಿರುವ ಎಸ್‌ಐಟಿ ತಂಡವು ಪ್ರಕರಣದ ವಿಭಿನ್ನ ಆಯಾಮಗಳಲ್ಲಿ ವಿಚಾರಣೆ ನಡೆಸುತ್ತಿದ್ದು, ಈಗಾಗಲೇ ಹಲವರಿಗೆ ನೋಟಿಸ್ ನೀಡಿದೆ.

ಈ ಹಿಂದೆ ಸೌಜನ್ಯಾ ಕೊಲೆ ಪ್ರಕರಣದ ಆರಂಭಿಕ ತನಿಖೆ ನಡೆಸಿದ್ದ ಪೊಲೀಸರು ಹಾಗೂ ಮರಣೋತ್ತರ ಪರೀಕ್ಷೆ ನಡೆಸಿದ ವೈದ್ಯಕೀಯ ಸಿಬ್ಬಂದಿಗೂ ನೋಟಿಸ್ ಜಾರಿಗೊಳಿಸಲಾಗಿದೆ. ಅಕ್ಟೋಬರ್ 30ರಂದು ವಿಚಾರಣೆಗೆ ಕಡ್ಡಾಯವಾಗಿ ಹಾಜರಾಗುವಂತೆ ಸೂಚನೆ ನೀಡಲಾಗಿದ್ದು, ಈ ಎಲ್ಲಾ ತನಿಖಾ ಪ್ರಕ್ರಿಯೆಗಳ ಪ್ರಮುಖ ವಿವರಗಳನ್ನು ಎಸ್‌ಐಟಿ ಮುಖ್ಯಸ್ಥರು ಮುಖ್ಯಮಂತ್ರಿಗಳಿಗೆ ವಿವರಿಸಿದ್ದಾರೆ.

### ತ್ಯಾಜ್ಯ ವಿಲೇವಾರಿಯಲ್ಲಿ ಪಾರದರ್ಶಕತೆ, ಸಮರ್ಥ ನಿರ್ವಹಣೆ ಗುರಿ

## ಬೆಂಗಳೂರಿನ 27 ವಿಧಾನಸಭೆ ಕ್ಷೇತ್ರಗಳನ್ನು 33 ಭಾಗವಾಗಿ ವಿಂಗಡಿಸಿ ನೂತನ ಟೆಂಡರ್: ಸಚಿವ ಕೃಷ್ಣಬೈರೇಗೌಡ



**ಬೆಂಗಳೂರು, ಅ.28:** ನಗರದಾದ್ಯಂತ ತ್ಯಾಜ್ಯ ವಿಲೇವಾರಿಯನ್ನು ಅತ್ಯಂತ ಪಾರದರ್ಶಕ ಮತ್ತು ಸಮರ್ಥವಾಗಿ ನಿರ್ವಹಿಸುವ ಉದ್ದೇಶದಿಂದ ಒಟ್ಟು 27 ವಿಧಾನಸಭಾ ಕ್ಷೇತ್ರಗಳನ್ನು 33 ಪ್ಯಾಕೇಜ್‌ಗಳನ್ನಾಗಿ ವಿಭಾಗಿಸಿ ನೂತನ ಟೆಂಡರ್ ಪ್ರಕ್ರಿಯೆಯನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ ಅವರು, ನಗರದ ತ್ಯಾಜ್ಯ ನಿರ್ವಹಣೆ ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಅತ್ಯಂತ ವೈಜ್ಞಾನಿಕ ಹಾಗೂ ಸುಸಜ್ಜಿತ ರೀತಿಯಲ್ಲಿ ಸುಧಾರಿಸಲು ಬಿಬಿಎಂಪಿ ಮತ್ತು ಸರ್ಕಾರವು ಪ್ರಮುಖ ಹಾಗೂ ಕ್ರಾಂತಿಕಾರಿ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಹೊಸ ಯೋಜನೆಗಳನ್ನು ಜಾರಿಗೆ ತಂದಿದೆ. ಈ ಹೊಸ ಯೋಜನೆಯಡಿ ಈಗಾಗಲೇ 5 ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರತಿ ಕ್ಷೇತ್ರಕ್ಕೆ ಒಂದರಂತೆ 5 ಪ್ಯಾಕೇಜ್‌ಗಳಿಗೆ ಟೆಂಡರ್ ಕಾರ್ಯಾದೇಶಗಳನ್ನು ಜಾರಿಗೊಳಿಸಲಾಗಿದೆ. ಈ ನೂತನ ಟೆಂಡರ್ ನಿಯಮಾವಳಿ ಪ್ರಕಾರ, ಪ್ರತಿ ಯೊಂದು ಪ್ಯಾಕೇಜ್‌ನ ಕಾರ್ಯ ನಿರ್ವಹಣೆಗೆ ಗುತ್ತಿಗೆದಾರರು ಸುಮಾರು 10 ಕೋಟಿ ರೂ. ಬಂಡವಾಳವನ್ನು ತೊಡಗಿಸಬೇಕಾಗುತ್ತದೆ. ಸಂಪೂರ್ಣ ವ್ಯವಸ್ಥೆಯನ್ನು ಸಂಘಟಿಸಿ ಕೆಲಸ ಆರಂಭಿಸಲು ಗುತ್ತಿಗೆದಾರರು 1.5ರಿಂದ 2 ತಿಂಗಳ ಕಾಲಾವಕಾಶವನ್ನು ಕೋರಿದ್ದು, ಅದಕ್ಕೆ ಸಮ್ಮತಿಸಲಾಗಿದೆ ಎಂದು ಹೇಳಿದರು.

33 ಪ್ಯಾಕೇಜ್‌ಗಳ ಪೈಕಿ 5 ಪ್ಯಾಕೇಜ್‌ಗಳಿಗೆ ಈಗಾಗಲೇ ಅನುಮತಿ ನೀಡಲಾಗಿದ್ದು, ನವೆಂಬರ್ ತಿಂಗಳಲ್ಲಿ ಕಾರ್ಯಾರಂಭವಾಗಲಿದೆ. 3 ಪ್ಯಾಕೇಜ್‌ಗಳಿಗೆ ಒಪ್ಪಿಗೆ ಪತ್ರ ನೀಡಲಾಗಿದ್ದು, 10 ಪ್ಯಾಕೇಜ್‌ಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಸರ್ಕಾರದ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಕೆಯಾಗಿವೆ. ಸರ್ಕಾರದಿಂದ ಅನುಮೋದನೆ ಸಿಕ್ಕ ತಕ್ಷಣವೇ ಮುಂದಿನ 10ರಿಂದ 15 ದಿನಗಳ ಒಳಗಾಗಿ ಆ ಗುತ್ತಿಗೆದಾರರಿಗೂ ಕಾರ್ಯಾದೇಶವನ್ನು ನೀಡಲಾಗುವುದು. ಇನ್ನು 10 ಪ್ಯಾಕೇಜ್‌ಗಳು ಬಿಡ್ಡಿಂಗ್ ಹಂತದಲ್ಲಿದ್ದು, ಅ.30ರಂದು 1 ಪ್ಯಾಕೇಜ್,ನ.1 ರಂದು 1 ಪ್ಯಾಕೇಜ್ ಬಿಡ್ಡಿಂಗ್ ಮಾಡಲಾಗುತ್ತಿದೆ. ನ್ಯಾಯಾಲಯದ ಹಂತದಲ್ಲಿರುವ ಇನ್ನುಳಿದ 3 ಪ್ಯಾಕೇಜ್‌ಗಳಿಗೆ ಕೋರ್ಟ್ ನಿಂದ ಗ್ರೀನ್‌ಸಿಗ್ನಲ್ ದೊರೆತ ತಕ್ಷಣವೇ ಅವುಗಳಿಗೂ ಟೆಂಡರ್ ಕರೆಯಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

**ಆಟೋ ಟಿಪ್ಪರ್ ಬದಲು ದೊಡ್ಡ ವಾಹನ ಬಳಕೆ**

ಪ್ರಸ್ತುತ ಚಾಲ್ತಿಯಲ್ಲಿರುವ 500 ಕೆಜಿ ಸಾಮರ್ಥ್ಯದ ಸಣ್ಣ ಆಟೋ ಟಿಪ್ಪರ್‌ಗಳ ಸಂಖ್ಯೆಯನ್ನು ಹಂತ ಹಂತವಾಗಿ ಕಡಿಮೆ ಮಾಡಿ, 3ರಿಂದ 5 ಟನ್ ಸಂಗ್ರಹಣಾ ಸಾಮರ್ಥ್ಯವಿರುವ 4 ಚಕ್ರದ ದೊಡ್ಡ ವಾಹನಗಳ ಬಳಕೆಯನ್ನು ಹೆಚ್ಚಿಸಲಾಗುತ್ತಿದೆ. ಅತ್ಯಂತ ಕಿರಿದಾದ ರಸ್ತೆಗಳು ಮತ್ತು ಸಂದಿಗಳಲ್ಲಿ ಮಾತ್ರವೇ 3 ಚಕ್ರದ ವಾಹನಗಳನ್ನು ಬಳಸಲಾಗುತ್ತದೆ. ಇದರಿಂದಾಗಿ ಪ್ರಸ್ತುತ ಪ್ರತಿದಿನ ಇರುವ 5,200 ಟನ್ ತ್ಯಾಜ್ಯ ಸಂಗ್ರಹಣಾ ಸಾಮರ್ಥ್ಯವನ್ನು 9,000 ಟನ್‌ಗೆ ಹೆಚ್ಚಿಸಲು ಸಾಧ್ಯವಾಗಲಿದೆ. ಇದರ ಜೊತೆಗೆ, ಸಿಬ್ಬಂದಿ ಮತ್ತು ವಾಹನಗಳ ಸಮರ್ಪಕ ನಿರ್ವಹಣೆಗಾಗಿ ಜಿಪಿಎಸ್ ಆಧಾರಿತ ಮುಖಚಹರೆ ಹಾಜರಾತಿ ವ್ಯವಸ್ಥೆಯನ್ನು ಕಡ್ಡಾಯಗೊಳಿಸಲಾಗಿದ್ದು, ಇದರಿಂದ ಕೆಲಸದಲ್ಲಿ ಪಾರದರ್ಶಕತೆ ಮತ್ತು ನಿಖರತೆ ಬರಲಿದೆ ಎಂದು ಕೃಷ್ಣಬೈರೇಗೌಡ ಮಾಹಿತಿ ನೀಡಿದರು.

**ಆರೋಪಗಳಲ್ಲಿ ಸತ್ಯಾಂಶವಿಲ್ಲ**

ಪ್ರಸ್ತುತ ಈ ಹೊಸ ಟೆಂಡರ್ ಪ್ರಕ್ರಿಯೆಯ ಬಗ್ಗೆ ಕೇಳಿಬರುತ್ತಿರುವ ಆರೋಪಗಳ ಕುರಿತು ಸ್ಪಷ್ಟನೆ ನೀಡಿದ ಸಚಿವರು, ಪ್ರಸ್ತುತ ನಗರದ ತ್ಯಾಜ್ಯ ನಿರ್ವಹಣೆಗೆ ವಾರ್ಷಿಕವಾಗಿ 597 ಕೋಟಿ ವೆಚ್ಚವಾಗುತ್ತಿದ್ದು, ಅತ್ಯಾಧುನಿಕ ತಂತ್ರಜ್ಞಾನ ಮತ್ತು ಹೊಸ ವಾಹನಗಳನ್ನು ಒಳಗೊಂಡ ನೂತನ ಟೆಂಡರ್ ಜಾರಿಯಿಂದ ಈ ವೆಚ್ಚ ಸುಮಾರು 620 ಕೋಟಿಗೆ ತಲುಪಬಹುದು ಎಂದು ಅಂದಾಜಿಸಲಾಗಿದೆ. ಪ್ರಸ್ತುತ ನೂತನ ಟೆಂಡರ್‌ನಲ್ಲಿ ನಿಯಮಾವಳಿಗಳ ಪ್ರಕಾರ ಶೇ. 5ರಿಂದ 6ರಷ್ಟು ಎಸ್ಟಿಮೇಟ್ ಹಾಕಿಕೊಂಡಿರುವ ಅರ್ಹ ಗುತ್ತಿಗೆದಾರರಿಗೆ ಪಾರದರ್ಶಕವಾಗಿ ಟೆಂಡರ್ ಸಿಕ್ಕಿದೆ. ತಮಗೆ ಟೆಂಡರ್ ಸಿಗಲಿಲ್ಲ ಎಂಬ ಒಂದೇ ನಿರಾಶೆ ಅಥವಾ ಅಸಮಾಧಾನದಿಂದ ಕೆಲವರು ಆಧಾರರಹಿತ ಆರೋಪ ಮಾಡುತ್ತಿದ್ದಾರೆ. ಈ ಯಾವುದೇ ಆರೋಪಗಳಲ್ಲಿ ಸತ್ಯಾಂಶವಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

## ಹಂಪಿ ಸಂರಕ್ಷಣೆಗೆ ಯುನೆಸ್ಕೋ ತಜ್ಞರ ಮೆಚ್ಚುಗೆ; ಡಿಸೆಂಬರ್ ಮಧ್ಯಭಾಗದಲ್ಲಿ ಅಂತಿಮ ವರದಿ ನಿರೀಕ್ಷೆ



**ಬೆಂಗಳೂರು, ಅ.28:** ಯುನೆಸ್ಕೋ ವಿಶ್ವ ಪರಂಪರೆ ತಾಣವಾದ ಹಂಪಿಯಲ್ಲಿ ಪರಿಶೀಲನೆ ನಡೆಸಿದ ತಜ್ಞರ ತಂಡ, ಸ್ಮಾರಕಗಳ ಒಟ್ಟಾರೆ ಸಂರಕ್ಷಣಾ ಸ್ಥಿತಿ ಹಾಗೂ ರಾಜ್ಯ ಸರ್ಕಾರ, ಭಾರತೀಯ ಪುರಾತತ್ವ ಸಮೀಕ್ಷೆ (ಎಎಸ್‌ಐ) ಮತ್ತು ಇತರೆ ಸಂಸ್ಥೆಗಳ ನಡುವಿನ ಸಮನ್ವಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದೆ. ತಂಡದ ಅಂತಿಮ ಮಿಷನ್ ವರದಿ ಡಿಸೆಂಬರ್ ಮಧ್ಯಭಾಗದಲ್ಲಿ ಸಲ್ಲಿಸಲಿದೆ.

**ಸ್ಥಳೀಯರ ಭಾಗವಹಿಸುವಿಕೆ ಇಲ್ಲದೆ ಸುಸ್ಥಿರ ಪರಂಪರೆ ಸಂರಕ್ಷಣೆ ಸಾಧ್ಯವಿಲ್ಲ**



ಕೆನ್ಯಾದ ಯುನೆಸ್ಕೋ ತಜ್ಞ ಪ್ರೊ. ಜಾರ್ಜ್ ಅಬುಂಗು ಹಂಪಿಯನ್ನು ಜಾಗತಿಕ ಮಹತ್ವದ ಅಪೂರ್ವ ಪರಂಪರೆ ತಾಣವೆಂದು ಬಣ್ಣಿಸಿ, ಸ್ಮಾರಕಗಳ ಸ್ಥಿತಿ ಮತ್ತು ನಡೆಯುತ್ತಿರುವ ಸಂರಕ್ಷಣಾ ಕಾರ್ಯಗಳ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ತಾವು ತನಿಖಾಧಿಕಾರಿಗಳಾಗಿ ಅಲ್ಲ, ಸ್ನೇಹಿತರು ಮತ್ತು ಸ್ಮಾರಕದ ಅಭಿವೃದ್ಧಿಯ ಪಾಲುದಾರರು ಆಗಿ ಭೇಟಿ ಮಾಡಿದ್ದೇವೆ. ಹಂಪಿಯ ಭವಿಷ್ಯ ನಿರ್ವಹಣೆಯಲ್ಲಿ ಸ್ಥಳೀಯ ಸಮುದಾಯವೇ ಕೇಂದ್ರದಲ್ಲಿರಬೇಕು ಎಂದು ಒತ್ತಿ ಹೇಳಿದರು. ನನ್ನನ್ನು ಹೊರತುಪಡಿಸಿ ನನಗಾಗಿ ಏನನ್ನಾದರೂ ಮಾಡಿದರೆ, ಅದು ನನ್ನ ವಿರುದ್ಧ ಮಾಡಿದಂತೆಯೇ, ಸ್ಥಳೀಯರ ಭಾಗವಹಿಸುವಿಕೆ ಇಲ್ಲದೆ ಸುಸ್ಥಿರ ಪರಂಪರೆ ಸಂರಕ್ಷಣೆ ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು. ಜಪಾನ್‌ನ ಯುನೆಸ್ಕೋ ತಜ್ಞ ಪ್ರೊ. ಇಚಿತಾ ಶಿಮೋಡಾ ಹಂಪಿಯನ್ನು ಕೇವಲ ಸ್ಮಾರಕಗಳ ಸಮೂಹವಾಗಿ ಅಲ್ಲ, ಜೀವಂತ ಸಾಂಸ್ಕೃತಿಕ ವಿಶ್ವ ಪ್ರವಾಸಿ ತಾಣವಾಗಿ ನೋಡಬೇಕು. ಪರಂಪರೆ ಸಂರಕ್ಷಣೆ, ಪ್ರವಾಸೋದ್ಯಮ ಮತ್ತು ಸ್ಥಳೀಯರ ದೈನಂದಿನ ಬದುಕಿನ ನಡುವೆ ಸಮತೋಲನ ಕಾಯ್ದುಕೊಳ್ಳುವುದು ಮುಖ್ಯ ಎಂದು ಹೇಳಿದರು.

ಕ್ಷೇತ್ರ ಪರಿಶೀಲನೆಯ ಬಳಿಕ ಬುಧವಾರ ಬೆಂಗಳೂರಿನ ವಿಧಾನ ಸೌಧದಲ್ಲಿ ನಡೆದ ಸಮಾರೋಪ ಸಭೆಯಲ್ಲಿ ಯುನೆಸ್ಕೋ ತಜ್ಞರು ತಮ್ಮ ಪ್ರಾಥಮಿಕ ಅಭಿಪ್ರಾಯಗಳನ್ನು ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳೊಂದಿಗೆ ಹಂಚಿಕೊಂಡರು.

ಹಂಪಿಯ ಸಂರಕ್ಷಣಾ ಕ್ರಮಗಳನ್ನು ಶ್ಲಾಘಿಸಿದ ತಂಡ, ಪ್ರಾಥಮಿಕವಾಗಿ ಸ್ಥಳೀಯ ಸಮುದಾಯದ ಹೆಚ್ಚಿನ ಭಾಗವಹಿಸುವಿಕೆ, HWHAMAಗೆ ತಜ್ಞ ಮಾನವ ಸಂಪನ್ಮೂಲ ಮತ್ತು ಹಣಕಾಸಿನ ಬಲ, ಪರಂಪರೆ ನಿರ್ವಹಣೆಯಲ್ಲಿ ಆಡಳಿತಾತ್ಮಕ ನಿರಂತರತೆ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಹೆರಿಟೇಜ್ ಇಂಪ್ಯಾಕ್ಟ್ ಅಸೆಸ್ಮೆಂಟ್ ಅಗತ್ಯವಿದೆ ಎಂದು ಸೂಚಿಸಿದೆ.

**ಹಂಪಿ ರಕ್ಷಣೆ ವಿಚಾರದಲ್ಲಿ ಯಾವುದೇ ರಾಜಿಯಿಲ್ಲ: ಉಮಾ ಮಹದೇವನ್**

ಹಂಪಿಯ ಮೌಲ್ಯಅಭಿವೃದ್ಧಿ ಆಯುಕ್ತೆ ಹಾಗೂ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಉಮಾ ಮಹಾದೇವನ್ ಮಾತನಾಡಿ, ಹಂಪಿಯ ಉತ್ಕೃಷ್ಟ ಜಾಗತಿಕ ಮೌಲ್ಯವನ್ನು ಯಾವುದೇ ರಾಜಿಯಿಲ್ಲದೆ ಕಾಪಾಡುವುದು ಸರ್ಕಾರದ ಬದ್ಧತೆ. ಸಂರಕ್ಷಣೆಯ ಜೊತೆಗೆ ಸ್ಥಳೀಯ ಸಮುದಾಯದ ಪಾಲ್ಗೊಳ್ಳುವಿಕೆ, ತಜ್ಞರ ಮಾರ್ಗದರ್ಶನ ಮತ್ತು ಬಲವಾದ ಸಾಂಸ್ಥಿಕ ವ್ಯವಸ್ಥೆ ಅಗತ್ಯ, ಎಂದರು.



ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅವರ ಮಾರ್ಗದರ್ಶನದಲ್ಲಿ ಹಂಪಿಯ ಪ್ರವಾಸೋದ್ಯಮ ಅಭಿವೃದ್ಧಿ ಪರಂಪರೆ ಅಥವಾ ಸ್ಥಳೀಯರ ಜೀವನೋಪಾಯಕ್ಕೆ ತೊಂದರೆ ಆಗಬಾರದು ಎಂಬುದು ಸರ್ಕಾರದ ನಿಲುವಾಗಿದೆ. ಮುಂದಿನ ಪ್ರವಾಸೋದ್ಯಮ ಮತ್ತು ಅಭಿವೃದ್ಧಿ ಯೋಜನೆಗಳಲ್ಲಿ ಹೆರಿಟೇಜ್ ಇಂಪ್ಯಾಕ್ಟ್ ಅಸೆಸ್‌ಮೆಂಟ್ ಅವಿಭಾಜ್ಯ ಅಂಗವಾಗಲಿದೆ.

– ಡಾ. ರಾಮ್ ಪ್ರಸಾತ್ ಮನೋಹರ್, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ

# ಅಂತಿಮ ಮತದಾರರ ಪಟ್ಟಿ ಪ್ರಕಟ: ಜಿಲ್ಲೆಯಲ್ಲಿ 12,46,755 ಮತದಾರರು: ಡಿಸಿ ಶಿಲ್ಪಾ ಶರ್ಮಾ



**ಬೀದರ್, ಅ.28–** ಭಾರತ ಚುನಾವಣಾ ಆಯೋಗ ಹಾಗೂ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ ನಿರ್ದೇಶನದಂತೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್)–2026ರ ಅಂಗವಾಗಿ ಬೀದರ್ ಜಿಲ್ಲೆಯ ಅಂತಿಮ ಮತದಾರರ ಪಟ್ಟಿಯನ್ನು ಅ.27ರಂದು ಅಧಿಕೃತವಾಗಿ ಪ್ರಕಟಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 12,46,755 ಮತದಾರರಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲ ಮತಗಟ್ಟೆ ಕೇಂದ್ರಗಳು, ತಹಸೀಲ್ದಾರ್ ಕಚೇರಿಗಳು, ಸಹಾಯಕ ಆಯುಕ್ತರ ಕಚೇರಿಗಳು ಹಾಗೂ ಜಿಲ್ಲಾಧಿಕಾರಿ ಕಚೇರಿಯ ಸೂಚನಾ ಫಲಕಗಳಲ್ಲಿ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲೆಯ ಅಧಿಕೃತ ವೆಬ್‌ಸೈಟ್‌ನಲ್ಲಿಯೂ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳ ಅಂತಿಮ ಮತದಾರರ ಪಟ್ಟಿಯ ತಲಾ ಒಂದು ಪ್ರತಿಯನ್ನು ಅನುಮೋದಿತ ರಾಜಕೀಯ ಪಕ್ಷಗಳಿಗೂ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಪ್ರಕಟಿತ ಅಂತಿಮ ಮತದಾರರ ಪಟ್ಟಿಯ ಪ್ರಕಾರ, ಜಿಲ್ಲೆಯಲ್ಲಿ 6,44,400 ಪುರುಷರು, 6,02,328 ಮಹಿಳೆಯರು ಹಾಗೂ 39 ತೃತೀಯ ಲಿಂಗಿಗಳು ಸೇರಿದಂತೆ ಒಟ್ಟು 12,46,755 ಮತದಾರರಿದ್ದಾರೆ.

ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,28,856 ಮತದಾರರಿದ್ದು, ಇವರಲ್ಲಿ 1,19,134 ಪುರುಷರು, 1,09,716 ಮಹಿಳೆಯರು ಹಾಗೂ 6 ತೃತೀಯ ಲಿಂಗಿಗಳಿದ್ದಾರೆ. ಹುಮನಾಬಾದ್ ಕ್ಷೇತ್ರದಲ್ಲಿ ಒಟ್ಟು 2,26,047 ಮತದಾರರಿದ್ದು, 1,16,388 ಪುರುಷರು, 1,09,651 ಮಹಿಳೆಯರು ಹಾಗೂ 8 ತೃತೀಯ ಲಿಂಗಿಗಳಿದ್ದಾರೆ. ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಒಟ್ಟು 1,86,514 ಮತದಾರರಿದ್ದು, 96,029 ಪುರುಷರು, 90,483 ಮಹಿಳೆಯರು ಹಾಗೂ 2 ತೃತೀಯ ಲಿಂಗಿಗಳಿದ್ದಾರೆ.

ಬೀದರ್ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 1,88,647 ಮತದಾರರಿದ್ದು, 95,579 ಪುರುಷರು, 93,056 ಮಹಿಳೆಯರು ಹಾಗೂ 12 ತೃತೀಯ ಲಿಂಗಿಗಳಿದ್ದಾರೆ.

ಭಾಲ್ಕಿ ಕ್ಷೇತ್ರದಲ್ಲಿ ಒಟ್ಟು 2,15,422 ಮತದಾರರಿದ್ದು, 1,11,888 ಪುರುಷರು, 1,03,531 ಮಹಿಳೆಯರು ಹಾಗೂ 3 ತೃತೀಯ ಲಿಂಗಿಗಳಿದ್ದಾರೆ. ಔರಾದ್ ಕ್ಷೇತ್ರದಲ್ಲಿ ಒಟ್ಟು 2,01,260 ಮತದಾರರಿದ್ದು, 1,05,376 ಪುರುಷರು ಹಾಗೂ 95,884 ಮಹಿಳಾ ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

### ಬೇಡ್ತಿ ವರದಾ ಯೋಜನೆ ಜಾರಿಗೆ ಹೋರಾಟ ಮಾಡಲು ನಾವು ಸಿದ್ಧ:

# ಬೇಡ್ತಿ ವರದಾ ನದಿ ಜೋಡಣೆ ಡಿಪಿಆರ್ ಮಾಡಿ ಯೋಜನೆ ಕಾರ್ಯಗತಗೊಳಿಸಲಿ: ಬಸವರಾಜ ಬೊಮ್ಮಾಯಿ

**ಹಾವೇರಿ, ಅ.28–** ಬೆಡ್ತಿ ವರದಾ ನದಿ ಜೋಡಣೆ ಹಾಗೂ ಕುರಿತು ಚರ್ಚಿಸಲು ಸಮಯ ಕೋರಿ ಮುಖ್ಯಮಂತ್ರಿಗಳಿಗೆ ಪತ್ರ ಬರೆಯಲಾಗಿದೆ. ಆದರೆ ಈವರೆಗೆ ಸರ್ಕಾರದಿಂದ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಸಿಎಂ ಡಿ.ಕೆ. ಶಿವಕುಮಾರ ಅವರಿಗೆ ಡಿಪಿಆರ್ ಮಾಡಿ ಯೋಜನೆ ಕಾರ್ಯಗತ ಮಾಡಲು ಅವಕಾಶವಿದ್ದು ಅದು ಆಗದಿದ್ದರೆ ಹೋರಾಟ ಮಾಡಲು ನಾವು ಸಿದ್ದ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಎಚ್ಚರಿಕೆ ನೀಡಿದ್ದಾರೆ.

ಹಾವೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಡ್ತಿ ವರದಾ ನದಿ ಜೋಡಣೆಗೆ ಸಂಬಂಧಿಸಿದಂತೆ ಕೆಲವರು ಎನ್ವಿರಾನ್ಮೆಂಟ್ ಮತ್ತು ಇಕಾಲಜಿ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದು, ಅದಕ್ಕೆ ಸೀಮಿತವಾಗಿ ಉತ್ತರ ನೀಡಲಾಗಿದೆ. ಈ ಭಾಗದ ಜನರ ಬೇಡಿಕೆಗಳು, ಪರಿಸರ ಅಧ್ಯಯನ ಮತ್ತು ಬರ ಮುಂತಾದ ಎಲ್ಲಾ ಅಂಶಗಳನ್ನು ಅಧ್ಯಯನ ಮಾಡಿ ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದರು.

**ರಾಷ್ಟ್ರೀಯ ದೃಷ್ಟಿಕೋನ ಯೋಜನೆ:** ಸಂಸದ ವಿಶ್ವೇಶ್ವರ ಹೆಗ್ಗಡೆ ಅವರಿಗೆ ಕೇಂದ್ರ ಜಲ ಶಕ್ತಿ ಸಚಿವ ಸಿ.ಆರ್ ಪಾಟೀಲ್ ರು ಪತ್ರ ಬರೆದಿದ್ದು. ಪರಿಸರ ಹಾನಿ ಬಗ್ಗೆ ಅದರಲ್ಲಿ ಕೆಲವೊಂದಿಷ್ಟು ಪ್ರಶ್ನೆಗಳನ್ನ ಎತ್ತಿದ್ದಾರೆ. ಇದು ಇವತ್ತಿನ ಹೊಸ ಯೋಜನೆಯಲ್ಲ, 1980ರಲ್ಲೇ ನದಿ ಜೋಡಣೆಯ ಮೊದಲ ನ್ಯಾಷನಲ್ ಪರ್ಸ್ಪೆಕ್ಟಿವ್ ಪ್ಲಾನ್ ಮಾಡಲಾಗಿತ್ತು. ಇದರಲ್ಲಿ ಹಿಮಾಲಯನ್ ನದಿ ಬೆಸಿನ್ ಹಾಗೂ ಪೆನಿನ್ಸುಲರ್ ನದಿ ಬೆಸಿನ್ ಎಂದು ಎರಡು ವಿಭಾಗಗಳನ್ನು ಮಾಡಲಾಗಿದ್ದು, ಪೆನಿನ್ಸುಲರ್ ನದಿಗಳಲ್ಲಿ ಗೋದಾವರಿ, ಮಹಾನದಿ, ಕೃಷ್ಣಾ ಮತ್ತು ಕಾವೇರಿ ನದಿಗಳ ಜೋಡಣೆ ಬರುತ್ತದೆ. ಈ ನದಿ ಜೋಡಣೆಯ ಫೇಸ್–1 ಹಂತದಲ್ಲೇ ವರದಾ ಬೆಡ್ತಿ ಜೋಡಣೆ ಬರುತ್ತದೆ ಎಂದು ಬಸವರಾಜ ಬೊಮ್ಮಾಯಿ ಸ್ಪಷ್ಟಪಡಿಸಿದ್ದಾರೆ.



**ಡಿಪಿಆರ್ ಸಿದ್ಧಪಡಿಸುವಲ್ಲಿ ವಿಳಂಬ:** ಈ ಯೋಜನೆಯ ಕಾರ್ಯ ಸಾಧ್ಯತೆ ವರದಿಯನ್ನು ಸಿಡಬ್ಲ್ಯುಸಿ ಒಪ್ಪಿಕೊಂಡಿದ್ದು, ನಂತರ ಆಗಸ್ಟ್ 12, 2025ರಂದು ಎಂಒಯು ಮಾಡಿಕೊಳ್ಳಲಾಗಿದೆ. ಅಂದಿನ ಮುಖ್ಯಮಂತ್ರಿಗಳು ಹಾಗೂ ಡಿಸಿಎಂ ಮತ್ತು ನೀರಾವರಿ ಸಚಿವರಾಗಿದ ಡಿ.ಕೆ ಶಿವಕುಮಾರ ನೇತೃತ್ವದಲ್ಲಿ, ಮ್ಯಾನೇಜಿಂಗ್ ಡೈರೆಕ್ಟರ್ ಕೆಎನ್ಎನ್ಎಲ್ ಚೀಫ್ ಇಂಜಿನಿಯರ್ ಎನ್ಡಬ್ಲ್ಯುಡಿಎ ಸೇರಿದಂತೆ ಇತರೆ ಅಧಿಕಾರಿಗಳ ಜೊತೆ ಡಿಪಿಆರ್ ಮಾಡಲು ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಅವರು ವಿವರಿಸಿದ್ದಾರೆ.

**ನೀರಿನ ಬಳಕೆ ಹಾಗೂ ಪರಿಸರ ಅಧ್ಯಯನ:** ಡಿಪಿಆರ್‌ನಲ್ಲಿ ಕುಡಿಯುವ ನೀರು, ಕೃಷಿ ಬಳಕೆ ಮತ್ತು ನದಿ ನೀರಿನ ಪರಿಸರ ಮೇಲಿನ ಪರಿಣಾಮ, ನದಿಯಲ್ಲಿ ಎಷ್ಟು ನೀರಿದೆ, ಎಷ್ಟು ಅರಣ್ಯ ಪ್ರದೇಶ ಮುಳುಗಡೆಯಾಗುತ್ತದೆ ಎಂಬ ಸಂಪೂರ್ಣ ಅಂಶಗಳು ಇರಬೇಕು ಎಂದು ಬೊಮ್ಮಾಯಿ ಸ್ಪಷ್ಟಪಡಿಸಿದ್ದಾರೆ.

**ಮಳೆಗಾಲದ ನೀರಿನ ಸಂಗ್ರಹ:** ಬೆಡ್ತಿ ನದಿಯಲ್ಲಿ ನದಿಯಲ್ಲಿ ಕೇವಲ ಮಳೆಗಾಲದಲ್ಲಿ ಹಾಗೂ ಪ್ರವಾಹ ಸಂದರ್ಭದಲ್ಲಿ ಮಾತ್ರ ಶೇ. 10ರಷ್ಟು ನೀರನ್ನು ನಾವು ತೆಗೆದುಕೊಳ್ಳುತ್ತೇವೆ, ಶೇ. 90ರಷ್ಟು ನೀರು ಹಾಗೆಯೇ ಹರಿದುಹೋಗುತ್ತದೆ. ಪಂಪ್ ಹೌಸ್ ಮತ್ತು ಪೈಪ್‌ಗಳಿಗೆ ಮಾತ್ರ ಅಲ್ಲಿ ಭೂಮಿ ಬೇಕಿದೆ. ಡಿಪಿಆರ್ ಬಗ್ಗೆ ನಮ್ಮ ರಾಜ್ಯ ಸರಕಾರ ಬಹಳಷ್ಟು ಆಸಕ್ತಿವಹಿಸಿದೆ. ಸಿಎಂ ಡಿ.ಕೆ. ಶಿವಕುಮಾರ ಅವರಿಗೆ ಒತ್ತಾಯ ಮಾಡುತ್ತೇನೆ. ಇದು ಬಹಳ ಪ್ರಮುಖವಾದ ಯೋಜನೆ.

ತಮ್ಮ ಕಾಲದಲ್ಲಿ ಡಿಪಿಆರ್ ಆಗಿ ಕೆಲಸ ಶುರುವಾಗುವ ಅವಕಾಶವಿದೆ. ಹೊಸ ತಂತ್ರಜ್ಞಾನ ಬಳಸಿ ಸರ್ವೇ ಮಾಡಿ, ಎಂಒಯು ಸಹಿ ಮಾಡಿದ್ದನ್ನು ಕಾರ್ಯಗತ ಮಾಡಿ, ಅದು ಆಗದಿದ್ದರೆ ಹೋರಾಟ ಮಾಡಲು ನಾವು ಸಿದ್ದ. ಹಾವೇರಿಯ ಹುಕ್ಕೇರಿ ಮಠದ ಶ್ರೀಗಳ ನೇತೃತ್ವದಲ್ಲಿ ಒಂದು ಸಮಿತಿ ರಚನೆಯಾಗಿದೆ. ಅದಕ್ಕಾಗಿ ಎಲ್ಲರೂ ಸೇರಿ ಒಂದೇ ಹೋರಾಟ ಸಮಿತಿ ಮಾಡೋಣ. ಬರಪೀಡಿತ ಜಿಲ್ಲೆಗಳ ಮುಂದಿನ ಭವಿಷ್ಯ ಇದರಲ್ಲಿದೆ. ಮುಂದಿನ ದಿನಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಆಂದೋಲನ ಮಾಡುತ್ತೇವೆ. ಇದರ ನೇತೃತ್ವ ವಹಿಸಲು ನಾನು ಬರಲು ತಯಾರಿದ್ದೇನೆ. ಹಾವೇರಿ ಜಿಲ್ಲೆ ಪ್ರತ್ಯೇಕವಾಗಿ ಒಂದು ಡ್ಯಾಂ ನಿರ್ಮಿಸಲು ಬೇಡಿಕೆಯಿದೆ ಎಂದು ಹೇಳಿದರು.

ಯೋಜನೆಯ ಡಿಪಿಆರ್ ಮಾಡಲು ತಡವಾಗುತ್ತಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಅವರು, ಡ್ರೋನ್ ಸೇರಿದಂತೆ ಹೊಸ ತಂತ್ರಜ್ಞಾನವನ್ನು ಬಳಸಿ ಸರ್ವೆ ನಡೆಸಿ, ಅತಿ ಬೇಗದಲ್ಲಿ ಡಿಪಿಆರ್ ಅನ್ನು ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

### ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ

# ನವೆಂಬರ್‌ನಲ್ಲಿ ಕಬ್ಬು ನುರಿಸುವಿಕೆ ಆರಂಭ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ



ಬೀದರ ತಾಲ್ಲೂಕಿನ ಜನವಾಡದಲ್ಲಿರುವ ನರಾಂಜಾ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ನಡೆದ ಬಾಯ್ಲರ್ ಅಗ್ನಿ ಪ್ರದೀಪನಾ ಪೂಜೆಯನ್ನು ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ನೆರವೇರಿಸಿದರು.

**ಬೀದರ, ಅ. 28:** ಬೀದರ ತಾಲ್ಲೂಕಿನ ಜನವಾಡದಲ್ಲಿರುವ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯು ನವೆಂಬರ್ ಮೊದಲ ವಾರದಲ್ಲಿ ಕಬ್ಬು ನುರಿಸುವ ಹಂಗಾಮು ಆರಂಭಿಸಲಿದೆ ಎಂದು ಕಾರ್ಖಾನೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಹೇಳಿದರು.

ಬೀದರ್ ತಾಲ್ಲೂಕಿನ ಜನವಾಡ ಸಮೀಪದ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯಲ್ಲಿ ನಡೆದ ಬಾಯ್ಲರ್ ಅಗ್ನಿ ಪ್ರದೀಪನಾ ಪೂಜೆ ಕಾರ್ಯಕ್ರಮದಲ್ಲಿ ಅವರು, 2026–27ನೇ ಸಾಲಿನ ಹಂಗಾಮಿನಲ್ಲಿ ಕಾರ್ಖಾನೆ 4.5 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿ ಹೊಂದಿದೆ. ಸದಸ್ಯ ರೈತರು ಕಾರ್ಖಾನೆಗೆ ಕಬ್ಬು ಪೂರೈಸಿ ಸಹಕರಿಸಬೇಕು ಎಂದರು.

### ಮೈಸೂರು ಅರಮನೆ ಒಡೆತನ ಕುರಿತ ವಿಚಾರ

# ನನ್ನ ಹೇಳಿಕೆಗೆ ಬದ್ಧ, ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ: ಸಚಿವ ಯತೀಂದ್ರ ಸಿದ್ದರಾಮಯ್ಯ



**ಮೈಸೂರು, ಅ.28:** ಮೈಸೂರು ಅರಮನೆಯ ಒಡೆತನದ ಕುರಿತಾದ ತಮ್ಮ ನಿಲುವನ್ನು ಪುನರುಚ್ಚರಿಸಿರುವ ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ, ತಾವು ನೀಡಿದ ಹೇಳಿಕೆಗೆ ಈಗಲೂ ಬದ್ಧನಾಗಿದ್ದೇನೆ. ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ ಎಂದು ಬುಧವಾರ ತಿಳಿಸಿದ್ದಾರೆ. ಇತ್ತೀಚೆಗೆ ಮೈಸೂರು ದಸರಾ ಆಚರಣೆಯ ಕುರಿತು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ವ್ಯಕ್ತಪಡಿಸಿರುವ ಅಸಮಾಧಾನಕ್ಕೆ ಸಂಬಂಧಿಸಿದಂತೆ, ಅವರ ಕ್ಷಮೆ ಕೋರಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದ್ದರು. ಸುದ್ದಿಗಾರರೊಂದಿಗೆ ಮಾತನಾಡಿದ ಯತೀಂದ್ರ, ಮೈಸೂರು ಅರಮನೆ ಸರ್ಕಾರದ ಆಸ್ತಿ. ಈ ವಿಚಾರದಲ್ಲಿ ನಾನು ಯಾವುದೇ ತಪ್ಪು ಮಾಡಿಲ್ಲ. ಆದಾಗ್ಯೂ, ಕೆಲವರು ನನ್ನ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿಕೊಂಡಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ ರಾಜವಂಶಸ್ಥರೊಂದಿಗೆ ಮಾತನಾಡುವುದಾಗಿ ಹೇಳಿದ್ದಾರೆ. ನಾನು ಮತ್ತೆ ಅವರೊಂದಿಗೆ ಚರ್ಚಿಸುವ ಅಗತ್ಯವಿಲ್ಲ ಎಂದರು. ಚಿನ್ನದ ಅಂಬಾರಿ ಮತ್ತು ಅರಮನೆಗೆ ಸಂಬಂಧಿಸಿದಂತೆ ನಾನು ಏನನ್ನೂ ತಪ್ಪಾಗಿ ಹೇಳಿಲ್ಲ. 'ಅರಮನೆ ಸ್ವಾಧೀನ ಮತ್ತು ವರ್ಗಾವಣೆ ಕಾಯ್ದೆ'ಯ ಪ್ರಕಾರವೇ ಮಾತನಾಡಿದ್ದೇನೆ. ಆದರೆ, ಕೆಲವರು ಬೇಕಂತಲೇ ಈ ವಿಚಾರವನ್ನು ರಾಜಕೀಯವಾಗಿ ಬಳಸಿಕೊಳ್ಳುತ್ತಿದ್ದಾರೆ. ನಾನು ಪ್ರಜ್ಞಾಪೂರ್ವಕವಾಗಿಯೇ ಮಾತನಾಡಿದ್ದೇನೆ. ನಾನು ತಪ್ಪು ಮಾಡಿದ್ದರೆ, ಕ್ಷಮೆ ಕೇಳುತ್ತಿದ್ದೆ. ಆದರೆ ನಾನು ಯಾವುದೇ ತಪ್ಪು ಮಾಡಿಲ್ಲದಿರುವುದರಿಂದ, ನಾನು ಕ್ಷಮೆ ಕೇಳುವುದಿಲ್ಲ'. ಪ್ರಮೋದಾ ದೇವಿ ಒಡೆಯರ್ ಅವರು ಏಳು ದಿನಗಳ ಕಾಲ ದಸರಾ ಆಚರಣೆಯನ್ನು ನಡೆಸಲು ಮತ್ತು ಚಿನ್ನದ ಅಂಬಾರಿಯನ್ನು ಕೊಡುವುದಿಲ್ಲ ಎಂದು ಮಾಧ್ಯಮ ಹೇಳಿಕೆ ನೀಡಿದ್ದರು. ನಾನು ಅದಕ್ಕೆ ಪ್ರತಿಕ್ರಿಯಿಸಿದ್ದೆ ಅಷ್ಟೇ. ಅಂಬಾರಿ ಇಲ್ಲದೆ ಜಂಬೂ ಸವಾರಿ ನಡೆಯಲು ಸಾಧ್ಯವಿಲ್ಲ. ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದೇವೆ ಮತ್ತು ಈಗ ಇರುವುದು ಜನರ ಸರ್ಕಾರ. ಜನರಿಗಾಗಿಯೇ ದಸರಾವನ್ನು ಆಚರಿಸುತ್ತೇವೆ. ಹೀಗಾಗಿ ನನ್ನ ಹೇಳಿಕೆಯಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿದರು.

# ಈಶಾನ್ಯ ಶಿಕ್ಷಕರ ಮತಕ್ಷೇತ್ರ, ಬಿಜೆಪಿಯ ಶಶೀಲ್ ನಮೋಶಿಗೆ ಐದನೇ ಗೆಲುವು



**ಕಲಬುರಗಿ, ಅ. 28:** ಕಲ್ಯಾಣ ಕರ್ನಾಟಕದ ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ ಜಿಲ್ಲೆಗಳನ್ನು ಒಳಗೊಂಡ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಎನ್ ಡಿಎ ಅಭ್ಯರ್ಥಿ ಶಶೀಲ್ ಗಂಗಾಧರ ನಮೋಶಿ ಅದ್ಭುತವಾದ ಐದನೇ ಗೆಲುವು ಸಾಧಿಸಿದ್ದಾರೆ.

ಕಳೆದ ಅ.23ರಂದು ನಡೆದಿದ್ದ ಚುನಾವಣೆ ಮತ ಎಣಿಕೆ ಕಾರ್ಯ ಮಂಗಳವಾರ ಕಲಬುರಗಿ ವಿಶ್ವವಿದ್ಯಾಲಯದ ಗಣಿತ ವಿಭಾಗದಲ್ಲಿ ನಡೆದು ಬಿಜೆಯ ಶಶೀಲ್ ನಮೋಶಿ ಅವರು ಕಾಂಗ್ರೆಸ್ ನ ಶರಣಪ್ಪ ಮಟ್ಟೂರ ಅವರನ್ನು ಸೋಲಿಸಿ ಐದನೇ ಬಾರಿಗೆ ಅದ್ಭುತವದ ವಿಜಯ ಸಾಧಿಸಿ ವಿಧಾನ ಪರಿಷತ್ ಪ್ರವೇಶಿಸಿದರು.

ತೀವ್ರ ಹಣಾಹಣಿ ಕಂಡಿದ್ದ ಈ ಚುನಾವಣೆಯಲ್ಲಿ ಶತಾಯು ಗತಾಯು ಗೆಲ್ಲಲೇಬೇಕೆಂದು ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ ಅವರೇ ಠಿಕಣಿ ಹೂಡಿ ಪ್ರಚಾರ ಕಯಕೊಂಡು, ಈ ಸ್ಥಾನ ಗೆಲ್ಲಲೇಬೇಕು ಎಂದು ಕಾರ್ಯಕರ್ತರಿಗೆ ಆದೇಶಿಸಿ ಹೋಗಿದ್ದರು. ಅಂತಿಮವಾಗಿ ಬಿಜೆಪಿಯ ಶಶೀಲ್ ನಮೋಶಿ ಅವರು ಪ್ರಥಮ ಪ್ರಾಶಸ್ತ್ಯದ 3,500ಕ್ಕಿಂತ ಅತ್ಯಧಿಗಳನ್ನು ಪಡೆದು ಅಷ್ಟೇ ಮತಗಳ ಅಂತರದಿಂದ ಭರ್ಜರಿ ಗೆಲುವು ಸಾಧಿಸಿದ್ದನ್ನು ಅಧಿಕೃತವಾಗಿ ಘೋಷಿಸಲಾಯಿತು.

ಗೆಲುವು ಸಾಧಿಸಿದ ನಂತರ ಮಾತನಾಡಿದ ಶಶೀಲ್ ಜಿ. ನಮೋಶಿ, ಶಿಕ್ಷಕ ಮತದಾರರು ಹೆಚ್ಚಿನ ಭರವಸೆಯನ್ನಿಟ್ಟು ಐದನೇ ಬಾರಿಗೆ ತಮ್ಮನ್ನು ಆಶೀರ್ವದಿಸಿದ್ದಾರೆ. ಹೀಗಾಗಿ ಅವರ ಕೆಲಸ ಕಾರ್ಯಗಳಿಗೆ, ಸಮಸ್ಯೆಗಳಿಗೆ ಹಗಲಿರುಳು ಸ್ಪಂದಿಸು ತ್ತೇನೆ ಎಂದು ಹೇಳಿದರು. ಈ ಚುನಾವಣೆ 2028ರ ವಿಧಾನಸಭೆ ಚುನಾವಣೆಗೆ ದಿಕ್ಸೂಚಿ ಆಗಲಿದೆ ಎಂದರು.

ವಿಧಾನ ಪರಿಷತ್‌ನ ಮುಖ್ಯ ಸಚೇತಕ ಎನ್. ರವಿಕುಮಾರ, ವಿಧಾನ ಪರಿಷತ್ ಸದಸ್ಯ ಬಿ.ಜಿ.ಪಾಟೀಲ ಹಾಗೂ ಶಾಸಕರು, ಮಾಜಿ ಶಾಸಕರು ವಿಜಯೋತ್ಸವದಲ್ಲಿ ಪಾಲ್ಗೊಂಡಿದ್ದರು.

**ಮಟ್ಟೂರ ಎರಡು ಸಲ ಪರಾಭವ:** ಕಲ್ಯಾಣ ಕರ್ನಾಟಕದ 41 ವಿಧಾನಸಭಾ ಕ್ಷೇತ್ರಗಳಲ್ಲಿ 26 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದಾರೆ. 11 ಕ್ಷೇತ್ರದಲ್ಲಿ ಬಿಜೆಪಿ ಹಾಗೂ 4 ಕ್ಷೇತ್ರದಲ್ಲಿ ಜೆಡಿಎಸ್ ಶಾಸಕರಿದ್ದಾರೆ. ಕಾಂಗ್ರೆಸ್‌ನ 26 ಕ್ಷೇತ್ರದ ಶಾಸಕರಿದ್ದರೂ ಬಿಜೆಪಿ ಅಭೂತ ಪೂರ್ವ ಗೆಲುವು ಸಾಧಿಸಿರು ವುದು ಬಿಜೆಪಿ ಕಾರ್ಯಕರ್ತರಲ್ಲಿ ಹುಮ್ಮಸ್ಸು ಮೂಡಿಸಿದರು.

ಈಗಾಗಲೇ ನಮೋಶಿ ವಿರುದ್ಧ ಒಂದು ಸಲ 2013ಲ್ಲಿ ಗೆದ್ದಿರುವ ಕಾಂಗ್ರೆಸ್‌ನ ಶರಣಪ್ಪ ಮಟ್ಟೂರ ಅವರು ಈಗ ಎರಡು ಸಲ ಸತತವಾಗಿ ನಮೋಶಿ ಎದುರು ಪರಾಭವಗೊಂಡರು.

# ಜಗದ್ಗುರು ಬಸವಣ್ಣ ಇಡೀ ವಿಶ್ವಕ್ಕೇ ಬೆಳಕು: ಸಚಿವ ಈಶ್ವರ ಖಂಡ್ರೆ ಬಣ್ಣನೆ



**ಕೆ.ಆರ್.ನಗರ, ಅ.28:** ಲೋಕಕಲ್ಯಾಣಕ್ಕಾಗಿ, ಸಮಸಮಾಜಕ್ಕಾಗಿ, ಸಾಮಾಜಿಕ ನ್ಯಾಯಕ್ಕಾಗಿ ಜಗತ್ತಿನಲ್ಲಿ ಯಾವುದಾದರೂ ಕ್ರಾಂತಿ ನಡೆದಿದ್ದರೆ ಅದು ಕಲ್ಯಾಣದ ಕ್ರಾಂತಿ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ವೀರಶೈವ ಲಿಂಗಾಯತ ಮಹಾಸಭಾ ಮತ್ತು ವೀರಶೈವ ಲಿಂಗಾಯತ ಸಂಘಟನೆಗಳ ಒಕ್ಕೂಟದ ವತಿಯಿಂದ ಇಂದು ಕೆ.ಆರ್.ನಗರದಲ್ಲಿ ಆಯೋಜಿಸಲಾಗಿದ್ದ ಬಸವಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಶ್ವಗುರು ಬಸವಣ್ಣನವರು ಈ ಜಗತ್ತಿನ ಬೆಳಕು. ಕಾಯಕವೇ ಕೈಲಾಸ ಎಂಬ ಮಂತ್ರವನ್ನು ಬಸವಣ್ಣನವರು ನಮಗೆ ನೀಡಿದ್ದಾರೆ. ದುಡಿಯುವ ಕೈಗೆ ಕೆಲಸ ಕೊಡಬೇಕು. ವೃತ್ತಿ ಯಾವುದೇ ಆದರೂ ಅದನ್ನು ಗೌರವಿಸಬೇಕು. ಕಾಯಕ ಮಾಡಿ ಗಳಿಸಬೇಕು, ಗಳಿಸಿದ್ದನ್ನು ಉಳಿಸಬೇಕು, ಉಳಿಸಿದ್ದನ್ನು ಈ ಸಮಾಜಕ್ಕೆ ದಾಸೋಹದ ಮೂಲಕ ವಿನಿಯೋಗಿಸಬೇಕು ಎಂಬುದು ಅವರ ಆಂತರ್ಯವಾಗಿದೆ ಎಂದರು.

ಅಕ್ಕ ಮಹಾದೇವಿ ಸೇರಿ 33 ಶರಣೆಯರಿಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಅನುಭವ ಮಂಟಪದಲ್ಲಿ ಅವಕಾಶ ನೀಡಲಾಗಿತ್ತು. ಬಸವಾದಿ ಪ್ರಥಮರು 12ನೇ ಶತಮಾನದಲ್ಲೇ ಮಹಿಳಾ ಸ್ವಾತಂತ್ರ್ಯಕ್ಕೆ ನಾಂದಿ ಹಾಡಿದ್ದರು. ಇಂದು ಸಮಾಜದಲ್ಲಿ ದ್ವೇಷ, ಅಸೂಯೆ, ಅಶಾಂತಿ ಇದೆ. ಧರ್ಮದ ಹೆಸರಲ್ಲಿ ಕೆಲವರು ವಿಷಬೀಜ ಬಿತ್ತುತ್ತಾ ಸಮಾಜದ ಶಾಂತಿಯನ್ನೇ ಕದಡುತ್ತಿದ್ದಾರೆ. ಆದರೆ ಬಸವಣ್ಣನವರು 12ನೇ ಶತಮಾನದಲ್ಲಿ ಧರ್ಮ ಎಂದರೇನು ಎಂಬುದನ್ನು ಒಂದು ಸರಳ ವಾಕ್ಯದಲ್ಲಿ ತಿಳಿಸಿದ್ದರು. ದಯೆ ಇಲ್ಲದ ಧರ್ಮ ಯಾವುದಯ್ಯ, ದಯವೇ ಧರ್ಮದ ಮೂಲ ಎಂಬ ಸಂದೇಶ ಸಾರಿದರು ಎಂದರು.

ಇಂದಿನ ಯುವಜನರು ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ಅವರಿಗೆ ವಚನಗಳನ್ನು ಕಲಿಸಿದರೆ, ಅದರ ಅರ್ಥ ತಿಳಿಸಿದರೆ ಅವರು ಸಂಸ್ಕಾರವಂತರಾಗುತ್ತಾರೆ. ಚಾರಿತ್ರ್ಯ ಉಳಿಸಿಕೊಳ್ಳುತ್ತಾರೆ. ಸಮಾಜದ ಗಣ್ಯ ವ್ಯಕ್ತಿಗಳಾಗುತ್ತಾರೆ ಎಂದು ತಿಳಿಸಿದರು. ಕೆ.ಆರ್. ನಗರ ಶಾಸಕ ರವಿಶಂಕರ್ ಯುವ ಉತ್ಸಾಹಿ ಮತ್ತು ದಕ್ಷ ಶಾಸಕರಾಗಿದ್ದು, ಸಮಾಜದ ಜನರೊಂದಿಗೆ ನಿಂತಿದ್ದಾರೆ. ಮುಂದಿನ ದಿನಗಳಲ್ಲೂ ಅವರಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು.

# 5ನೇ ಬಾರಿಗೆ ಶಶಿಲ್ ನಮೋಶಿ ಗೆಲುವು ಬಳ್ಳಾರಿಯಲ್ಲಿ ಬಿಜೆಪಿಯಿಂದ ವಿಜಯೋತ್ಸವ



**ಬಳ್ಳಾರಿ, ಅ.28:** ಈಶಾನ್ಯ ಕರ್ನಾಟಕ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಐದನೇ ಬಾರಿಗೆ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ವಿರುದ್ಧ ಜಯಭೇರಿ ಬಾರಿಸಿರುವ ಹಿನ್ನೆಲೆಯಲ್ಲಿ ನಗರದ ಗಡಗಿ ಚೆನ್ನಪ್ಪ ವೃತ್ತದಲ್ಲಿ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ನೇತೃತ್ವದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಸಿಹಿ ಹಂಚಿ, ಪಟಾಕಿ ಸಿಡಿಸಿ, ಘೋಷಣೆ ಕೂಗಿ ವಿಜಯೋತ್ಸವ ಆಚರಿಸಿದರು. ಈ ವೇಳೆ ಮಾತನಾಡಿದ ಮಾಜಿ ಶಾಸಕ ಸೋಮಶೇಖರ ರೆಡ್ಡಿ ಅವರು, ಈ ಗೆಲುವು ಶಿಕ್ಷಕರ ಬೆಂಬಲ ಮತ್ತು ವಿಶ್ವಾಸದ ಪ್ರತೀಕ ವಾಗಿದ್ದು, ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ಹಿತಾಸಕ್ತಿಗಾಗಿ ಮತ್ತಷ್ಟು ಶ್ರಮಿಸಲು ಹೊಸ ಉತ್ಸಾಹ ತುಂಬಿದೆ ಎಂದರು.

ಈ ವೇಳೆ ಪಕ್ಷದ ಜೆಡಿಎಸ್ ಜಿಲ್ಲಾ ಅಧ್ಯಕ್ಷ ಮೀನಳ್ಳಿ ತಾಯಣ್ಣ, ಬಿಜೆಪಿಯ ಮುಖಂಡರಾದ ಡಾ.ಎಸ್.ಜೆ.ವಿ.ಮಹಿಪಾಲ್, ಎಸ್. ಗುರುಲಿಂಗನ ಪಾಕ8ಕೆ ಸದಸ್ಯರಾದ ಸುರೇಖ ಮಲ್ಲನಗೌಡ, ಶ್ರೀನಿವಾಸ್ ಮೋತ್ಕರ್, ಹನುಮಂತ ಗುಡುಗಂಟಿ ಎಸ್.ಮಲ್ಲನಗೌಡ, ಅಡವಿ ಸ್ವಾಮಿ, ದರೂರು ಶಾಂತನಗೌಡ, ತಿಪ್ಪೆ ಸ್ವಾಮಿ ಉಪಸ್ಥಿತರಿದ್ದರು.

# ಎಚ್‌ಐವಿ ಏಡ್ಸ್ ನಿಯಂತ್ರಣಕ್ಕೆ ಜನಜಾಗೃತಿ ಬೈಕ್ ರ‍್ಯಾಲಿ



**ಬೀದರ್, ಅ. 28:** ಎಚ್‌ಐವಿ ಏಡ್ಸ್ ಜನಜಾಗೃತಿ ಬೈಕ್ ರ‍್ಯಾಲಿ ನಗರದಲ್ಲಿ ಜರುಗಿತು. ನೆಹರೂ ಕ್ರೀಡಾಂಗಣದಿಂದ ಆರಂಭಗೊಂಡ ರ‍್ಯಾಲಿ ಪ್ರಮುಖ ಮಾರ್ಗಗಳ ಮೂಲಕ ಬಿವಿಬಿ ಕಾಲೇಜಿನ ವರೆಗೆ ಜರುಗಿತು. ಬೈಕ್ ರ‍್ಯಾಲಿಯಲ್ಲಿ ಪದವಿ ಕಾಲೇಜಿನ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಸೇರಿದಂತೆ ಒಟ್ಟು 94 ಬೈಕ್ ಸವಾರರು ಪಾಲ್ಗೊಂಡಿದ್ದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯೂ ಆದ ಹಿರಿಯ ಸಿವಿಲ್ ನ್ಯಾಯಾಧೀಶ ರಾಘವೇಂದ್ರ ಉಪಾಧ್ಯೆ ಮಾತನಾಡಿ, ಏಡ್ಸ್ ನಿಯಂತ್ರಣಕ್ಕಾಗಿ ಸರ್ಕಾರದಿಂದ ಹಲವು ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಜನಸಾಮಾನ್ಯರು ಇದರ ಸದುಪಯೋಗ ಪಡೆದುಕೊಂಡು ಜಾಗೃತರಾಗಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಲಹೆ ಮಾಡಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಧ್ಯಾನೇಶ್ವರ ನೀರಗುಡೆ, ಬೀದರ್ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅನೀಲಕುಮಾರ ಚಿಂತಾಮಣಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಂ.ಡಿ. ಅಹಮದ್ ಉದ್ದಿನ್, ಬ್ರಿಮ್ಸ್ ನೋಡಲ್ ಅಧಿಕಾರಿ ಡಾ. ದಿಲೀಪ್ ರಾಠೋಡ್, ಬೀದರ್ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಕಿರಣ ಪಾಟೀಲ, ಬೀದರ? ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಶಂಕ್ರೆಪ್ಪ ಬೊಮ್ಮಾ, ಆರ್‌ಸಿಎಚ್ ಅಧಿಕಾರಿ ಡಾ. ಮಹದೇವಪ್ಪ ಎಚ್., ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ. ದಿಲೀಪ ಡೋಂಗ್ರೆ, ಬೀದರ್ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ರಾಜಶೇಖರ ಪಾಟೀಲ, ಬೀದರ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಸಂಗಾರೆಡ್ಡಿ ಉಪಸ್ಥಿತರಿದ್ದರು.

# ರಾಷ್ಟ್ರಕೂಟರ ಕುಲದೇವತೆ ನಾಗಾವಿ ಯಲ್ಲಮ್ಮ ಜಾತ್ರೆ ದೇವಿ ಪಲ್ಲಕ್ಕಿ ಉತ್ಸವಕ್ಕೆ ಹರಿದುಬಂದ ಅಪಾರ ಭಕ್ತಸಾಗರ



**ಕಲಬುರಗಿ, ಅ. 29:** ಜಿಲ್ಲೆಯ ಚಿತ್ತಾಪುರ ಪಟ್ಟಣದ ಹೊರವಲಯದಲ್ಲಿರುವ ಸುಪ್ರಸಿದ್ಧ ರಾಷ್ಟ್ರಕೂಟರ ಕುಲದೇವತೆ ಎಂದೇ ಖ್ಯಾತಿ ಪಡೆದ ನಾಗಾವಿ ಯಲ್ಲಮ್ಮ ದೇವಿಯ ಪಲ್ಲಕ್ಕಿ ಉತ್ಸವ ಹಾಗೂ ಜಾತ್ರಾ ಮಹೋತ್ಸವ ಅಪಾರ ಜನಸಾಗರದ ಮಧ್ಯೆ ಅದ್ದೂರಿಯಾಗಿ ಜರುಗಿತು. ಜತೆಗೆ ಹುಣ್ಣಿಮೆ ದಿನ ಹಾಗೂ ಪಲ್ಲಕ್ಕಿ ಉತ್ಸವ ಜಾತ್ರೆಯಿಂದಾಗಿ ಅಪಾರ ಭಕ್ತರು ಜತೆಗೆ ರಾತ್ರಿವರೆಗೂ ಭಕ್ತರ ದಂಡು ಹರಿದು ಬರುತ್ತಿರುವುದರಿಂದ ಅದ್ದೂರಿಯಾಗಿ ಪಲ್ಲಕ್ಕಿ ಉತ್ಸವ ಹಾಗೂ ಜಾತ್ರೆ ಜರುಗಿಯಿತು.

ಮಧ್ಯಾಹ್ನ ಸರಾಫ ಲಚ್ಚಪ್ಪ ನಾಯಕ ನಿವಾಸದಲ್ಲಿ ವಿಘ್ನೇಶ್ವರ, ಗುರು ಹಾಗೂ ದೇವಿಯ ಪಲ್ಲಕ್ಕಿ ಪೂಜೆಯು ತಹಸೀಲ್ದಾರ್ ನಾಗಯ್ಯ ಹಿರೇಮಠ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಶಿರಸ್ತೇದಾರ ಅಶ್ವಥಯನಾರಾಯಣ ಕುಲಕರ್ಣಿ, ಪುರಸಭೆ ಮಾಜಿ ಅಧ್ಯಕ್ಷ ವಿನಾಯಕರಾವ ನಾಯಕ್ ಹಾಗೂ ಗಣ್ಯ ವ್ಯಕ್ತಿಗಳ ಸಮ್ಮುಖದಲ್ಲಿ ಧಾರ್ಮಿಕ ವಿಧಿ ವಿಧಾನಗಳ ಮೂಲಕ ಪಲ್ಲಕ್ಕಿ ಉತ್ಸವ ಜರುಗಿತು. ಅರ್ಚಕರಾದ ಅರವಿಂದ ಸರಾಫ, ಪುಟ್ಟು ಧನವಾಡಕರ್ ಮಂತ್ರ ಪಠಣ ಮಾಡಿದರು.

ಸಕಲ ಮಂಗಳ ವಾದ್ಯಗಳೊಂದಿಗೆ ವಿಘ್ನೇಶ್ವರ ಹಾಗೂ ದೇವಿಯ ಮೂರ್ತಿಯು ಹೊತ್ತ ಪಲ್ಲಕ್ಕಿ ಉತ್ಸವನ್ನು ವಿವಿಧ ಪ್ರಮುಖ ಬೀದಿಗಳ ಮೂಲಕ ರಾತ್ರಿ ನಾಗಾವಿ ಯಲ್ಲಮ್ಮ ದೇವಸ್ಥಾನ ತಲುಪಿತು. ಮೆರವಣಿಗೆಯಲ್ಲಿ ಬಾಜಾ ಭಜಂತ್ರಿ, ಡೊಳ್ಳು ಕುಣಿತ, ಲೇಜಿಮ್, ಕೋಲಾಟ, ಯುವಕರ ಕುಣಿತ, ಬಣ್ಣ ಬಣ್ಣದ ಕೊಡೆಗಳು, ಧ್ವಜಗಳು, ಭಜನೆ ಜನಮನ ಸೆಳೆದವು. ಸುಮಂಗಲೆಯರು ಹೊತ್ತ ಕಳಸ, ಕುಂಭ ನೋಡುಗರಿಗೆ ಆಕರ್ಷಣೆಯಾಗಿದ್ದವು. ಸುಮಾರು 8 ತಾಸುಗಳವರೆಗೆ ಪಲ್ಲಕ್ಕಿ ಮೆರವಣಿಗೆ ನಡೆಯಿತು. ಪಲ್ಲಕ್ಕಿಯು ದೇವಸ್ಥಾನದ ಗರ್ಭ ಗುಡಿಗೆ 5 ಸುತ್ತು ಹಾಕಲಾಯಿತು. ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಕರ್ನಾಟಕ, ಆಂಧ್ರ, ಮಹಾರಾಷ್ಟ ಸೇರಿದಂತೆ ನಾನಾ ರಾಜ್ಯಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದರ್ಶನ ಪಡೆದರು. ನೈವೇದ್ಯ ಸಲ್ಲಿಸಲು ಹಾಗೂ ದರ್ಶನ ಪಡೆಯಲು ಭಕ್ತರ ಉದ್ದನೇಯ ಸಾಲಿನಿಂದ ಕೂಡಿತ್ತು. ಕ್ಕಿಕ್ಕಿರಿದ ಜನಸ್ತೋಮದಿಂದಾಗಿ ದೇವಸ್ಥಾನ ಸುತ್ತಲು ನೆರೆದಿದ್ದರು. ಸುಗಮ ದರ್ಶನಕ್ಕೆ ಪೋಲಿಸರು, ಕಂದಾಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಹರಸಾಹಸಪಟ್ಟರು. ದೇವಸ್ಥಾನಕ್ಕೆ ಸೇರಿದಂತೆ ಚಿತ್ತಾಪುರ ಪಟ್ಟಣದಲ್ಲಿ ದೀಪಾಲಂಕಾರಗಳಿಂದ ಕಂಗೊಳಿಸಿತ್ತು.

ಅಪಾರ ಭಕ್ತರು ನಂದಿ ಬಾವಿಯಲ್ಲಿ ಮಿಂದು ದೇವಿಯ ದರ್ಶನ ಪಡೆದು ಪುನೀತರಾದರು. ಸಹಸ್ರಾರು ಸಂಖ್ಯೆಯಲ್ಲಿ ವಾಹನಗಳು ಬಂದಿರುವುದರಿಂದ ವಾಹನಗಳ ಪಾರ್ಕಿಂಗ್ ವ್ಯವಸ್ಥೆಗೊಳಿಸಿದ್ದರು. ವಾಹನಗಳಿಗೆ ಸಮರ್ಪಕ ಪಾರ್ಕಿಂಗ್ ಮಾಡಿರುವುದರಿಂದ ವಾಹನಗಳ ಟ್ರಾಫಿಕ್ ಆಗದೇ ಈ ಬಾರಿ ಭಕ್ತರು ದಾರಿಯೂದ್ದಕ್ಕೂ ಹೊರಟಿರುವುದಯಿರಿಂದ ಭಕ್ತರ ದಟ್ಟಣೆ ಜೋರಾಗಿತ್ತು. ಇದರಿಂದ ಈ ಬಾರಿ ಭಕ್ತರ ಜನಸಂಖ್ಯೆ ಹೆಚ್ಚಾಗಿತ್ತು.

ಡಿವೈಎಸ್ಪಿ ಶಂಕರಗೌಡ ಪಾಟೀಲ್, ಸಿಪಿಐ ಎಸ್.ಸಿ. ಪಾಟೀಲ್, ಪಿಎಸ್ಐ ಮಂಜುನಾಥ್ ರೆಡ್ಡಿ ನೇತೃತ್ವದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಿದರು. ವಿವಿಧ ಸಂಘ ಸಂಸ್ಥೆಗಳ ಪದಾಧಿಕಾಯಿರಿಗಳು ದೇವಸ್ಥಾನಲ್ಲಿ ಸ್ವಯಂ ಸೇವಕರಾಗಿ ಸೇವೆ ಸಲ್ಲಿಸಿದರು. ಸ್ವಚ್ಛತೆಗಾಗಿ ಅಲ್ಲಲ್ಲಿ ಡಸ್ಟ್‌ಬಿನ್‌ಗಳ ವ್ಯವಸ್ಥೆ ಮಾಡಿದ್ದರಿಂದ ಎಲ್ಲೂ ಗಲೀಜು ಆಗದೇ ಸ್ವಚ್ಛತೆಯ ಪರಿಸರವಿತ್ತು. ದಾರಿಯೂದ್ದಕ್ಕೂ ವಿದ್ಯುತ್ ದೀಪಗಳು, ರಸ್ತೆಯಲ್ಲಿ ಸ್ವಚ್ಛತೆಯ ವ್ಯವಸ್ಥೆ ಹಾಗೂ ಅಲ್ಲಲ್ಲಿ ಮೊಬೈಲ್ ಶೌಚಾಲಯಗಳ ನಿರ್ಮಾಣ ಮಾಡಿರುವುದರಿಂದ ತಹಸೀಲ್ದಾರ್ ನಾಗಯ್ಯ ಹಿರೇಮಠ, ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ, ಡಿವೈಎಸ್ಪಿ ಶಂಕರಗೌಡ ಪಾಟೀಲ್ ಅವರ ಕಾರ್ಯ ಭಕ್ತರು ಮೆಚ್ಚುಗೆ ವ್ಯಕ್ತಪಡಿಸಿದರು.

**ಅನ್ನದಾಸೋಹ ಅಬ್ಬರ:** ಭಕ್ತರಿಗಾಗಿ ಭಕ್ತರಿಂದ ದೇವಸ್ಥಾನದಲ್ಲಿ ಹಾಗೂ ದಾಯಿರಿಯುದ್ದಕ್ಕೂ ಅನ್ನದಾಸೋಹ, ಪ್ರಸಾದ ಅಬ್ಬರ ಹೆಚ್ಚಾಗಿತ್ತು. ಬಸ್ ನಿಲ್ದಾಣದಿಂದ ಭುವನೇಶ್ವರಿ ವೃತ್ತ, ಚಿತಾವಲಿ ಚೌಕ್‌ದಿಂದ– ನಾಗಾವಿ ವೃತ್ತದ ಮೂಲಕ ನಾಗಾವಿ ದೇವಸ್ಥಾನದವರೆಗೂ ಸುಮಾರು 60 ಕ್ಕೂ ಹೆಚ್ಚು ಕಡೆ ಅನ್ನದಾಸೋಹ ವ್ಯವಸ್ಥೆ ಕಲ್ಪಿಸಲಾಗಿತ್ತು. ಯುವಕರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಸೇರಿ ಹೆಜ್ಜೆ ಹೆಜ್ಜೆಗೂ ಅನ್ನದಾಸೋಹ, ಪ್ರಸಾದ ವಿತರಿಸುವ ಕುಡಿಯುವ ನೀರಿನ ಬಾಟಲಗಳು ಸೇರಿದಂತೆ ವಿವಿಧ ಬಗೆಯ ಪ್ರಸಾದ ವ್ಯವಸ್ಥೆ ಮಾಡಿದ್ದರು.

# ಮಧ್ಯಾವಧಿ ಚುನಾವಣೆಯ ನಂತರ ಇರಾನ್ ಮೇಲೆ ದಾಳಿ ನಡೆಸುವ ಸಾಧ್ಯತೆ: ಅಮೆರಿಕ ಸುಳಿವು

ವಾಷಿಂಗ್ಟನ್, ಅ.28: ಅಮೆರಿಕ ಮಧ್ಯಂತರ ಚುನಾವಣೆಯ ನಂತರ ಇರಾನ್ ವಿರುದ್ಧ "ಸಣ್ಣ ಮತ್ತು ತೀವ್ರವಾದ" ಮಿಲಿಟರಿ ಕಾರ್ಯಾಚರಣೆಗೆ ಸಿದ್ಧರಾಗುವಂತೆ ಅಮೆರಿಕ ಹಲವಾರು ಪರ್ಷಿಯನ್ ಗಲ್ಫ್ ಅರಬ್ ರಾಷ್ಟ್ರಗಳಿಗೆ ಎಚ್ಚರಿಕೆ ನೀಡಿದೆ. ಮಾಹಿತಿಯುಕ್ತ ಮೂಲಗಳನ್ನು ಉಲ್ಲೇಖಿಸಿ, ಪತ್ರಿಕೆಯು ರಾಜತಾಂತ್ರಿಕ ಮತ್ತು ಮಿಲಿಟರಿ ಮಾರ್ಗಗಳ ಮೂಲಕ ಸಂದೇಶಗಳನ್ನು ರವಾನಿಸಲಾಗಿದೆ ಎಂದು ವರದಿ ಮಾಡಿದೆ. ಅಮೆರಿಕದ ಮಧ್ಯಂತರ ಚುನಾವಣೆಗಳು ನವೆಂಬರ್ 3 ರಂದು ನಿಗದಿಯಾಗಿವೆ.

ದಿ ವಾಲ್ ಸ್ಟ್ರೀಟ್ ಜರ್ನಲ್ ಪ್ರಕಾರ, ಇಸ್ಲಾಮಿಕ್ ಗಣರಾಜ್ಯವನ್ನು ದುರ್ಬಲಗೊಳಿಸಲು ಮತ್ತು ಟೆಹ್ರಾನ್ ಅನ್ನು ಮಾತುಕತೆಯ ಮೇಜಿಗೆ ಹಿಂತಿರುಗಿಸಲು ಯುನೈಟೆಡ್ ಸ್ಟೇಟ್ಸ್ ಮತ್ತು ಇಸ್ರೇಲ್ ಸಂಭಾವ್ಯ ಹೊಸ ಸುತ್ತಿನ ದಾಳಿಗೆ ತಯಾರಿ ನಡೆಸುತ್ತಿವೆ. ಟ್ರಂಪ್ ಅವರ ಚಿಂತನೆಯನ್ನು ತಿಳಿದಿರುವ ಮೂಲಗಳು, ಚುನಾವಣೆಯ ನಂತರ ಇರಾನಿನ ಮೂಲಸೌಕರ್ಯ ಮತ್ತು ಪರಮಾಣು ಸೌಲಭ್ಯಗಳನ್ನು ಗುರಿಯಾಗಿಸಬಹುದಾದ ಪ್ರಮುಖ ದಾಳಿಯನ್ನು ನಡೆಸುವತ್ತ ಅವರು ಒಲವು ತೋರುತ್ತಿದ್ದಾರೆ ಎಂದು ಗಮನಿಸಿವೆ.

ವಾಯು ರಕ್ಷಣೆಯನ್ನು ಬಲಪಡಿಸಲು ಯುಎಸ್ ಮಿಲಿಟರಿ ಟೆಕ್ಸಾಸ್‌ನಿಂದ ಇಸ್ರೇಲ್‌ಗೆ ಪೇಟ್ರಿಯಾಟ್ ಕ್ಷಿಪಣಿ ಬ್ಯಾಟರಿಯನ್ನು ನಿಯೋಜಿಸುತ್ತಿದೆ ಎಂದು ವರದಿ ಹೇಳಿದೆ. ಈ ಪ್ರದೇಶದಲ್ಲಿನ ಹಲವಾರು ದುರ್ಬಲ ನೆಲೆಗಳಿಂದ ಯುಎಸ್ ಪಡೆಗಳು ಮರು ನಿಯೋಜಿಸಲ್ಪಟ್ಟಿವೆ ಮತ್ತು ಮದ್ದುಗುಂಡುಗಳ ದಾಸ್ತಾನುಗಳನ್ನು ಮರುಪೂರಣ ಗೊಳಿಸಲಾಗುತ್ತಿದೆ. ಸಂಭಾವ್ಯ ದಾಳಿಗಳಿಗೆ ಬಾಂಬರ್‌ಗ ಮತ್ತು ಫೈಟರ್ ಜೆಟ್‌ಗಳನ್ನು ಸಿದ್ಧಪಡಿಸಲಾಗುತ್ತಿದೆ. ಮುಂದಿನ ತಿಂಗಳು ಮಧ್ಯಪ್ರಾಚ್ಯದಲ್ಲಿ ಪ್ರಸ್ತುತ ಬೀಡುಬಿಟ್ಟಿರುವ ಸುಮಾರು 20 ಯುಎಸ್ ಯುದ್ಧನೌಕೆಗಳೊಂದಿಗೆ ವಾಹಕ ಮುಷ್ಕರ ಗುಂಪು ಮತ್ತು ನೌಕಾ ದಂಡಯಾತ್ರೆಯ ಘಟಕವು ಸೇರಲಿದೆ. ವರದಿಗೆ ಪ್ರತಿಕ್ರಿಯಿಸಿದ ಶ್ವೇತಭವನವು "ಸೂಕ್ಷ್ಮ ಮಿಲಿಟರಿ ಯೋಜನೆ" ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿತು, ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ಪಡೆಯುವುದನ್ನು ತಡೆಯಲು ಟ್ರಂಪ್ ಎಲ್ಲಾ ಆಯ್ಕೆಗಳನ್ನು ನಿರ್ವಹಿಸುತ್ತಿದ್ದಾರೆ ಎಂದು ಪುನರುಚ್ಚರಿಸಿತು. ಪ್ರಾದೇಶಿಕ ಆರ್ಥಿಕ ಮತ್ತು ನಾಗರಿಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ತೀವ್ರವಾದ ದಾಳಿಗಳೊಂದಿಗೆ ಯಾವುದೇ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಇರಾನ್ ಸಾರ್ವಜನಿಕ ಮತ್ತು ಖಾಸಗಿ ಮಾರ್ಗಗಳ ಮೂಲಕ ಎಚ್ಚರಿಸಿದೆ. ಪತ್ರಿಕೆಯ ಪ್ರಕಾರ, ಯುದ್ಧಕಾಲದ ಹಾನಿಯ ಹೊರತಾಗಿಯೂ, ಇರಾನ್ ಗಮನಾರ್ಹವಾದ ಕ್ಷಿಪಣಿ ದಾಸ್ತಾನು ಉಳಿಸಿಕೊಂಡಿದೆ ಮತ್ತು ಅದರ ರಕ್ಷಣೆಯನ್ನು ಬಲಪಡಿಸಲು ಮತ್ತು ಸಂಭಾವ್ಯ ಪ್ರತಿ–ಪ್ರತಿಕ್ರಿಯೆಗಳನ್ನು ಸಿದ್ಧಪಡಿಸಲು ಹೋರಾಟದಲ್ಲಿ ವಿರಾಮಗಳನ್ನು ಬಳಸಿಕೊಂಡಿದೆ.

# ಬಲಪಂಥೀಯರಿಗೆ ಬಹುಮತ ಗ್ಯಾರಂಟಿ: ನೆತನ್ಯಾಹು

**ನವದೆಹಲಿ, ಅ. 28:** ಇಸ್ರೇಲ್ ಸಾರ್ವತ್ರಿಕ ಚುನಾವಣೆಯ ಫಲಿತಾಂಶ ತೀವ್ರಜಿದ್ದಾಜಿದ್ದಿನಿಂದ ಕೂಡಿದ್ದು, ಅಧಿಕೃತ ಚಿತ್ರಣ ಇನ್ನೂ ಹೊರಬರಬೇಕಿದೆ ಈ ನಡುವೆ ಪ್ರತಿಕ್ರಿಯೆ ನೀಡಿರುವ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಯಾವುದೇ ಕಾರಣಕ್ಕೂ ಅರಬ್ ಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ರಚಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಜೆರುಸಲೇಂನಲ್ಲಿರುವ ಲಿಕುಡ್ ಪಕ್ಷದ ಪ್ರಧಾನ ಕಚೇರಿಯಲ್ಲಿ ಹರ್ಷೋದ್ಗಾರ ಮಾಡುತ್ತಿದ್ದ ಬೆಂಬಲಿಗರನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶಕ್ಕೆ ಬಲಪಂಥೀಯ ಒಕ್ಕೂಟದ ಸ್ಥಿರವಾದ ಸರ್ಕಾರ ಅತ್ಯಗತ್ಯ ಎಂದು ಒತ್ತಿ ಹೇಳಿದರು. ಚುನಾವಣೆಯ ಅಂತಿಮ ಫಲಿತಾಂಶ ಬರುವವರೆಗೆ ಕಾಯಬೇಕಿದೆ ಎಂದಿರುವ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಯಾವುದೇ ಕಾರಣಕ್ಕೂ ಅರಬ್ ಪಕ್ಷಗಳ ಬೆಂಬಲ ಪಡೆದು ಸರ್ಕಾರ ರಚಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಯಹೂದಿ ಹಾಗೂ ಸಿಯನ್ವಾದಿ ಒಂದಾಗಿ, ದೇಶದಲ್ಲಿ ಬಲಪಂಥೀಯ ಮತ್ತು ಬಲವಾದ ಸರ್ಕಾರವನ್ನು ರಚಿಸುವುದೇ ತಮ್ಮ ಗುರಿ ಎಂದು ಅವರು ಪುನರುಚ್ಚರಿಸಿದ್ದಾರೆ.

ಚುನಾವಣೆಯ ಫಲಿತಾಂಶವು ತೀವ್ರ ಜಿದ್ದಾಜಿದ್ದಿನಿಂದ ಕೂಡಿರುವುದ ರಿಂದ ರಾಜಕೀಯ ಅನಿಶ್ಚಿತತೆ ಮುಂದುವರಿದಿದೆ. ಆರಂಭಿಕ ಎಕ್ಸಿಟ್ ಪೋಲ್ ಸಮೀಕ್ಷೆಗಳ ಪ್ರಕಾರ, ಪ್ರಧಾನಿ ನೆತನ್ಯಾಹು ಅವರ ಬ್ಲಾಕ್ ಮತ್ತು ಗಡಿ ಐಸೆನ್ಕೋಟ್ ನೇತೃತ್ವದ ವಿರೋಧ ಪಕ್ಷದ ಶಿಬಿರದ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿದೆ. ಚಾನೆಲ್ 11 ಮತ್ತು 13 ರ ವರದಿಗಳ ಪ್ರಕಾರ ಎರಡೂ ಶಿಬಿರಗಳು ತಲಾ 51 ಸ್ಥಾನಗಳನ್ನು ಗಳಿಸಬಹುದೆಂದು ಅಂದಾಜಿಸಲಾಗಿದ್ದು, ಯಾರಿಗೂ ಸ್ಪಷ್ಟ ಬಹುಮತ ಸಿಕ್ಕಿಲ್ಲ.

ಮತ್ತೊಂದೆಡೆ ಚಾನೆಲ್ 12 ವಿರೋಧ ಪಕ್ಷಕ್ಕೆ ಅಲ್ಪ ಮುನ್ನಡೆ ತೋರಿಸಿದ್ದು, ಈ ನಡುವೆ, ಅರಬ್ ಅಲ್ಪಸಂಖ್ಯಾತ ಗುಂಪುಗಳ ಬೆಂಬಲ ದೊಂದಿಗೆ ಸರ್ಕಾರ ರಚಿಸುವುದಿಲ್ಲ ಎಂದು ಪ್ರತಿಪಕ್ಷ ನಾಯಕ ಐಸೆನ್ಕೋಟ್ ಈಗಾಗಲೇ ಸ್ಪಷ್ಟಪಡಿಸಿದ್ದಾರೆ.

ಹೊಸ ಸರ್ಕಾರ ರಚನೆಯ ಚರ್ಚೆಗಳ ಜೊತೆಗೆ, ಇರಾನ್ನ ಪರಮಾಣು ಹಾಗೂ ಭದ್ರತಾ ಬೆದರಿಕೆಗಳನ್ನು ಎದುರಿಸಲು ಅಮೆರಿಕದ ಅಧ್ಯಕ್ಷ ಡೊನಾಲ್ಡ್‌ಟ್ರಂಪ್ ಅವರೊಂದಿಗೆ ಕೈಜೋಡಿಸಲು ಇದು ಸುವರ್ಣಾವಕಾಶ ಎಂದು ನೆತನ್ಯಾಹು ಬಣ್ಣಿಸಿದ್ದಾರೆ. ಇರಾನ್ ಹಿಂದೆಂದಿಗಿಂತಲೂ ದುರ್ಬಲವಾಗಿದ್ದು, ಇಸ್ರೇಲ್ ತುಂಬಾ ಶಕ್ತಿಶಾಲಿಯಾಗಿದೆ ಎಂದು ಟೈಮ್ಸ್ ಆಫ್ ಇಸ್ರೇಲ್ ವರದಿಯನ್ನು ಉಲ್ಲೇಖಿಸಿ ತಿಳಿಸಿದ್ದಾರೆ. ಇರಾನ್ ವಿರುದ್ಧ ಮತ್ತೊಂದು ದಾಳಿ ಎಚ್ಚರಿಕೆ ನೀಡಿದ ಕೆಲವೇ ದಿನಗಳಲ್ಲಿ ನೆತನ್ಯಾಹು ಈ ಹೇಳಿಕೆ ನೀಡಿರುವುದು ಗಮನಿಸಬೇಕಾದ ಸಂಗತಿ. ಇಸ್ರೇಲ್‌ನ ಮಿಲಿಟರಿ ಸ್ಥಾನ ಹಾಗೂ ವಾಷಿಂಗ್ಟನ್ ಜತೆಗಿನ ಒಡನಾಟವೇ ಇರಾನ್ ಅನ್ನು ಎದುರಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿವೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಎಪಿಎಸ್ ಅಂತರ್ ಕಾಲೇಜು ಕ್ರಿಕೆಟ್ ಪಂದ್ಯಾವಳಿ: ಸೇಂಟ್ ಪಾಲ್ಸ್ ಕಾಲೇಜು ಚಾಂಪಿಯನ್

### ಎನ್.ಆರ್ ಕಾಲೋನಿಯ ಎಪಿಎಸ್ ಆರ್ಟ್ಸ್ ಅಂಡ್ ಸೈನ್ಸ್ ಕಾಲೇಜು ರನ್ನರ್ಸ್ ಅಪ್




ಬೆಂಗಳೂರು, ಅ.28: ಎಪಿಎಸ್ ಪಿಯು ಕಾಲೇಜು ಮತ್ತು ಎಪಿಎಸ್ ಪದವಿ ಕಾಲೇಜುಗಳ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಅಂತರ್ ಕಾಲೇಜು ಕ್ರಿಕೆಟ್ ಪಂದ್ಯಾವಳಿಯಲ್ಲಿ 20ಕ್ಕೂ ಹೆಚ್ಚು ಕಾಲೇಜು ತಂಡಗಳು ಅಮಿತೋತ್ಸಾಹದಿಂದ ಭಾಗವಹಿಸಿದ್ದವು. ಯುವ ಕ್ರಿಕೆಟಿಗರು ತಮ್ಮ ಅದ್ಭುತ ಪ್ರತಿಭೆ, ಅಚಲ ಆತ್ಮವಿಶ್ವಾಸ, ಶಿಸ್ತು, ಪರಿಶ್ರಮ, ತಂಡದ ಸಂಘಟಿತ ಪ್ರಯತ್ನ ಮತ್ತು ಅತ್ಯುತ್ತಮ ಕ್ರೀಡಾಸ್ಫೂರ್ತಿಯನ್ನು ಮೆರೆದರು.

ಪ್ರತಿಯೊಂದು ಪಂದ್ಯವೂ ತೀವ್ರ ಪೈಪೋಟಿಯಿಂದ ಕೂಡಿದ್ದು, ಆಟಗಾರರಲ್ಲಿನ ಸ್ಪರ್ಧಾತ್ಮಕ ಮನೋಭಾವ, ಪರಸ್ಪರ ಸಹಕಾರ ಮತ್ತು ಕ್ರಿಕೆಟ್ ಆಟದ ಮೇಲಿನ ಅಪಾರ ಪ್ರೀತಿಯನ್ನು ಪಂದ್ಯಾವಳಿ ಅನಾವರಣಗೊಳಿಸಿತು. ಅಂತಿಮ ಪಂದ್ಯ ಕೊನೆಯ ಎಸೆತದವರೆಗೂ ಕುತೂಹಲ ಕೆರಳಿಸಿ, ಅತ್ಯಂತ ರೋಚಕತೆಯಲ್ಲಿ ಮುಳುಗಿಸಿತು. ಅಂತಿಮವಾಗಿ ಸೇಂಟ್ ಪಾಲ್ಸ್ ಕಾಲೇಜು ಚಾಂಪಿಯನ್ ಚಾಂಪಿಯನ್ ಆಗಿ ಹೊರ ಹೊಮ್ಮಿದರೆ ಎನ್.ಆರ್ ಕಾಲೋನಿಯ ಎಪಿಎಸ್ ಆರ್ಟ್ಸ್ ಅಂಡ್ ಸೈನ್ಸ್ ಕಾಲೇಜು ರನ್ನರ್ ಅಪ್ ಪ್ರಶಸ್ತಿಗೆ ಭಾಜನವಾಯಿತು.

ವಿಜೇತ ತಂಡಗಳಿಗೆ ಎಪಿಎಸ್ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಸಿಎ ಡಾ. ವಿಷ್ಣುಭರತ್ ಆಲಂಪಲ್ಲಿ ಪ್ರಶಸ್ತಿ ಪ್ರದಾನ ಮಾಡಿ, ಕ್ರೀಡೆ ಎಂದರೆ ಕೇವಲ ಗೆಲುವಲ್ಲ. ಜೀವನದ ಮೌಲ್ಯಗಳನ್ನು ಕಲಿಸುವ ಪಾಠ. ಕ್ರಿಕೆಟ್ ಸ್ಪರ್ಧೆಯಾಗಿರದೆ, ಸ್ನೇಹ, ಸೌಹಾರ್ದ, ಆರೋಗ್ಯಕರ ಸ್ಪರ್ಧೆಗೆ ವೇದಿಕೆಯಾಗಿದೆ. ಪರಿಶ್ರಮ, ಸಹಕಾರ ಮತ್ತು ಯುವಜನರ ಉತ್ಸಾಹದ ಸೊಗಸಾದ ಸಂಭ್ರಮ ಎಂದು ವರ್ಣಿಸಿದರು.

ಈ ಸಂದರ್ಭದಲ್ಲಿ ಪ್ರೊ. ಎ. ಪ್ರಕಾಶ್, ಪಿ. ಕೃಷ್ಣಸ್ವಾಮಿ, ಪ್ರಾಂಶುಪಾಲೆ ರೇಣುಕಾ ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ

Karnataka union of working journalists



ನಮ್ಮನ್ನ ಅಗಲಿದ ಪತ್ರಕರ್ತರಾದ

ಶ್ರೀ ಬಂಡಿಗಡಿ ನಂಜುಂಡಪ್ಪ

ಶಿವಮೊಗ್ಗ

ಶ್ರೀ ಸಿ.ಆರ್.ವೆಂಕಟರಾವ್

ಚಾಮರಾಜನಗರ

ಇವರಿಗೆ

ನುಡಿ ನಮನ ಕಾರ್ಯಕ್ರಮ

ದಿನಾಂಕ : 29-10-2026

ಬೆಳಿಗ್ಗೆ: 11.15ಕ್ಕೆ

ಸ್ಥಳ: ಕೆಯುಡಬ್ಲ್ಯೂಜೆ ಸಭಾಂಗಣ ಕಂದಾಯ ಭವನ. ಕೆ.ಜಿ.ರಸ್ತೆ, ಬೆಂಗಳೂರು.

# ಪಶ್ಚಿಮ ಏಷ್ಯಾ ಸಂಘರ್ಷದ ವೇಳೆ 22 ಭಾರತೀಯರನ್ನು ಕಳೆದುಕೊಂಡಿದ್ದೇವೆ



ನವದೆಹಲಿ: ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ವೇಳೆ ಒಟ್ಟು 22 ಭಾರತೀಯರು ಮೃತಪಟ್ಟಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಬುಧವಾರ ತಿಳಿಸಿದೆ. 'ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಬಗ್ಗೆ ನಮ್ಮಲ್ಲಿ ತೀವ್ರ ಕಳವಳವಿದೆ. ನಾವು 14 ನಾವಿಕರು ಸೇರಿದಂತೆ 22 ಭಾರತೀಯರನ್ನು ಕಳೆದುಕೊಂಡಿದ್ದೇವೆ' ಎಂದು ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು ಮಾಧ್ಯಮದವರಿಗೆ ತಿಳಿಸಿದ್ದಾರೆ.

'ಕೊಲ್ಲಿ ಪ್ರದೇಶದಲ್ಲಿರುವ ಸಮುದಾಯದ ಜನರ ಸುರಕ್ಷತೆ ಹಾಗೂ ಯೋಗಕ್ಷೇಮದ ಸಲುವಾಗಿ ಅವರೊಂದಿಗೆ ನಿಕಟ ಸಂಪರ್ಕದಲ್ಲಿದ್ದೇವೆ. ಸೌದಿ ಅರೇಬಿಯಾದಲ್ಲಿ ಮೂವರು ಮೃತಪಟ್ಟಿದ್ದಾರೆ' ಎಂದಿದ್ದಾರೆ. ಅಮೆರಿಕ ಹಾಗೂ ಇಸ್ರೇಲ್ ಪಡೆಗಳು ಇದೇ ವರ್ಷ ಫೆಬ್ರುವರಿಯಲ್ಲಿ ಇರಾನ್ ಮೇಲೆ ಜಂಟಿ ದಾಳಿ ನಡೆಸಿದ್ದವು. ಇದರಿಂದ ಕೆರಳಿದ್ದ ಇರಾನ್, ಜಾಗತಿಕ ತೈಲ ಪೂರೈಕೆ ಪ್ರಮುಖ ಮಾರ್ಗವಾದ ಹಾರ್ಮುಜ್‌ನಲ್ಲಿ ಹಡಗು ಸಂಚಾರವನ್ನು ನಿರ್ಬಂಧಿಸಿತ್ತು. ಅಷ್ಟಲ್ಲದೆ, ಪ್ರತಿದಾಳಿ ನಡೆಸುವ ಜೊತೆಗೆ ಪಶ್ಚಿಮ ಏಷ್ಯಾದಲ್ಲಿರುವ ಅಮೆರಿಕದ ಸೇನಾ ನೆಲೆಗಳು, ಅಮೆರಿಕ–ಇಸ್ರೇಲ್‌ನ ಮಿತ್ರ ರಾಷ್ಟ್ರಗಳ ಮೇಲೂ ದಾಳಿ ನಡೆಸಿತ್ತು. ಅದರಿಂದಾಗಿ ಸಂಘರ್ಷ ತೀವ್ರ ಸ್ವರೂಪ ಪಡೆದುಕೊಂಡಿದೆ.

ಎಂಟು ತಿಂಗಳು ಕಳೆದರೂ ಸಂಘರ್ಷ ಮುಕ್ತಾಯವಾಗಿಲ್ಲ. ರಾಜತಾಂತ್ರಿಕತೆ ಹಾಗೂ ಮಾತುಕತೆ ಮೂಲಕ ಸಂಘರ್ಷ ಕೊನೆಗೊಳಿಸುವಂತೆ ಭಾರತ ಒತ್ತಾಯಿಸುತ್ತಿದೆ.



ಶ್ರೀ ಡಿ.ಕೆ. ಶಿವಕುಮಾರ್

ಸನ್ಮಾನ್ಯ ಮುಖ್ಯಮಂತ್ರಿಗಳು

ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ

## ಸಮಾಜ ಕಲ್ಯಾಣ ಇಲಾಖೆ



ಡಾ. ಜಿ. ಪರಮೇಶ್ವರ

ಮಾನ್ಯ ಉಪ ಮುಖ್ಯಮಂತ್ರಿಗಳು

ಕರ್ನಾಟಕ ಸರ್ಕಾರ

## ಪರಿಶಿಷ್ಟ ಜಾತಿಯವರ ಆರ್ಥಿಕ ಅಭಿವೃದ್ಧಿಗಾಗಿ ಕಲ್ಯಾಣ ಯೋಜನೆಗಳು

### 2026-27ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳಿಗೆ ಅರ್ಜಿ ಆಹ್ವಾನ

**ಉದ್ಯಮಶೀಲತಾ ಅಭಿವೃದ್ಧಿ ಯೋಜನೆ (ಬ್ಯಾಂಕ್ ಸಹಯೋಗದೊಂದಿಗೆ)**

1. ಸ್ವಾವಲಂಬಿ ಸಾರಥಿ: ಸರಕು ವಾಹನ/ಟ್ಯಾಕ್ಸಿ (ಹಳದಿ ಬೋರ್ಡ್) ಉದ್ದೇಶದಡಿ ಘಟಕ ವೆಚ್ಚದ ಶೇ.75 ರಷ್ಟು ಅಥವಾ ಗರಿಷ್ಠ ರೂ. 4.00 ಲಕ್ಷಗಳ ಸಹಾಯಧನ.
2. ಫಾಸ್ಟ್ ಫುಡ್ ಟ್ರಕ್ ಟ್ರೈಲರ್/ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್: (ಸಫಾಯಿ ಕರ್ಮಚಾರಿ ನಿಗಮ ಹೊರತುಪಡಿಸಿ) ಫುಡ್ ಕಾರ್ಟ್ ವಾಹನಗಳ ಉದ್ದೇಶದಡಿ ಘಟಕ ವೆಚ್ಚದ ಶೇ.75 ರಷ್ಟು ಅಥವಾ ಗರಿಷ್ಠ ರೂ. 4.00 ಲಕ್ಷಗಳ ಸಹಾಯಧನ.
3. ಹೈನುಗಾರಿಕೆ: (ಸಫಾಯಿ ಕರ್ಮಚಾರಿ ನಿಗಮ ಹೊರತುಪಡಿಸಿ) ಹೈನುಗಾರಿಕೆ ಕೈಗೊಳ್ಳಲು ಎರಡು ಎಮ್ಮೆ/ಹಸುಗಳಿಗೆ ಘಟಕ ವೆಚ್ಚದ ಶೇ.50ರಷ್ಟು ಅಥವಾ ಗರಿಷ್ಠ ರೂ. 1.25 ಲಕ್ಷಗಳ ಸಹಾಯಧನ.

4 ಇತರೆ ಉದ್ದೇಶ: ಸಣ್ಣ ಕೈಗಾರಿಕೆ, ಸೇವಾ ಕ್ಷೇತ್ರ, ವ್ಯಾಪಾರ ಮತ್ತು ಇತರೆ ಉದ್ದೇಶಗಳಿಗೆ ಘಟಕ ವೆಚ್ಚದ ಶೇ. 70 ರಷ್ಟು ಅಥವಾ ಗರಿಷ್ಠ ರೂ. 2.00 ಲಕ್ಷಗಳ ಸಹಾಯಧನ.

**ಸ್ವಯಂ ಉದ್ಯೋಗ ನೇರಸಾಲ ಯೋಜನೆಗಳು**

1. ನೇರಸಾಲ ಯೋಜನೆ: ಕಿರು ಆರ್ಥಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ನಿಗಮದಿಂದ ಸಹಾಯಧನ ಮತ್ತು ನೇರಸಾಲ ಮಂಜೂರು ಮಾಡಲಾಗುತ್ತದೆ. ಘಟಕ ವೆಚ್ಚ: ರೂ. 1.00 ಲಕ್ಷ, ಸಹಾಯಧನ: ರೂ. 50,000/– ಸಾಲ: ರೂ. 50,000/– (ಶೆ. 4 ರಷ್ಟು ಬಡ್ಡಿದರ).
2. ಕುರಿ ಸಾಕಾಣಿಕೆ ಯೋಜನೆ(ಸಫಾಯಿ ಕರ್ಮಚಾರಿ ನಿಗಮ ಹೊರತುಪಡಿಸಿ) : ಕುರಿ ಸಾಕಾಣಿಕೆ ಉದೇಶಕ್ಕೆ ನಿಗಮದಿಂದ ಸಹಾಯಧನ ಮತ್ತು ನೇರಸಾಲ ಮಂಜೂರು ಮಾಡಲಾಗುತ್ತದೆ. ಘಟಕ ವೆಚ್ಚ: ರೂ. 1.00 ಲಕ್ಷ, ಸಹಾಯಧನ: ರೂ. 50,000/– ಸಾಲ: ರೂ. 50,000/– (ಶೆ. 4 ರಷ್ಟು ಬಡ್ಡಿದರ)

**ಗಂಗಾ ಕಲ್ಯಾಣ ಯೋಜನೆ**

1.20 ಎಕರೆಯಿಂದ 5.00 ಎಕರೆ ಜಮೀನು ಹೊಂದಿರುವ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಕೊಳವೆಬಾವಿ ಕೊರೆದು ಪಂಪ್‌ಸೆಟ್ ಅಳವಡಿಸಿ, ವಿದ್ಯುದ್ದೀಕರಣದೊಂದಿಗೆ ನೀರಾವರಿ ಸೌಲಭ್ಯ ಒದಗಿಸಿಕೊಡಲಾಗುವುದು.

ಘಟಕ ವೆಚ್ಚ : ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಕೋಲಾರ ಮತ್ತು ತುಮಕೂರು ಜಿಲ್ಲೆಗಳಿಗೆ ರೂ. 4.75 ಲಕ್ಷಗಳು ಹಾಗೂ ಬಾಕಿ ಉಳಿದ ಜಿಲ್ಲೆಗಳಿಗೆ ರೂ. 3.75 ಲಕ್ಷಗಳು. ಇದರಲ್ಲಿ ರೂ. 50,000/– ಸಾಲವೂ ಸೇರಿರುತ್ತದೆ.

**ಭೂ ಒಡೆತನ ಯೋಜನೆ**

ಭೂರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಈ ಕೆಳಕಂಡ ಘಟಕ ವೆಚ್ಚದಲ್ಲಿ ಕೃಷಿ ಜಮೀನು ಖರೀದಿಸಿ ನೀಡಲಾಗುವುದು.

ಘಟಕ ವೆಚ್ಚ : ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ರೂ. 25.00 ಲಕ್ಷಗಳು ಮತ್ತು ಬಾಕಿ ಉಳಿದ ಜಿಲ್ಲೆಗಳಿಗೆ ರೂ. 20.00 ಲಕ್ಷಗಳು

ಸಹಾಯಧನ : ಶೇ. 50%

ಸಾಲ : ಶೇ. 50% (ಶೆ. 4 ರಷ್ಟು ಬಡ್ಡಿದರ)

**ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ**

ಮಹಿಳಾ ಸ್ವಸಹಾಯ ಸಂಘಗಳಿಗೆ (ಕನಿಷ್ಠ 10 ಸದಸ್ಯರು) ಕಿರು ಆರ್ಥಿಕ ಚಟುವಟಿಕೆಗಳಿಗೆ ಸಾಲ ಮತ್ತು ಸಹಾಯಧನ ಸೌಲಭ್ಯ ಒದಗಿಸಿಕೊಡಲಾಗುವುದು.

ಘಟಕ ವೆಚ್ಚ : ರೂ. 5.00 ಲಕ್ಷ

ಸಹಾಯಧನ : ರೂ. 2.50 ಲಕ್ಷ

ಸಾಲ : ರೂ. 2.50 ಲಕ್ಷ (ಶೆ. 4 ರಷ್ಟು ಬಡ್ಡಿದರ)

2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

https://sevaone.karnataka.gov.in/services/ ನಲ್ಲಿ ನೇರವಾಗಿ ಅಥವಾ ಕೆಳಕಂಡ ಸಂಸ್ಥೆಗಳ ಸಹಯೋಗದೊಂದಿಗೆ ಸಹಾ ಅರ್ಜಿ ಸಲ್ಲಿಸಬಹುದು.

KARNATAKA One · ಗ್ರಾಮ ಒನ್ · BANGALORE One



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ರವರು ಮಾನ್ಯ ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಶ್ರೀ ಕೆ.ಹೆಚ್. ಮುನಿಯಪ್ಪರವರನ್ನು ಅಭಿನಂದಿಸುತ್ತಿರುವುದು.

**ವಿಶೇಷ ಸೂಚನೆ:**
ನಿಗಮದ ನಿರ್ದೇಶಕ ಮಂಡಳಿ ವಿವೇಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹ ಸೇವಾಸಿಂಧು ಪೋರ್ಟಲ್ ಮೂಲಕವೇ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ವ್ಯವಸ್ಥಾಪಕರುಗಳ ಕಛೇರಿ ಅಥವಾ ನಿಗಮಗಳ ವೆಬ್‌ಸೈಟ್ ಅಥವಾ ಕಲ್ಯಾಣಮಿತ್ರ ಏಕೀಕೃತ ಎಸ್.ಸಿ / ಎಸ್.ಟಿ ಸಹಾಯವಾಣಿ 9482-300-400 ಸಂಪರ್ಕಿಸುವುದು.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 30-11-2026

ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ | ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ | ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

ವ್ಯವಸ್ಥಾಪಕ ನಿರ್ದೇಶಕರು ಎಲ್ಲ ನಿಗಮಗಳು | ಆಯುಕ್ತರು ಸಮಾಜ ಕಲ್ಯಾಣ ಇಲಾಖೆ | ಸರ್ಕಾರದ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ | ಮಾನ್ಯ ಅಧ್ಯಕ್ಷರುಗಳು ಎಲ್ಲ ನಿಗಮಗಳು